ಸಂಪುಟ: 14 Volume | ಸಂಚಿಕೆ: 83 Issue | ಪುಟಗಳು 08 Pages | ಶನಿವಾರ 04 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಮರದ ಮೇಲೆ ಕುಳಿತ ಹಕ್ಕಿಗೆ ಕೊಂಬೆ ಮುರಿದು ಬೀಳುವ ಭಯವಿರದು. ಅದು ನಂಬಿರುವುದು ತನ್ನ ರೆಕ್ಕೆಗಳನ್ನೇ ಹೊರತು ಕೊಂಬೆಯನ್ನಲ್ಲ.

–ಕುವೆಂಪು



ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಮತ್ತು ಅವರ ಪತ್ನಿ ಉಷಾ ಹಾಗೂ ಸಹೋದರ, ಬಮೂಲ್ ಅಧ್ಯಕ್ಷ ಡಿ ಕೆ ಸುರೇಶ್ ಅವರ ಜತೆ ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಸೌಜನ್ಯದ ಭೇಟಿ ಮಾಡಿದ್ದರು. ಉಪಾಹಾರದ ಜತೆ ಸಮಾಲೋಚನೆ ನಡೆಸಿದರು.



ಮಾಜಿ ಸಚಿವರಾದ ರಾಜಣ್ಣ, ಎಂ.ಆರ್. ಸೀತಾರಾಂ, ಶಾಸಕರಾದ ಪೊನ್ನಣ್ಣ, ಅಶೋಕ ಪಟ್ಟಣ, ಶಿವಣ್ಣ ಅವರು ಇಂದು ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

## ಸರ್ಕಾರಿ ಆಸ್ಪತ್ರೆಯಲ್ಲಿ ಪೋಲಿಯೋ



ಹಗರಿಬೊಮ್ಮನಹಳ್ಳಿ: ಹಗರಿಬೊಮ್ಮನಹಳ್ಳಿ ಸರ್ಕಾರಿ ಆಸ್ಪತ್ರೆಯಲ್ಲಿ ಐದು ವರ್ಷ ಒಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆ ಇಂದು ಹಾಕಲಾಯಿತು. ಈ ಸಂದರ್ಭದಲ್ಲಿ ಹಗರಿಬೊಮ್ಮನಹಳ್ಳಿ ಗೃಹರಕ್ಷಕ ದಳಘಟಕದ ಘಟಕ ಅಧಿಕಾರಿಯಾದ ಎಸ್ ಅನ್ವರ್ ಬಾಷಾ ಹಾಗೂ ಸಿಬ್ಬಂದಿಯಾದ ಬಿಎಂ ವಿದ್ಯಾಧರ ಟಿ ಬಸಪ್ಪ ಎಲ್ ಎಸ್ ಪ್ರವೀಣ್ ಕುಮಾರ್ ಬಿ ಜಾನಿ ಜೀಸಾನ್ ಭಾಷಾ ಹಾಜರಿದ್ದರು.



ರಾಜ್ಯಾದ್ಯಂತ ಜುಲೈ 29ರವರೆಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ ಮನೆ–ಮನೆ ಸಮೀಕ್ಷೆ ನಡೆಯುತ್ತಿದೆ. ಇಂದು ಚುನಾವಣಾ ಆಯೋಗದಿಂದ ನಿಯುಕ್ತರಾದ ಬೂತ್ ಮಟ್ಟದ ಅಧಿಕಾರಿಗಳಿಗೆ ಅಗತ್ಯ ದಾಖಲೆಗಳು ಹಾಗೂ ಮಾಹಿತಿಯನ್ನು ಸಲ್ಲಿಸಿ, ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಇಂದು ಶಿಗ್ಗಾವಿಯ ನಿವಾಸದಲ್ಲಿ ಕರ್ನಾಟಕ ಸರ್ಕಾರದ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ – ಗದಗ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಬಸವರಾಜ ಬೊಮ್ಮಾಯಿರವರು ಭಾಗವಹಿಸಿದರು.

## SIR: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಯಾದ್ಯಂತ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಕಾರ್ಯವು ಅತ್ಯಂತ ಚುರುಕಿನಿಂದ ಸಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಇಂದು ಬೀದರ ತಾಲೂಕಿನ ಹಮೀಲಾಪೂರ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಗ್ರಾಮದ ಮನೆಮನೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಸಾರ್ವಜನಿಕರಿಗೆ ಎನುಮರೇಷನ್ ಅರ್ಜಿ ನಮೂನೆಗಳನ್ನು ವಿತರಿಸುವ ಪ್ರಕ್ರಿಯೆಯನ್ನು ವೀಕ್ಷಿಸಿದ ಅವರು ಅರ್ಹ ನಾಗರಿಕರು ಮತದಾರರ ಪಟ್ಟಿಯಿಂದ ವಂಚಿತರಾಗಬಾರದು ಎಂಬ ನಿಟ್ಟಿನಲ್ಲಿ ಈ ಪರಿಶೀಲನೆ ನಡೆಸಲಾಗುತ್ತಿದ್ದು, ಪ್ರತಿಯೊಬ್ಬ ಅರ್ಹ ವ್ಯಕ್ತಿಯೂ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕೆಂದು ಅವರು ತಿಳಿಸಿದರು.

ಮತದಾರರ ಪಟ್ಟಿಯ ಪಾರದರ್ಶಕತೆ ಕಾಯ್ದುಕೊಳ್ಳುವುದು



ಮತ್ತು ಯಾವುದೇ ಲೋಪದೋಷಗಳಿಲ್ಲದೆ ನಿಖರವಾದ ಪಟ್ಟಿಯನ್ನು ಸಿದ್ಧಪಡಿಸುವುದು ಈ ವಿಶೇಷ ಸಮಗ್ರ ಪರಿಷ್ಕರಣೆಯ ಪ್ರಮುಖ ಉದ್ದೇಶವಾಗಿದೆ. ಸ್ಥಳದಲ್ಲಿದ್ದ ಅಧಿಕಾರಿಗಳು ಹಾಗೂ ಬಿಎಲ್‌ಒಗಳಿಗೆ ಕಾರ್ಯವನ್ನು ನಿಖರವಾಗಿ ಮತ್ತು ಜವಾಬ್ದಾರಿಯುತವಾಗಿ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವನಾಂದ ಕರಾಳೆ, ಸಹಾಯಕ ಆಯುಕ್ತ ಮಹಮ್ಮದ್ ಶಕೀಲ್ ಸೇರಿದಂತೆ ಚುನಾವಣಾ ಶಾಖೆಯ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಸದಸ್ಯರ ಸೌಹಾರ್ದ ಸಂಪರ್ಕ ಸಭೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಕಲಬುರ್ಗಿ ಪ್ರಾಂತದ ವತಿಯಿಂದ ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿಗಳ ಅಧ್ಯಕ್ಷರು/ಆಡಳಿತ ಮಂಡಳಿ ಸದಸ್ಯರುಗಳಿಗಾಗಿ ದಿನಾಂಕ 01.07.2026 ರಂದು ಸಾಮರ್ಥ್ಯ ತರಬೇತಿ ಕೇಂದ್ರ ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ನಿ., ಇದರ ಸಹಯೋಗದಿಂದ ಬೀದರನಲ್ಲಿ ಸಂಪರ್ಕ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಸಂಯುಕ್ತ ಸಹಕಾರಿಯ ಮಾನ್ಯ ಅಧ್ಯಕ್ಷರಾದ ಶ್ರೀ ಜಿ. ನಂಜನಗೌಡ ರವರು ನೆರವೇರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಯುಕ್ತ ಸಹಕಾರಿಯ ಮಾನ್ಯ ನಿರ್ದೇಶಕರಾದ ಶ್ರೀ ಗುರುನಾಥ ಜಾಂತಿಕರರವರು ವಹಿಸಿದ್ದರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಸಂಯುಕ್ತ ಸಹಕಾರಿಯ ಮಾನ್ಯ ನಿರ್ದೇಶಕರಾದ ಶ್ರೀಮತಿ ಶೈಲಜಾ ತಪಲಿ, ಶ್ರೀ ಜಿ.




ಶ್ರೀಧರ್, ಶ್ರೀ ಹೆಚ್. ಜೆ. ಹನುಮಂತಯ್ಯ ಶೆಟ್ಟಿ ಮತ್ತು ಮಾನ್ಯ ವೃತ್ತಿಪರ ನಿರ್ದೇಶಕರಾದ ಶ್ರೀ ಸಂಜೀವ ಮಹಾಜನ ರವರು ವೇದಿಕೆ ಮೇಲೆ ಉಪಸ್ಥಿತರಿದ್ದರು. ಸ್ವಾಗತ ಮತ್ತು ಪ್ರಾಸ್ತಾವಿಕ ನುಡಿಯನ್ನು ಮಾನ್ಯ ಪ್ರಾಂತೀಯ ಅಧಿಕಾರಿಗಳಾದ ಶ್ರೀ ಸಂಜಯ ಕೋರಟಕರ ರವರು ನೆರವೇರಿಸಿದರು. ಪ್ರಾರ್ಥನೆಯನ್ನು ಕು. ಭವಾನಿ ಹೊಸಮನಿ, ಇವರು ನಡೆಸಿಕೊಟ್ಟರು. ಈ ಸಂಪರ್ಕ ಸಭೆಯಲ್ಲಿ ಬೀದರ್ ಜಿಲ್ಲಾ ಸೌಹಾರ್ದ ಸಹಕಾರಿ ಒಕ್ಕೂಟದ ಆಡಳಿತ ಮಂಡಳಿ ಸದಸ್ಯರು ಹಾಗು 60 ಸೌಹಾರ್ದ ಸಹಕಾರಿಗಳಿಂದ 121 ಸಹಕಾರಿ ಪ್ರತಿನಿಧಿಗಳು ಭಾಗವಹಿಸಿದ್ದರು.

# ರೈತನ ನೆರವಿಗೆ ಆ್ಯಪ್..!

## ವಿಮೆ, ಪರಿಹಾರಕ್ಕೆ ಸಹಾಯ | 2026-27ರ ಬೆಳೆ ಸಮೀಕ್ಷೆಗೆ ಸರ್ಕಾರದ ಹೊಸ ಮಾರ್ಗಸೂಚಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬೆಳೆ ಸಮೀಕ್ಷೆ ಕಾರ್ಯಕ್ರಮದಡಿ ಬೆಳೆದ ಬೆಳೆಯನ್ನು ದಾಖಲಿಸಲು ರೈತರಿಗಾಗಿಯೇ ಮೊಬೈಲ್ ಯಾಪ್ ಬಿಡುಗಡೆ ಮಾಡಿರುವುದು ವಿಶೇಷವಾಗಿದೆ. ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಬಹುದಾಗಿದೆ . ಕರ್ನಾಟಕದಾದ್ಯಂತ ಮೊಬೈಲ್ ಅಪ್ಲಿಕೇಶನ್ ಬಳಸಿ ನಡೆಸಲಾಗುವ 2026–27ರ ಬೆಳೆ ಸಮೀಕ್ಷೆಗೆ ರಾಜ್ಯ ಸರ್ಕಾರ ಹೊಸ ಮಾರ್ಗಸೂಚಿಗಳನ್ನು ಹೊರಡಿಸಿದೆ.

**ಯೋಜನೆ ಅನುಷ್ಠಾನಕ್ಕೆ ಸಮೀಕ್ಷೆ:** ರೈತರು ಬೆಳೆ ವಿವರಗಳನ್ನು ಸ್ವಯಂ ವರದಿ ಮಾಡಬಹುದು, ಇದನ್ನು ಕಂದಾಯ ಅಧಿಕಾರಿಗಳು ಜಿಪಿಎಸ್ ಮತ್ತು ಉಪಗ್ರಹ ಚಿತ್ರಗಳನ್ನು ಬಳಸಿಕೊಂಡು ಪರಿಶೀಲಿಸಲಿದ್ದಾರೆ. ಬೆಳೆ ವಿಮೆ, ವಿಪತ್ತು ಪರಿಹಾರ ಮತ್ತು ಸರ್ಕಾರಿ ಯೋಜನೆಗಳ ಅನುಷ್ಠಾನಕ್ಕಾಗಿ ಸಮೀಕ್ಷೆಯ ಡೇಟಾವನ್ನು ಬಳಸಲಾಗುತ್ತದೆ.

**ಇದಕ್ಕೆ ನಿಬಂಧನೆಯೂ ಇದೆ:** ಮಳೆಯ ಕೊರತೆಯಿಂದಾಗಿ ರೈತರು ಬೆಳೆಗಳನ್ನು ಬಿತ್ತಲು ಸಾಧ್ಯವಾಗದೆ, ಅಥವಾ ನೈಸರ್ಗಿಕ ವಿಕೋಪಗಳಿಂದ ಬೆಳೆಗಳು ಹಾನಿಗೊಳಗಾದ ಪ್ರಕರಣಗಳನ್ನು ದಾಖಲಿಸಲು ಸರ್ಕಾರವು ನಿಬಂಧನೆಗಳನ್ನು ಸಹ ಒಳಗೊಂಡಿದೆ. ಈ ಮಾಹಿತಿಯು ಬೆಳೆ ವಿಮೆ, ಪರಿಹಾರ ಮತ್ತು ಇತರ ಸರ್ಕಾರಿ ಸಹಾಯವನ್ನು ಒದಗಿಸುವಲ್ಲಿ ಸಹಾಯ ಮಾಡುತ್ತದೆ ಎಂದು ಸರ್ಕಾರಿ ಆದೇಶ ಹೇಳುತ್ತದೆ.



### ಕ್ಷೇತ್ರ ಪರಿಶೀಲನೆ ಉಂಟು

ಜೂನ್ 30 ರಂದು ಸರ್ಕಾರಿ ಆದೇಶ ಹೊರಬಿದ್ದಿದೆ. ರೈತ ಬೆಳೆ ಸಮೀಕ್ಷೆ ಮೊಬೈಲ್ ಅಪ್ಲಿಕೇಶನ್ ಮೂಲಕ ಬೆಳೆ ವಿವರಗಳನ್ನು ಸ್ವಯಂ ವರದಿ ಮಾಡಲು ಅನುಮತಿ ಸಲಾಗುತ್ತದೆ. ರೈತರು ಮಾಹಿತಿಯನ್ನು ಅಪ್ಲೋಡ್ ಮಾಡಲು ವಿಫಲವಾದರೆ, ಅಧಿಕಾರಿಗಳು ಕ್ಷೇತ್ರ ಪರಿಶೀಲನೆ ನಡೆಸುತ್ತಾರೆ. ದತ್ತಾಂಶ ನಿಖರತೆಯನ್ನು ಸುಧಾರಿಸಲು ಸಮೀಕ್ಷೆಯು ಭೌಗೋಳಿಕ–ಉಲ್ಲೇಖಿತ ನಕ್ಷೆಗಳು ಮತ್ತು ಜಿಪಿಎಸ್ ನೆರವು ನೀಡಲಿದೆ.

### ದಾಖಲೆ ತಿದ್ದುಪಡಿಗೆ ಅಸ್ತು

ತಡೆಗಟ್ಟಲಾದ ಬಿತ್ತನೆ, ನೈಸರ್ಗಿಕ ವಿಕೋಪಗಳಿಂದ ಉಂಟಾಗುವ ಬೆಳೆ ನಷ್ಟ, ಕೊಯ್ಲು ನಂತರದ ನಷ್ಟ ದಾಖಲಿಸಲು ಆದೇಶವು ಅವಕಾಶ ನೀಡುತ್ತದೆ. ನಿಗದಿತ ಸಮಯದೊಳಗೆ ಬೆಳೆ ದಾಖಲೆಗಳಿಗೆ ತಿದ್ದುಪಡಿಗಳನ್ನು ಪಡೆಯಲು ರೈತರಿಗೆ ಅವಕಾಶ ಇದೆ. ಬೆಳೆ ಸಮೀಕ್ಷೆಯ ಡೇಟಾವನ್ನು ಬೆಳೆ ವಿಮೆ, ಒಖಕ ಸಂಗ್ರಹಣೆ, ವಿಪತ್ತು ಪರಿಹಾರ ಮತ್ತು ಇತರ ಕೃಷಿ ಸಂಬಂಧಿತ ಯೋಜನೆಗಳೊಂದಿಗೆ ಸಂಯೋಜಿಸಲಾಗುತ್ತದೆ.

### ವಿಮೆ ಕಂಪನಿ ಪಾತ್ರ..?

ಬೆಳೆ ಪ್ರಕರಣಗಳಿಗೆ 45 ದಿನಗಳಲ್ಲಿ ಪೂರ್ಣಗೊಳಿಸಬೇಕು. ವಿಮಾ ಕಂಪನಿಗಳು ಏಳು ದಿನಗಳಲ್ಲಿ ಪ್ರಸ್ತಾವನೆಗಳನ್ನು ಸ್ವೀಕರಿಸಬೇಕು ಅಥವಾ ತಿರಸ್ಕರಿಸಬೇಕು. 15 ದಿನಗಳಲ್ಲಿ ಅನುಮೋದಿತ ಹಕ್ಕುಗಳನ್ನು ಪ್ರಾರಂಭಿಸಬೇಕು. ಬಳಿಕ ಅದು 15 ದಿನಗಳಲ್ಲಿ ಪರಿಹಾರವನ್ನು ವಿತರಿಸುತ್ತದೆ. ತಿರಸ್ಕರಿಸಿದ ರೈತರು ನಿರಾಕರಣೆ ಪಟ್ಟಿಯ ಪ್ರಕಟಣೆಯ 15 ದಿನಗಳಲ್ಲಿ ದೂರುಗಳನ್ನು ಸಲ್ಲಿಸಬಹುದಾಗಿದೆ.

### ಬೆಳೆದ ಬೆಳೆಯ ಶಿಫಾರಸು

ಬೆಳೆ ಸಮೀಕ್ಷೆಯ ಛಾಯಾಚಿತ್ರಗಳಲ್ಲಿ ವಿಮೆ ಮಾಡಿಸಿದ ಬೆಳೆ ಗೋಚರಿಸುವ ಹಕ್ಕುಗಳನ್ನು ಅನುಮೋದನೆಗೆ ಶಿಫಾರಸು ಮಾಡಲಾಗುತ್ತದೆ. ಛಾಯಾಚಿತ್ರಗಳಲ್ಲಿ ಋತುಮಾನದ ಬೆಳೆಗಳು ಕಂಡುಬರದಿದ್ದರೆ, ಹಕ್ಕುಗಳನ್ನು ತಿರಸ್ಕರಿಸಲು ಶಿಫಾರಸು ಮಾಡಲಾಗುತ್ತದೆ. ದೀರ್ಘಕಾಲಿಕ ಬೆಳೆಗಳಿಗೆ, ಅಂತಿಮ ನಿರ್ಧಾರ ತೆಗೆದುಕೊಳ್ಳುವ ಮುನ್ನ ಮೊಬೈಲ್ ಅಪ್ಲಿಕೇಶನ್‌ನಿಂದ ಕ್ಷೇತ್ರ ಪರಿಶೀಲಿಸಲಾಗುದು ಎಂದು ಅದು ಹೇಳಿದೆ.

## ಕಲಬುರಗಿ ಜಿಲ್ಲೆಯನ್ನು ಬರಗಾಲ ಪೀಡಿತ ಪ್ರದೇಶವನ್ನಾಗಿ ಘೋಷಿಸಿ: ಬಾಲರಾಜ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜಿಲ್ಲೆಯಲ್ಲಿ ಮಳೆಯ ತೀವ್ರ ಕೊರತೆ ಎದುರಾಗಿದ್ದು, ರೈತರು, ಕೃಷಿ ಕಾರ್ಮಿಕರು ಗುಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಹೀಗಾಗಿ ಕಲಬುರಗಿ ಜಿಲ್ಲೆಯನ್ನು ಸರ್ಕಾರ ಬರಗಾಲ ಪೀಡಿತ ಪ್ರದೇಶವನ್ನಾಗಿ ಘೋಷಿಸಬೇಕು ಎಂದು ಕಲಬುರಗಿ ಜಿಲ್ಲಾ ಜೆಡಿಎಸ್ ಪಕ್ಷದ ಜಿಲ್ಲಾಧ್ಯಕ್ಷ ಬಾಲರಾಜ್ ಗುತ್ತೆದಾರ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಕಲಬುರಗಿ ಜಿಲ್ಲೆಯ ವಿವಿಧೆಡೆ ಓಡಾಡಿದ್ದು, ಹೆಚ್ಚಿನ ಪ್ರಮಾಣದಲ್ಲಿ ರೈತರು ಬಿತ್ತನೆ ನಡೆಸದೇ ಇರುವುದು ಮತ್ತು ಬಿತ್ತನೆ ನಡೆಸಿದರೂ ತೇವಾಂಶದ ಕೊರತೆಯಿಂದ ಬೀಜಗಳು ಮೊಳಕೆ ಬಾರದಿರುವುದು ಕಂಡಿದೆ ಎಂದರು. ಹೀಗಾಗಿ ಬರ ಪರಿಸ್ಥಿತಿ ಎದುರಾಗಿದ್ದು ಸರ್ಕಾರ ರೈತರ ನೆರವಿಗೆ ಧಾವಿಸಲು ವಿಶೇಷ ಪ್ಯಾಕೇಜ್ ಘೋಷಿಸಬೇಕು.



2025–26ನೇ ಸಾಲಿನ ಮುಂಗಾರು ಬೆಳೆಗಳ ಇಳುವರಿಯ ನಷ್ಟ ಆಧರಿಸಿ ಜಿಲ್ಲೆಗೆ 340 ಕೋಟಿ ವಿಮಾ ಪರಿಹಾರ ಧನವನ್ನು ಸರ್ಕಾರ ಬಾಕಿ ಇರಿಸಿಕೊಂಡಿದೆ. ಇದನ್ನು ತಕ್ಷಣ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು. ಮಳೆಯನ್ನೇ ನಂಬಿ ಕೃಷಿಯಲ್ಲಿ ತೊಡಗಿದ ರೈತರು ಸೋಚನೀಯ ಸ್ಥಿತಿ ಎದುರಿಸುತ್ತಿದ್ದಾರೆ. ಕೃಷಿ ಚಟುವಟಿಕೆಗಳು ಕ್ಷೀಣಿಸಿವೆ. ಬಿತ್ತನೆ ಸ್ಥಗಿತಗೊಂಡಿದೆ. ಮಳೆ ಸುರಿಯುವ ಆಶಾಭಾವದಿಂದ ಮುಂಗಾರಿನ ತೊಗರಿ, ಸೋಯಾ, ಹೆಸರು, ಉದ್ದು ಬಿತ್ತಿದ್ದ ರೈತರು, ಈಗ ಮಳೆಯಿಲ್ಲದೇ ಬೆಳೆಯೂ ಬಾರದೇ ನಷ್ಟದ ಮೇಲೆ ನಷ್ಟ ಅನುಭವಿಸಿದ್ದಾರೆ ಎಂದರು. ಜಿಲ್ಲೆಯಲ್ಲಿ ಈವರೆಗೆ 115 ಮಿ.ಮೀ ಮಳೆ ಸುರಿಯಬೇಕಿತ್ತು ಆದರೆ ಕೇವಲ 70 ಮಿ.ಮೀ ಮಳೆ ಮಾತ್ರ ಸುರಿದಿದೆ. ಶೇ 39ರಷ್ಟು ಮಳೆ ಕೊರತೆ ಎದುರಾಗಿದೆ ಎಂದರು.

## ಚಂಡರಿಕಿ ಆರೋಗ್ಯ ಕೇಂದ್ರಕ್ಕೆ ಅನಾರೋಗ್ಯ..!

• ಜಗದೀಶ್‌ಕುಮಾರ್ ಭೂಮ, ಗುರುಮಠಕಲ್

ತಾಲೂಕಿನ ಚಂಡರಿಕಿ ಗ್ರಾಮದ ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಆರೋಗ್ಯ ಮತ್ತು ಕ್ಷೇಮ ಕೇಂದ್ರ ಸುಮಾರು 50 ವರ್ಷಗಳಷ್ಟು ಹಳೆಯ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ. ಇದು ಶಿಥಿಲಾವಸ್ಥೆಯಲ್ಲಿದ್ದುದರಿಂದ ಸಾರ್ವಜನಿಕರಲ್ಲಿ ಆತಂಕ ಮನೆ ಮಾಡಿದೆ. ಕಟ್ಟಡದ ಮೇಲ್ಛಾವಣಿ ಉದುರುತ್ತಿದ್ದು, ಕಬ್ಬಿಣದ ಸರಳುಗಳು ಹೊರಬಂದಿವೆ. ಯಾವುದೇ ಕ್ಷಣದಲ್ಲಿ ಮೇಲ್ಛಾವಣಿಯ ಭಾಗ ಕುಸಿಯುವ ಭೀತಿ ಎದುರಾಗಿದ್ದು, ಚಿಕಿತ್ಸೆಗಾಗಿ ಬರುವ ರೋಗಿಗಳು ಹಾಗೂ ಸಿಬ್ಬಂದಿ ಜೀವಭಯದಲ್ಲೇ ಕಾರ್ಯನಿರ್ವಹಿಸುವಂತಾಗಿದೆ.

**ಶಿಥಿಲ ಕಟ್ಟಡದಲ್ಲೇ ಜನರಿಗೆ ಚಿಕಿತ್ಸೆ**

**ಸಾರ್ವಜನಿಕರ ಆಕ್ರೋಶ:** ಮಳೆಗಾಲದಲ್ಲಿ ಕಟ್ಟಡದ ಹಲವು ಕಡೆಗಳಿಂದ ನೀರು ಸೋರುತ್ತಿದ್ದು, ಗೋಡೆಗಳು ಹಾಳಾಗಿವೆ. ಶೌಚಾಲಯ ಸೇರಿದಂತೆ ಮೂಲಭೂತ ಸೌಲಭ್ಯಗಳೂ ದುರಸ್ತಿಯಾಗದೇ ಉಳಿದಿವೆ. ಈ ಕುರಿತು ಹಲವು ಬಾರಿ ಮೇಲಾಧಿಕಾರಿಗಳ ಗಮನಕ್ಕೆ ತಂದಿದ್ದರೂ ಇದುವರೆಗೆ ಯಾವುದೇ ಕ್ರಮ ಕೈಗೊಳ್ಳದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

**ಸಮರ್ಪಕ ಔಷಧ ಪೂರೈಕೆ?:** ಆರೋಗ್ಯ ಕೇಂದ್ರದಲ್ಲಿ ಅಗತ್ಯ ಔಷಧಿಗಳ ಕೊರತೆಯೂ ತೀವ್ರವಾಗಿದೆ. ಕೆಲವೇ ಔಷಧಿಗಳು ಸೀಮಿತ ಪ್ರಮಾಣದಲ್ಲಿ ಲಭ್ಯವಿರುವುದರಿಂದ ಗ್ರಾಮೀಣ ಭಾಗದ ರೋಗಿಗಳು ಸಂಕಷ್ಟ ಅನುಭವಿಸುತ್ತಿದ್ದಾರೆ. ಮಳೆಗಾಲದಲ್ಲಿ ಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಮರ್ಪಕ ಔಷಧ ಪೂರೈಕೆ ಹಾಗೂ ಆರೋಗ್ಯ ಸೇವೆ ಒದಗಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ.




**ಪಂಚಾಯಿತಿ ಫಜೀತಿ**



### ಮುಖ್ಯಮಂತ್ರಿಗಳಿಗೆ ವಿನಮ್ರ ಮನವಿ

ಗ್ರಾಮೀಣ ಆರೋಗ್ಯ ಕೇಂದ್ರಗಳ ಶಿಥಿಲ ಕಟ್ಟಡಗಳ ಸ್ಥಿತಿಯನ್ನು ರಾಜ್ಯ ಸರ್ಕಾರ ತಕ್ಷಣ ಪರಿಶೀಲಿಸಿ, ಅಗತ್ಯವಿರುವ ಕಡೆಗಳಲ್ಲಿ ದುರಸ್ತಿ ಅಥವಾ ನೂತನ ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು. ಜೊತೆಗೆ ಎಲ್ಲ ಆರೋಗ್ಯ ಕೇಂದ್ರಗಳಿಗೆ ಸಮರ್ಪಕ ಔಷಧ ಮೂಲಸೌಲಭ್ಯ ಹಾಗೂ ಸುರಕ್ಷಿತ ವಾತಾವರಣ ಕಲ್ಪಿಸಿ ಗ್ರಾಮೀಣ ಜನರ ಆರೋಗ್ಯ ರಕ್ಷಣೆಗೆ ಆದ್ಯತೆ ನೀಡುವಂತೆ ಮುಖ್ಯಮಂತ್ರಿ ಹಾಗೂ ತಾಲೂಕ ಆರೋಗ್ಯ ಅಧಿಕಾರಿ ಜನ ಪ್ರತಿನಿಧಿಗಳಿಗೆ ಗ್ರಾಮದ ಹರ್ಷವರ್ಧನ ರೆಡ್ಡಿ ಉಲ್ಲಿ , ಮಾಧವರೆಡ್ಡಿ ಉಲ್ಲಿ ಶ್ರೀನಿವಾಸ್ ಸೇರಿದಂತೆ ಮನವಿ ಮಾಡಿದ್ದಾರೆ.

ಮೇಲಾಧಿಕಾರಿಗಳ ಗಮನಕ್ಕೆ ಕಟ್ಟಡದ ಸ್ಥಿತಿ ಕುರಿತು ಗಮನಕ್ಕೆ ತಂದಿರುವೆ. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೂ ಶೌಚಾಲಯದ ದುರಸ್ತಿ ಕುರಿತು ಮನವಿ ನೀಡಿದ್ದೇವೆ. ನಮಗೆ ಬಂದಷ್ಟು ಔಷಧಗಳನ್ನು ನಾವು ನೀಡುತ್ತಿದ್ದೇವೆ. ಇನ್ನು ಹೆಚ್ಚಿನ ಔಷಧಗಳು ನಮಗೆ ಸರಬರಾಜು ಆದಲ್ಲಿ ಅನುಕೂಲ ಆಗುತ್ತೆ. ಜನರ ಸೇವೆಯೇ ನಮ್ಮ ಮೊದಲ ಗುರಿ. ಇದಕ್ಕೆ ಸಹಕಾರ ಬೇಕು ಅಷ್ಟೇ..!

–ಮೌನೇಶ್ ಜಿ.
ಸಮುದಾಯ ಆರೋಗ್ಯ ಜಿಲ್ಲಾ ಆರೋಗ್ಯ ಅಧಿಕಾರಿ

## ISI ಮಾಜಿ ಅಧಿಕಾರಿ ಸೇರಿ ಪಾಕಿಸ್ತಾನದ ನಾಲ್ವರೊಂದಿಗೆ ರಾಮ್ ಮಾಧವ್ ನಾಲ್ಕು ರಹಸ್ಯ ಸಭೆ ನಡೆಸಿದ್ದಾರೆ: ಬಿ.ಕೆ. ಹರಿಪ್ರಸಾದ್

## ಸರಕಾರಿ ಅಧಿಕಾರಿಗಳು ಬಡವರ ಬಗ್ಗೆ ಉತ್ತಮ ಕಾಳಜಿ ಹೊಂದಬೇಕು

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರಕಾರದ ಯೋಜನೆಗಳು ಮತ್ತು ಸೇವೆಗಳು ಸಮಾಜದ ಪ್ರತಿಯೊಬ್ಬ ನಾಗರಿಕನಿಗೂ ಸಮಾನವಾಗಿ ತಲುಪಬೇಕು. ಅದರಲ್ಲೂ ಆರ್ಥಿಕವಾಗಿ ಹಿಂದುಳಿದ ಬಡವರು, ರೈತರು, ಕಾರ್ಮಿಕರು, ವೃದ್ಧರು ಹಾಗೂ ನಿರ್ಗತಿಕರ ಸಮಸ್ಯೆಗಳಿಗೆ ಸ್ಪಂದಿಸುವುದು ಸರಕಾರಿ ಅಧಿಕಾರಿಗಳ ಪ್ರಮುಖ ಕರ್ತವ್ಯವಾಗಿದೆ. ಅಧಿಕಾರವು ಜನಸೇವೆಗೆ ಎಂಬ ಮನೋಭಾವದಿಂದ ಕೆಲಸ ಮಾಡಿದಾಗ ಮಾತ್ರ ಆಡಳಿತದ ಮೇಲೆ ಜನರ ವಿಶ್ವಾಸ ಹೆಚ್ಚುತ್ತದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಸರ್ಕಾರಿ ಕಚೇರಿಗಳಿಗೆ ಬರುವ ಅನೇಕ ಬಡ ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ದಿನಗಟ್ಟಲೆ ಅಲೆದಾಡುವ ಪರಿಸ್ಥಿತಿ ಇನ್ನೂ ಹಲವೆಡೆ ಕಂಡುಬರುತ್ತಿದೆ. ಅರ್ಜಿಗಳ ವಿಲೇವಾರಿಯಲ್ಲಿ ವಿಳಂಬ, ನಿರ್ಲಕ್ಷ್ಯ ಹಾಗೂ ಅಸಡ್ಡೆಯ ವರ್ತನೆ ಬಡವರ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸುತ್ತದೆ. ಆದ್ದರಿಂದ ಅಧಿಕಾರಿಗಳು ಮಾನವೀಯತೆ, ಸಹಾನುಭೂತಿ ಮತ್ತು ಜವಾಬ್ದಾರಿಯಿಂದ ಸಾರ್ವಜನಿಕರೊಂದಿಗೆ ವರ್ತಿಸಬೇಕು.

ಸರ್ಕಾರದ ವಿವಿಧ ಕಲ್ಯಾಣ ಯೋಜನೆಗಳ ನಿಜವಾದ ಫಲಾನುಭವಿಗಳು ಬಡವರೇ ಆಗಿರುವುದರಿಂದ, ಅವರಿಗೆ ಅರ್ಹ ಸೌಲಭ್ಯಗಳನ್ನು ಯಾವುದೇ ತೊಂದರೆಯಿಲ್ಲದೆ ತಲುಪಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ. ಪ್ರತಿಯೊಂದು ಅರ್ಜಿಯನ್ನು ಸಮಯಕ್ಕೆ ಸರಿಯಾಗಿ ವಿಲೇವಾರಿ ಮಾಡಿ, ಜನರ ಸಮಸ್ಯೆಗಳನ್ನು ಆಲಿಸಿ ಪರಿಹರಿಸುವ ಕೆಲಸಕ್ಕೆ ಆದ್ಯತೆ ನೀಡಬೇಕು.

ಜನಸೇವೆ ಎಂಬುದು ಕೇವಲ ಉದ್ಯೋಗವಲ್ಲ, ಅದು ಒಂದು ಸಾಮಾಜಿಕ ಹೊಣೆಗಾರಿಕೆ. ಬಡವರ ಕಣ್ಣೀರನ್ನು ಒರೆಸುವ ಕೆಲಸ ಮಾಡಿದ ಅಧಿಕಾರಿಗಳೇ ಜನಮನದಲ್ಲಿ ಶಾಶ್ವತ ಸ್ಥಾನ ಪಡೆಯುತ್ತಾರೆ. ಆದ್ದರಿಂದ ಎಲ್ಲಾ ಸರಕಾರಿ ಅಧಿಕಾರಿಗಳು ಬಡವರ ಬಗ್ಗೆ ಉತ್ತಮ ಕಾಳಜಿ, ಸ್ಪಂದನೆ ಮತ್ತು ಸೇವಾ ಮನೋಭಾವ ಬೆಳೆಸಿಕೊಂಡು ಕಾರ್ಯನಿರ್ವಹಿಸಿದಾಗ ಮಾತ್ರ ಉತ್ತಮ ಆಡಳಿತದ ಗುರಿ ಸಾಕಾರವಾಗಲಿದೆ.

## ಮೈಲೂರು ಮೆಟ್ರಿಕ್ ಬಾಲಕಿಯರ ವಸತಿ ನಿಲಯ ಸ್ಥಳಾಂತರಕ್ಕೆ ವಿರೋಧ



**ಬೀದರ್:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನಗರದ ಮೈಲೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯವನ್ನು ಘೋಡಂಪಳ್ಳಿಗೆ ಸ್ಥಳಾಂತರಿಸುವ ಪ್ರಕ್ರಿಯೆಯನ್ನು ತಕ್ಷಣವೇ ಕೈಬಿಡುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಮುಖಂಡರು ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ.

ಘೋಡಂಪಳ್ಳಿ ಗ್ರಾಮವು ಬೀದರ್ ನಗರದಿಂದ ಸುಮಾರು 15 ಕಿಲೋಮೀಟರ್ ದೂರದಲ್ಲಿದ್ದು, ಸಮರ್ಪಕ ಸಾರಿಗೆ ಸಂಪರ್ಕವಿಲ್ಲದ ನಿರ್ಜನ ಪ್ರದೇಶವಾಗಿದೆ. ಅಲ್ಲದೆ, ತೆಲಂಗಾಣ ಗಡಿಭಾಗ, ಅರಣ್ಯ ಪ್ರದೇಶ ಹಾಗೂ ಸ್ಮಶಾನದ ಸಮೀಪ ಇರುವುದರಿಂದ ವಿದ್ಯಾರ್ಥಿನಿಯರ ಸುರಕ್ಷತೆ ದೃಷ್ಟಿಯಿಂದ ವಸತಿ ನಿಲಯ ಸ್ಥಳಾಂತರ ಸೂಕ್ತವಲ್ಲ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಘೋಡಂಪಳ್ಳಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಾತ್ರ ಕಾರ್ಯನಿರ್ವಹಿಸುತ್ತಿದ್ದು, ಅಲ್ಲಿನ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಬಾಲಕಿಯರ ವಸತಿ ನಿಲಯವನ್ನು ಅಲ್ಲಿಗೆ ಸ್ಥಳಾಂತರಿಸುವುದು ವಿದ್ಯಾರ್ಥಿನಿಯರ ಶಿಕ್ಷಣ ಹಾಗೂ ಭದ್ರತೆಗೆ ಧಕ್ಕೆಯಾಗಲಿದೆ ಎಂದು ಸಂಘಟನೆಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಈಗಾಗಲೇ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಲೋಕಸಭಾ ಸದಸ್ಯರು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಲಾಗಿದೆ. ಜನಸ್ಪಂದನ ಸಭೆಯಲ್ಲಿಯೂ ವಿಷಯ ಪ್ರಸ್ತಾಪಿಸಲಾಗಿತ್ತು.

ಇದೇ ವೇಳೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಘೋಡಂಪಳ್ಳಿಯ ನಿಗದಿತ ಕಟ್ಟಡಕ್ಕೆ ಭೇಟಿ ನೀಡಿ ಅಸಮಾಧಾನ ವ್ಯಕ್ತಪಡಿಸಿದ್ದು, ಬಾಲಕಿಯರ ವಸತಿ ನಿಲಯ ನಡೆಸಲು ಆ ಸ್ಥಳ ಸೂಕ್ತವಲ್ಲ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದರು ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಪ್ರಸ್ತುತ, ಆಯುಕ್ತರ ಮುಂದಿನ ನಿರ್ದೇಶನದವರೆಗೆ ಮೈಲೂರು ವಸತಿ ನಿಲಯವನ್ನು ಸ್ಥಳಾಂತರಿಸುವ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ತಿಳಿಸಿದೆ.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಸಂಚಾಲಕರಾದ ಧನರಾಜ ಮುಸ್ತಾಪೂರ, ಜಿಲ್ಲಾ ಸಹ ಸಂಚಾಲಲಕ ವಿಜಯಕುಮಾರ ಐಹೊಳೆ, ಜೈಪ್ರಕಾಶ ಅಷ್ಟೂರೆ, ಹಾಗೂ ಸಮಾಜ ಸೇವಕ ಬಸವರಾಜ ಭಾವಿದೊಡ್ಡಿ ಅವರು ವಿದ್ಯಾರ್ಥಿನಿಯರ ಹಿತದೃಷ್ಟಿಯಿಂದ ಮೈಲೂರು ವಸತಿ ನಿಲಯವನ್ನು ಬೀದರ್ ನಗರದಲ್ಲಿಯೇ ಮುಂದುವರಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಮನವಿ ಸಲ್ಲಿಸಿದ್ದಾರೆ.

# ಎಸ್‌ಐಆರ್ ಕುರಿತು ವಿದ್ಯಾರ್ಥಿಗಳಿಂದ ಜನಜಾಗೃತಿ





• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಜಿಲ್ಲಾಡಳಿತ, ಸ್ವೀಪ್ ಸಮಿತಿ ಹಾಗೂ ವಿವಿಧ ಕಾಲೇಜುಗಳ ಚುನಾವಣಾ ಸಾಕ್ಷರತಾ ಸಂಘಗಳ ಸಹಯೋಗದಲ್ಲಿ ಬೀದರ್ ನಗರದಲ್ಲಿ ಸ್ವೀಪ್ ಅಭಿಯಾನ ಎಸ್‌ಐಆರ್ ಜಾಗೃತಿಗಾಗಿ ವಿದ್ಯಾರ್ಥಿಗಳಿಂದ ಜನಜಾಗೃತಿ ಜಾಥಾ ನಡೆಯಿತು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಹಿನ್ನೆಲೆ ಕೇಂದ್ರೀಕರಿಸಿದ ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಚುನಾವಣಾ ಭಾಗವಹಿಸುವಿಕೆ ಅಭಿಯಾನದ ಭಾಗವಾಗಿ ನಗರದ 10 ವಿವಿಧ ಭಾಗಗಳಿಂದ ವಿದ್ಯಾರ್ಥಿಗಳು ಹಾಗು ಯುವಕರಿಂದ ಪಾದಯಾತ್ರೆಯಲ್ಲಿ ದಾರಿಯುದ್ದಕ್ಕೂ ಮನೆ ಮನೆಗಳಿಗೆ ಹಾಗೂ ಅಂಗಡಿ ಮುಂಗಟ್ಟುಗಳಿಗೆ ಭೇಟಿ ನೀಡಿ ಕರಪತ್ರ ಗಳನ್ನು ವಿತರಿಸಲಾಯಿತು. ನಂತರ ಎಲ್ಲಾ ದಿಕ್ಕುಗಳಿಂದ ಬಂದ ವಿದ್ಯಾರ್ಥಿಗಳು ಅಂಬೇಡ್ಕರ್ ವೃತ್ತದಲ್ಲಿ ಸೇರಿ ಅಲ್ಲಿಂದ ನೆಹರೂ ಕ್ರೀಡಾಂಗಣದವರೆಗೆ ಮೆರವಣಿಗೆ ನಡೆಸಿ ಜಾಗೃತಿ ಮೂಡಿಸಿದರು.

ನೆಹರೂ ಕ್ರೀಡಾಂಗಣದಲ್ಲಿ ಮಾತನಾಡಿದ ಜಿಪಂ ಸಿಇಒ ಡಾ. ಗಿರೀಶ್ ಬದೋಲೆ ಅವರು, ಅರ್ಹ ಮತದಾರರನ್ನು ಸೇರಿಸಲು, ಮೃತ ಅಥವಾ ಸ್ಥಳಾಂತರಗೊಂಡ ಮತದಾರರನ್ನು ಅಳಿಸಲು ಮತ್ತು ಮತದಾರರ ಪಟ್ಟಿಯ ಲ್ಲಿನ ನಮೂದುಗಳನ್ನು ಸರಿಪಡಿಸಲು ಎಸ್‌ಐಆರ್ ಒಂದು ಪ್ರಮುಖ ಪ್ರಕ್ರಿಯೆ ಯಾಗಿದೆ ಎಂದು ಹೇಳಿದರು.

ಎಸ್‌ಐಆರ್ ಸ್ವಚ್ಛ ಮತದಾರರ ಪಟ್ಟಿಯ ಅಡಿಪಾಯವಾಗಿದೆ. ಪ್ರತಿ ಯೊಬ್ಬ ಅರ್ಹ ಯುವಕರು ನೋಂದಾಯಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಹೇಳಿದರು. ಮತದಾರರ ಪಟ್ಟಿಯ ನಿಖರತೆ ಮತ್ತು ಪ್ರಜಾಪ್ರಭುತ್ವ ಭಾಗವಹಿಸುವಿಕೆಯ ನಡುವಿನ ಸಂಬಂಧವನ್ನು ಇದೇ ವೇಳೆ ಅವರು ತಿಳಿಸಿದರು.

ಜಾಗೃತಿ ಜಾಥಾದಲ್ಲಿ ಜಿಪಂ ಸಿಇಒ ಡಾ. ಗಿರೀಶ್ ಬದೋಲೆ, ಸ್ವೀಪ್ ನೋಡಲ್ ಅಧಿಕಾರಿ ಗೌತಮ್ ಅರಳಿ, ಬೀದರ್ ತಾಪಂ ಇಒ ಮಾಣಿಕರಾವ್ ಪಾಟೀಲ್, ಎಎಸ್ಪಿ ಚಂದ್ರಕಾಂತ್ ಪೂಜಾರಿ, ಡಿಡಿಪಿಯು ಚಂದ್ರಕಾಂತ ಶಹಬಾದಕರ್, ಶಾಹೀನ್ ಕಾಲೇಜು ಸಂಸ್ಥಾಪಕ ಅಧ್ಯಕ್ಷ ಡಾ. ಅಬ್ದುಲ್ ಖದೀರ್, ವಿಸ್ಡಂ ಸಂಸ್ಥೆಯ ಅಧ್ಯಕ್ಷ ಮುಹಮ್ಮದ್ ಆಸೀಫೋದ್ದಿನ್ ಹಾಗೂ ವಿವಿಧ ಕಾಲೇಜುಗಳ ಸಿಬ್ಬಂದಿ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ರ್ಯಾಲಿಯಲ್ಲಿ ಶಾಹೀನ್ ಕಾಲೇಜು, ಆಲ್ ಅನ್ ಕಾಲೇಜು, ವಿಸ್ಡಂ ಕಾಲೇಜು, ಕೇಂಬ್ರಿಡ್ಜ್ ಕಾಲೇಜು, ಸರಕಾರಿ ಪಿಯು ಕಾಲೇಜು, ಡೈಮಂಡ್ ಕಾಲೇಜು, ಸಿದ್ಧಿ ವಿನಾಯಕ ಕಾಲೇಜು, ಮಾತಾ ಮಾಣಿಕೇಶ್ವರಿ ಕಾಲೇಜು, ಸಾಯಿ ಸ್ಫೂರ್ತಿ ಕಾಲೇಜು, ಕರ್ನಾಟಕ ಕಾಲೇಜು, ಎನ್ ಎಫ್‌ಎಚ್‌ಎಸ್ ಕಾಲೇಜು, ಸಿದ್ದಾರ್ಥ ಕಾಲೇಜು ಸೇರಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಸಿಬ್ಬಂದಿ ಪಾಲ್ಗೊಂಡಿದ್ದರು.

# ಪಟ್ಟದ್ದೇವರ ನಿರ್ಗತಿಕರ ಸೇವೆ ಮಾದರಿ ಕಾರ್ಯ: ಸಂಸದ ಶೆಟಕಾರ್

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**



ಸಮಾಜಕ್ಕೆ, ಹೆತ್ತವರಿಗೆ ಬೇಡವಾದ ನಿರ್ಗತಿಕರ ಪಾಲನೆ, ಪೋಷಣೆ ಜೊತೆಗೆ ಗುಣಮಟ್ಟದ ಶಿಕ್ಷಣ ಧಾರೆ ಎರೆಯುತ್ತಿರುವ ಬಸವಲಿಂಗ ಪಟ್ಟದ್ದೇವರ ಕಾರ್ಯ ಅತ್ಯಂತ ಮಾನವೀಯ, ಮಾದರಿ ಕೆಲಸವಾಗಿದೆ ಎಂದು ಜಹೀರಾಬಾದ್ ಸಂಸದ ಸುರೇಶ ಶೆಟಕಾರ್ ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಪಬ್ಲಿಕ್ ಶಾಲೆಯ ನೂತನ ಕಟ್ಟಡದ ಪೂಜಾ ಕಾರ್ಯಕ್ರಮದಲ್ಲಿ ವಿಶ್ವಗುರು ಬಸವಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಪಟ್ಟದ್ದೇವರು ಸ್ಥಾಪಿಸಿರುವ ಗುರುಕುಲ ಶಿಕ್ಷಣ ಸಂಸ್ಥೆಯಲ್ಲಿ ಗುಣಾತ್ಮಕ ಶಿಕ್ಷಣ ಪಡೆದ ಸಾವಿರಾರು ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆದು ಸಮಾಜದಲ್ಲಿ ವೈದ್ಯರಾಗಿ, ಎಂಜಿನಿಯರಾಗಿ ಸೇವೆ ಸಲ್ಲಿಸುತ್ತಿರುವುದು ರಾಷ್ಟಕ್ಕೆ ನೀಡುತ್ತಿರುವ ಬಹುದೊಡ್ಡ ಕೊಡುಗೆ ಆಗಿದೆ ಎಂದು ತಿಳಿಸಿದರು. ಗುರುಕುಲ ಸಂಸ್ಥೆ ಗುಣಮಟ್ಟದ ಶಿಕ್ಷಣಕ್ಕೆ ಪ್ರಸಿದ್ಧಿ ಪಡೆದಿರುವುದರಿಂದ ವಿವಿಧ ರಾಜ್ಯಗಳಿಂದ ವಿದ್ಯಾರ್ಥಿಗಳು ಶಿಕ್ಷಣ ಪಡೆಯಲು ಇಲ್ಲಿಗೆ ಆಗಮಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು. ಬಸವಲಿಂಗ ಪಟ್ಟದ್ದೇವರು ತೆಲಂಗಾಣ, ಆಂಧ್ರಪ್ರದೇಶದಲ್ಲಿ ಬಸವತತ್ವದ ಬೀಜವನ್ನು ಬಿತ್ತಿ ಬೆಳೆಸುತ್ತಿರುವುದು ಮಹತ್ತರ ಕಾರ್ಯವಾಗಿದೆ. ಅವರ ಎಲ್ಲ ಕಾರ್ಯಗಳಿಗೆ ಸಂಪೂರ್ಣ ಸಹಾಯ, ಸಹಕಾರ ನೀಡುವುದಾಗಿ ತಿಳಿಸಿದರು.

ಸಾನ್ನಿಧ್ಯ ವಹಿಸಿ ಮಾತನಾಡಿದ ಬಸವಲಿಂಗ ಪಟ್ಟದ್ದೇವರು, ಚನ್ನಬಸವ ಪಟ್ಟದ್ದೇವರ ಆಶೀರ್ವಾದ, ಕೃಪೆಯಿಂದ ಕೇವಲ ಇಬ್ಬರು ಶಿಕ್ಷಕರು 40 ವಿದ್ಯಾರ್ಥಿಗಳಿಂದ ಆರಂಭಗೊಂಡ ಶಿಕ್ಷಣ ಸಂಸ್ಥೆ ಇಂದು ಹೆಮ್ಮರವಾಗಿ ಬೆಳೆದಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಂಸ್ಥೆ ವತಿಯಿಂದ ಸಂಸದ ಸುರೇಶ ಶೆಟಕಾರ್ ದಂಪತಿಯನ್ನು ಪೂಜ್ಯರು ಸನ್ಮಾನಿಸಿದರು.

ಮಹಾಲಿಂಗ ಸ್ವಾಮೀಜಿ, ಬಸವಲಿಂಗ ಸ್ವಾಮೀಜಿ, ನಾರಾಯಣಖೇಡ ಮುನ್ಸಿಪಲ್ ಚೇರ್ಮನ್ ನಾಗೇಶ ಶೆಟಕಾರ್, ಉಮಾ ಸುರೇಶ ಶೆಟಕಾರ್, ಪರ್ವತಪ್ಪ ಮಾಸ್ಟರ್, ಜೀತು ಶೆಟಕಾರ್, ಡಾ. ರಾಜಶೇಖರ ಲಕಶೆಟ್ಟಿ, ಗೊಗ್ಗ ಸಂಜು, ನಿವೃತ್ತ ಎಂಜಿನಿಯರ್ ಸಿದ್ದಯ್ಯ ಕಾವಡಿಮಠ, ಎಂಜಿನಿಯರ್ ಸಚಿನ್ ಸೇರಿದಂತೆ ಇತರರು ಇದ್ದರು. ಆಡಳಿತಾಧಿಕಾರಿ ಮೋಹನ ರೆಡ್ಡಿ ಸ್ವಾಗತಿಸಿದರು. ಬಸವರಾಜ ಪ್ರಭಾ ನಿರೂಪಿಸಿದರು.

# ವೈಜ್ಞಾನಿಕ ಸಂದೇಶವುಳ್ಳ ವಚನಗಳ ಸಂಶೋಧಕ, ಸಂರಕ್ಷಕ ಫ.ಗು.ಹಳಕಟ್ಟಿ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**



ದಿನಾಂಕ 03-07-2026ರಂದು ಚಿಲುಕೂರಿ ನಾಗೇಶ್ವರರಾವ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ ಮತ್ತು ಸಾಂಸ್ಕೃತಿಕ ಘಟಕದ ವತಿಯಿಂದ ಕಾಲೇಜಿನಲ್ಲಿ ಸಂತ ಶಿಶುನಾಳ ಶರೀಫ ಹಾಗೂ ವಚನ ಪಿತಾಮಹ ಫ.ಗು. ಹಳಕಟ್ಟಿ ಅವರ ಜಯಂತಿಯನ್ನು ಅತ್ಯಂತ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು. ಇದರೊಂದಿಗೆ ಪರಿಸರ ಜಾಗೃತಿ ಮೂಡಿಸುವ ಸಲುವಾಗಿ "ಅಂತಾರಾಷ್ಟ್ರೀಯ ಪ್ಲಾಸ್ಟಿಕ್ ಚೀಲ ಮುಕ್ತ ದಿನ" ವನ್ನು ಸಹ ಅರ್ಥಪೂರ್ಣವಾಗಿ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನುದ್ದೇಶಿಸಿ ಇತಿಹಾಸ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಶಂಕ್ರಪ್ಪ ಎಂ. ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಶಿಶುನಾಳ ಶರೀಫರ ತತ್ವಪದಗಳು ಮತ್ತು ಫಗು ಹಳಕಟ್ಟಿ ಅವರು ವಚನ ಸಾಹಿತ್ಯದ ಸಂರಕ್ಷಣೆಗಾಗಿ ಮಾಡಿದ ತ್ಯಾಗವನ್ನು ಸ್ಮರಿಸಿದರು.

ಮಾನವೀಯತೆ ಮತ್ತು ಪರಿಸರ ಪ್ರಜ್ಞೆಯ ಕರೆ ವಚನಗಳಲ್ಲಿದೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ.ಕರಿಗೂಳಿಯವರು ಮಾತನಾಡಿ, ಸಾಮಾನ್ಯರಿಂದ ರಚಿತವಾದ ಅಸಾಮಾನ್ಯ ಸಂದೇಶವುಳ್ಳ ಬಸವಾದಿ ಶರಣರ ವಚನ ಸಾಹಿತ್ಯವನ್ನು ಸಂಶೋಧಿಸಿ ಸಂಗ್ರಹಿಸಿ ನಮ್ಮೆಲ್ಲರಿಗೆ ಇಂದು ಓದಲು ದೊರೆಯುವಂತೆ ಮಾಡುವಲ್ಲಿ ಫ.ಗು.ಹಳಕಟ್ಟಿಯವರ ತ್ಯಾಗ ಮತ್ತು ಬದ್ಧತೆ ಎಂತದ್ದು ಎಂದು ಭಾವನಾತ್ಮಕವಾಗಿ ವಿವರಿಸಿದರು. ಕನ್ನಡ ಕಬೀರ ಸಂತ ಶಿಶುನಾಳ ಶರೀಫರು ಕನ್ನಡದ ಜನಮಾನಸದ ಹೆಮ್ಮೆಯ ಹಾಗೂ ಮಾರ್ಮಿಕ ಕವಿ, ಸೌಹಾರ್ದತೆಯ ಸಂಕೇತವೆಂದು ಬಣ್ಣಿಸಿದರು.

ಕೈಯಲ್ಲಿರಲಿ ಕೈ ಚೀಲ ಬೇಡ ನಮಗೆ ಪ್ಲಾಸ್ಟಿಕ್ ಚೀಲ ಇಂದಿನ ಕಾಲದ ಯುವಕರು ಅಂದಿನ ಕಾಲದ ಹಿರಿಯರ ಜೀವನ ಶೈಲಿಯನ್ನು ಅಳವಡಿಸಿಕೊಂಡು ಪರಿಸರ ಪ್ರೇಮಿಗಳಾಗುವಂತೆ ಕರೆ ನೀಡಿದರು. "ನಮ್ಮ ಸಂಸ್ಕೃತಿಯನ್ನು ಉಳಿಸುವುದರ ಜೊತೆಗೆ, ಪ್ರಕೃತಿಯನ್ನು ರಕ್ಷಿಸುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಕರ್ತವ್ಯ. ದಿನನಿತ್ಯದ ಜೀವನದಲ್ಲಿ ಪ್ಲಾಸ್ಟಿಕ್ ಚೀಲಗಳ ಬಳಕೆಯನ್ನು ಸಂಪೂರ್ಣವಾಗಿ ತ್ಯಜಿಸಿ, ಮಾರುಕಟ್ಟೆಯಲ್ಲಿ ವ್ಯಾಪಾರ ವ್ಯವಹಾರ ಮಾಡಲು ಹೋಗುವಾಗ ಬಟ್ಟೆಯ, ನೂಲಿನ, ಉಣ್ಣೆಯ ಇತರೆ ನೈಸರ್ಗಿನ ಕೈಚೀಲ ಬಳಸಿ,ಆದರೆ ಪ್ಲಾಸ್ಟಿಕ್ ಚೀಲ ಬೇಡ ಎಂದರು.

ಪರಿಸರ ಸ್ನೇಹಿ ವಸ್ತುಗಳ ಬಳಕೆಯೇ ನಿಜವಾದ ಮಾನವೀಯತೆ ಹಾಗೂ ಪರಿಸರ ರಕ್ಷಣೆಯ ಪ್ರಜ್ಞಾವಂತಿಕೆ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಡಾ. ಶಶಿಕುಮಾರ, ಡಾ ವಿರುಪಾಕ್ಷ.ಕೆ ಕಚೇರಿ ಸಿಬ್ಬಂದಿ ಜಬೀನ ಹಾಗೂ ಉಪನ್ಯಾಸಕರಾದ ಪ್ರವೀಣ ಕಾಲೇಜಿನ ಸಮಸ್ತ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಕಾಲೇಜು ಆವರಣವನ್ನು ಪ್ಲಾಸ್ಟಿಕ್ ಮುಕ್ತಗೊಳಿಸುವ ಪ್ರತಿಜ್ಞೆಸ್ವೀಕರಿಸಿದರು ಹಾಗೂ ಕಾಲೇಜಿನ ಆವರಣದಲ್ಲಿ ಪ್ಲಾಸ್ಟಿಕ್ ಸ್ವಚ್ಛತಾ ಕಾರ್ಯವನ್ನು ನೆರವೇರಿಸಿದರು.

# ಬೀದರ್ ಮೂಲದ ಯುವಕನ ಅನುಮಾನಾಸ್ಪದ ಸಾವು ಪತ್ನಿಯಿಂದಲೇ ಕೊಲೆ: ಉನ್ನತ ಮಟ್ಟದ ತನಿಖೆಗೆ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಹೈದರಾಬಾದ್‌ನ ಆಸಿಫ್ ನಗರದಲ್ಲಿ ಬೀದರ್ ಜಿಲ್ಲೆಯ ಔರಾದ್ ತಾಲೂಕಿನ ಯುವಕನೊಬ್ಬ ಅನುಮಾನಾಸ್ಪದ ರೀತಿಯಲ್ಲಿ ಸಾವನ್ನಪ್ಪಿದ್ದು, ಇದು ಪತ್ನಿಯೇ ಮಾಡಿದ ಕೊಲೆ ಎಂದು ಮೃತನ ಸಹೋದರಿ ಪಲ್ಲವಿ ತಿಪ್ಪರಗೆ ಆರೋಪಿಸಿದ್ದು, ಉನ್ನತ ಮಟ್ಟದ ತನಿಖೆಗೆ ಅವರು ಆಗ್ರಹಿಸಿದ್ದಾರೆ.

ಈ ಕುರಿತು ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಉದ್ದೇಶಿಸಿ ಮಾತನಾಡಿರುವ ಅವರು, ಮೃತ ಯುವಕನನ್ನು ಔರಾದ್ ತಾಲೂಕಿನ ಮಣಿಗೆಂಪೂರ ಗ್ರಾಮದ ದತ್ತಾತ್ರಿ ಕರಬಸಪ್ಪ ಲದ್ದೆ ಎಂದು ಗುರುತಿಸಲಾಗಿದೆ.

ಈತ ಮಾರ್ಚ್ 24, 2026 ರಂದು ಹೈದರಾಬಾದ್‌ನ ಆಸಿಫ್ ನಗರದ ಯಾದವ ಬಸ್ತಿಯಲ್ಲಿರುವ ತನ್ನ ನಿವಾಸದಲ್ಲಿ ಸಾವಿಗೀಡಾಗಿದ್ದ. ಪತ್ನಿ ನೀಲಾಂಬಿಕಾ ನೀಡಿದ ದೂರಿನ ಮೇರೆಗೆ ಆಸಿಫ್ ನಗರ ಠಾಣೆಯ ಪೊಲೀಸರು 'ನೇಣು ಬಿಗಿದುಕೊಂಡು ಆತ್ಮಹತ್ಯೆ' ಮಾಡಿಕೊಂಡಿದ್ದಾನೆ ಎಂದು ಎಫ್‌ಐಆರ್ ದಾಖಲಿಸಿದ್ದಾರೆ. ಆದರೆ, ಇದು ಆತ್ಮಹತ್ಯೆಯಲ್ಲ, ವ್ಯವಸ್ಥಿತ ಕೊಲೆ ಎಂದು ಪಲ್ಲವಿ ಗಂಭೀರ ಆರೋಪ ಮಾಡಿದ್ದಾರೆ.

ಮೃತನ ತಲೆಯ ಕೆಳಭಾಗದಲ್ಲಿ ಹಾಗೂ ಮೈಮೇಲೆ ಭಾರೀ ರಕ್ತಗಾಯಗಳು ಮತ್ತು ಹಲ್ಲೆ ನಡೆಸಿದ ಗುರುತುಗಳಿದ್ದು, ಇದು ನೇಣು ಹಾಕಿಕೊಂಡ ಸಾವಲ್ಲ ಎಂಬುದು ಲಭ್ಯವಿರುವ ಫೋಟೋಗಳಿಂದ ಸ್ಪಷ್ಟವಾಗುತ್ತದೆ ಎಂದು ಆರೋಪಿಸಿದರು.

**ಸಿಸಿಟಿವಿ ಕ್ಯಾಮೆರಾ ಬಂದ್:** ಘಟನೆ ನಡೆದ ದಿನ (ಮಾ. 24) ರಾತ್ರಿ 11:22 ರಿಂದ 11:37 ರವರೆಗಿನ ಸುಮಾರು 15 ನಿಮಿಷಗಳ ಕಾಲ ಮನೆಯಿದ್ದ ಬಿಲ್ಡಿಂಗ್‌ನ ಸಿಸಿಟಿವಿ ಕ್ಯಾಮೆರಾವನ್ನು ಉದ್ದೇಶ ಪೂರ್ವಕವಾಗಿ ಆಫ್ ಮಾಡಲಾಗಿತ್ತು. ಇದೇ ಅವಧಿಯಲ್ಲಿ ಕೃತ್ಯ ನಡೆದಿರುವ ಶಂಕೆ ವ್ಯಕ್ತವಾಗಿದೆ. ಈ ಕೃತ್ಯ ನಡೆದ ಕೆಲವೆ ಕ್ಷಣಗಳಲ್ಲಿ ಶವ ತೆಗೆದು-ಕೊಂಡು ಹೋದ ಪೊಲಿಸರು, ಸಂಬಂಧಿಕರಿಗೆ ಮಾಹಿತಿ ನೀಡದೆ ಶವ ಪರಿಕ್ಷೆ ನಡೆಸಿರುವುದು ಪೋಲಿಸರ ಮೇಲೂ ಅನುಮಾನ ಮೂಡುವಂತೆ ಮಾಡಿದೆ. ಮೃತ ವ್ಯಕ್ತಿಯ ಮೈಮೇಲೆ ಒಂದು ತುಂಡು ಬಟ್ಟೆ ಇರದೆ ಇರುವುದು ಗಮನಿಸಿದರೆ, ಸುತ್ತಮುತ್ತಲಿನ ನೆರೆಹೊರೆಯವರು ಹೇಳುವ ರೀತಿ ನೋಡಿದರೆ ಇದು ಸುವ್ಯವಸ್ಥಿತ ಕೊಲೆ ಎಂದು ಪಲ್ಲವಿ ಕಣ್ಣೀರಿಟ್ಟಿದ್ದಾರೆ.

**ಹಣದ ಅಕ್ರಮ ವರ್ಗಾವಣೆ:** ಮೃತ ದತ್ತಾತ್ರಿ ವಿವಿಧೆಡೆ ಕೆಲಸ ಮಾಡಿ ಸಂಪಾದಿಸಿದ್ದ ಸುಮಾರು 6.80 ಲಕ್ಷ ರೂ. ಹಣವು ಆತನ ಸಾವಿನ ಸುತ್ತಮುತ್ತಲ ಅವಧಿಯಲ್ಲಿ ಪತ್ನಿ ನೀಲಾಂಬಿಕಾಳ ಸ್ನೇಹಿತರ ಖಾತೆಗಳಿಗೆ ವರ್ಗಾವಣೆಯಾಗಿದೆ. ಜೊತೆಗೆ ಆಕೆಯು ಮನೆಯಲ್ಲಿದ್ದ ಚಿನ್ನಾಭರಣಗಳನ್ನೂ ತೆಗೆದುಕೊಂಡು ಹೋಗಿದ್ದಾಳೆ.

**ಸುಳ್ಳು ಸಾಲದ ಕಥೆ:** ಪತ್ನಿಯು ಪೊಲೀಸರಿಗೆ 15 ಲಕ್ಷ ರೂ. ಹಾಗೂ ಮಾಧ್ಯಮಗಳಿಗೆ 25 ಲಕ್ಷ ರೂ. ಸಾಲವಿತ್ತು ಎಂದು ತದ್ವಿರುದ್ಧ ಹೇಳಿಕೆಗಳನ್ನು ನೀಡುತ್ತಿದ್ದು, ವಾಸ್ತವದಲ್ಲಿ ಮೃತನಿಗೆ ಯಾವುದೇ ಸಾಲವಿರಲಿಲ್ಲ ಎಂದು ಸಹೋದರಿ ಸ್ಪಷ್ಟಪಡಿಸಿದ್ದಾರೆ.

**ದಾಂಪತ್ಯಕಲಹ:** 01-04-2024ರಲ್ಲಿ ವಿವಾಹವಾಗಿದ್ದ ಈ ದಂಪತಿಗಳ ನಡುವೆ ಹೊಂದಾಣಿಕೆ ಇರಲಿಲ್ಲ. ಪತ್ನಿಯು ಗಂಡನನ್ನು ಬಲವಂತವಾಗಿ ಹೈದರಾಬಾದ್‌ಗೆ ಕರೆದೊಯ್ದು, ಆತನಿಲ್ಲದಾಗಲೂ ಅಲ್ಲಿಯೇ ವಾಸಿಸುತ್ತಿದ್ದಳು ಹಾಗೂ ಸದಾ ಮೊಬೈಲ್‌ನಲ್ಲಿ ಕಳೆಯುತ್ತಿದ್ದಳು ಎಂದು ಆರೋಪಿಸಿದರು.

**ಪೊಲೀಸರ ಕರ್ತವ್ಯ ಲೋಪದ ಆರೋಪ:** ದೂರು ಸ್ವೀಕರಿಸಲು ನಕಾರ: ಮೃತನ ಅಂತಿಮ ಸಂಸ್ಕಾರದ ಬಳಿಕ ನಾವು ಆಸಿಫ್ ನಗರ ಠಾಣೆಗೆ ತೆರಳಿ ಅನುಮಾನಗಳ ಬಗ್ಗೆ ವಿವರಿಸಿ, ಪತ್ನಿಯ ವಿರುದ್ಧ ದೂರು ನೀಡಲು ಹೋದಾಗ ಅಲ್ಲಿನ ಪಿಎಸ್‌ಐ ಕೆ.ಆಂಜನೆಯಲು ದೂರು ಸ್ವೀಕರಿಸಲು ನಿರಾಕರಿಸಿದ್ದಾರೆ.

**ಶವ ಪರೀಕ್ಷೆ ವರದಿ ವಿಳಂಬ:** ಮರಣೋತ್ತರ ಪರೀಕ್ಷೆಯ (ಪಿ.ಎಂ) ವರದಿಯು ಘಟನೆ ನಡೆದ ಮರುದಿನವೇ (ಮಾ. 25) ಮಧ್ಯಾಹ್ನ ಸಿದ್ಧವಿದ್ದರೂ, ಕುಟುಂಬಸ್ಥರಿಗೆ ಠಾಣೆಗೆ ಹತ್ತಾರು ಬಾರಿ ಅಲೆದಾಡಿಸಿ 25 ದಿನಗಳ ಕಾಲ ಸತಾಯಿಸಿ ₹5,000/- ಲಂಚ ಪಡೆದು ಶವ ಪರಿಕ್ಷೆ ವರದಿ ನೀಡಲಾಗಿದೆ. ಇದು ಪೊಲೀಸ್ ಇಲಾಖೆಯ ಮೇಲೂ ಸಂಶಯ ಮೂಡುವಂತೆ ಮಾಡಿದೆ ಎಂದು ಸಹೋದರಿ ಪಲ್ಲವಿ ದೂರಿದ್ದಾರೆ.

**ಕುಟುಂಬಸ್ಥರ ಆಗ್ರಹ:** ಏಕೈಕ ಮಗನನ್ನು ಕಳೆದುಕೊಂಡಿರುವ ವೃದ್ಧ ತಂದೆ-ತಾಯಿಗೆ ನ್ಯಾಯ ಒದಗಿಸಬೇಕು. ಪತ್ನಿ ನೀಲಾಂಬಿಕಾ ಮತ್ತು ಆಕೆಯ ತಂದೆ ಬಳಸುತ್ತಿರುವ ಮೊಬೈಲ್ ಸಂಖ್ಯೆಗಳ ಕರೆಗಳ ಮಾಹಿತಿ (ಅಆಖ), ವಾಟ್ಸಾಪ್ ಮತ್ತು ಇನ್‌ಸ್ಟಾಗ್ರಾಮ್ ಖಾತೆಗಳನ್ನು ಪರಿಶೀಲಿಸಬೇಕು. ವರ್ಗಾವಣೆಯಾದ ಹಣವನ್ನು ವಸೂಲಿ ಮಾಡಿ ವೃದ್ಧ ಪೋಷಕರಿಗೆ ನೀಡಬೇಕು ಹಾಗೂ ಈ ಪ್ರಕರಣದ ಕುರಿತು ಉನ್ನತ ಮಟ್ಟದ, ನ್ಯಾಯಸಮ್ಮತ ತನಿಖೆ ನಡೆಸಿ ಸತ್ಯಾಂಶವನ್ನು ಹೊರ ತರಬೇಕು ಎಂದು ಮೃತನ ಸಹೋದರಿ ಪಲ್ಲವಿ ಆಗ್ರಹಿಸಿದರು.

ಮೃತನ ತಾಯಿ ಸಂಗಮ್ಮ, ತಂದೆ ಕರಬಸಪ್ಪ, ಚಿಕ್ಕಮ್ಮ ಭಾಗ್ಯಶ್ರೀ, ಚಿಕ್ಕಪ್ಪ ವಿಶ್ವನಾಥ ಕಾರಂಜಿ, ಸಂಬಂಧಿಕರಾದ ರಾಜಕುಮಾರ ನೌಬಾದ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.



ಬಸವಕಲ್ಯಾಣ :- ಇಲ್ಲಿನ ಅನುಭವ ಮಂಟಪದ ಪರಿಸರದಲ್ಲಿ ನಡೆದ ಜಯ ದೇವಿ ತಾಯಿ ಲೀಗಾಡೆ ಜಯಂತಿಯಲ್ಲಿ ಗುರಮ್ಮ ಸಿದ್ದಾ ರಡ್ಡಿ ಅವರಿಗೆ ಜಯದೇವಿತಾಯಿ ಲಿಗಾಡೆ ರಾಷ್ಟೀಯ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಅನುಭವ ಮಂಟಪದ ಟ್ರಸ್ಟಿನ ಅಧ್ಯಕ್ಷರಾದ ಡಾ ಪೂಜ್ಯ ಶ್ರೀ ಬಸವಲಿಂಗ ಪಟ್ಟದೇವರು. ಬೀದರ ವಿಶ್ವವಿದ್ಯಾಲಯದ ಕುಲಪತಿ ಪ್ರೊ ಬಿ. ಎಸ್. ಬಿರಾದಾರ. ಬಸವರಾಜ ಪಾಟೀಲ ಸೇಡಂ. ಸಂಚಾಲಕರಾದ ಪೂಜ್ಯಶ್ರೀ ಶಿವಾನಂದ ದೇವರು. . ಭಾಲ್ಕಿಯ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು. ಪಲ್ಲವಿ ಪಾಟೀಲ್. ಎಸ್. ಬಿ. ದುರ್ಗೆ. ಎಸ್. ಎಸ್. ಹಿರೇಮಠ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಬಿಎಲ್‌ಒಗಳಿಗೆ ಅಗತ್ಯ ಸಹಕಾರ ನೀಡಿ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲೂಕಿನ ಮೇಥಿ ಮೇಳಕುಂದಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಚುನಾವಣಾಆಯೋಗದನಿರ್ದೇಶನದಂತೆ ಮತದಾರರ ಪಟ್ಟಿಯ ಸಮಗ್ರ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಪ್ರಾರಂಭಗೊಂಡಿದ್ದು, ಮತಗಟ್ಟೆ ಮಟ್ಟದ ಅಧಿಕಾರಿ (ಬಿಎಲ್‌ಒ) ಗಳು ಮನೆ ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ ಎಂದು ಅಭಿವೃದ್ಧಿ ಅಧಿಕಾರಿ ಚಂದ್ರಶೇಖರ ಬನ್ನಾಳೆ ಹೇಳಿದರು.ತಾಲೂಕಿನ ಮೇಥಿ ಮೇಳಕುಂದಾ ಗ್ರಾಮದಲ್ಲಿ ಶುಕ್ರವಾರ ಹಮ್ಮಿಕೊಂಡ ಎಸ್‌ಐಆರ್ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಇಲ್ಲಿಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸುಮಾರು 10 ಸಾವಿರ ಜನಸಂಖ್ಯೆಯಿದ್ದು, ಮೇಥಿ ಮೇಳಕುಂದಾ, ಭಾಟಸಾಂಗವಿ, ತಮಗ್ಯಾಳ, ಮೇಳಕುಂದಾ ವಾಡಿಯ ಎಲ್ಲ ಅರ್ಹ ನಾಗರಿಕರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸುವುದು ಎಸ್‌ಐಆರ್ ಉದ್ದೇಶ. ಪಟ್ಟಿ ಪರಿಷ್ಕರಣೆ ಸಮಯಲ್ಲಿ, ನಿಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಇರುವುದನ್ನು ಪರಿಶೀಲಿಸಬಹುದು ಎಂದರು.ಬಿಎಲ್‌ಒಗಳು ಮನೆಗೆ ಭೇಟಿ ನೀಡಿದಾಗ ಮತದಾರರ ವಿವರಗಳನ್ನು ಪರಿಶೀಲಿಸಲಿದ್ದಾರೆ. ಇವರಿಗೆ ಮಾಹಿತಿ ನೀಡಿ. ಮತದಾರರ ಪಟ್ಟಿಯಲ್ಲಿರುವ ಹೆಸರು ಪರಿಶೀಲನೆ, ತಿದ್ದುಪಡಿ, ಹೊಸ ಮತದಾರರ ಹೆಸರು ಸೇರ್ಪಡೆ, ಮೃತಪಟ್ಟವರು ಹಾಗೂ ಸ್ಥಳಾಂತರಗೊಂಡವರ ಹೆಸರು ಪಟ್ಟಿಯಿಂದ ತೆಗೆದುಹಾಕುವ ಪ್ರಕ್ರಿಯೆಯೂ ಇದೇ ಅವಧಿಯಲ್ಲಿ ನಡೆಯಲಿದೆ. ಗುರುತಿನ ಚೀಟಿಯಲ್ಲಿ ದೋಷಗಳು ಕಂಡು ಬಂದಲ್ಲಿ ತಿದ್ದುಪಡಿಗೆ ಅವಕಾಶವಿದೆ ಎಂದು ಮಾಹಿತಿ ನೀಡಿದರು.ಈ ಸಂದರ್ಭದಲ್ಲಿ ಬಿಎಲ್‌ಒ ರವಿಕಾಂತ ಭಾತಂಬ್ರೆ, ಗ್ರಾಮದ ಪ್ರಮುಖರಾದ ಸಾಯಿನಾಥ ಪಾಟೀಲ್, ಮಲ್ಲಿಕಾರ್ಜುನ ತುಮ್ಮನಪಳ್ಳೆ, ಧನರಾಜ ಕಾರಕರೇ, ಸಂತೋಷ ಚಿಲ್ಲರ್ಗೆ ಸೇರಿದಂತೆ ಹಲವರು ಇದ್ದರು.

> ಮತದಾರರಪಟ್ಟಿಯಲ್ಲಿ ಅರ್ಹರಹೆಸರುಇಲ್ಲದಿದ್ದರೆ ಸರಕಾರದ ಸೌಲಭ್ಯಗಳು ಕಡಿತಗೊಳ್ಳುವಸಾಧ್ಯತೆಯಿದ್ದು ಎಲ್ಲ ನಾಗರಿಕರು ಜು.29ರ ವರೆಗೂ ನಡೆಯಲಿರುವ ಎಸ್‌ಐಆರ್ ಪ್ರಕ್ರಿಯೆ ಭಾಗವಹಿಸಿ ಯಾರೊಬ್ಬರದ್ದು ಹೆಸರು ಮತಪಟ್ಟಿಯಿಂದ ಮಿಸ್ ಆಗದಂತೆನೋಡಿಕೊಳ್ಳಬೇಕು.
> **–ಚಂದ್ರಶೇಖರ ಬನ್ನಾಳೆ ಅಭಿವೃದ್ಧಿ ಅಧಿಕಾರಿಗಳು**

## ವಚನ ಸಾಹಿತ್ಯಕ್ಕೆ ಜೀವನ ಮುಡಿಪು



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ವಚನ ಪಿತಾಮಹ ಫ.ಗು.ಹಳಕಟ್ಟಿ ಅವರು 20ನೇ ಶತಮಾನದ ಪೂರ್ವಾರ್ಧದಲ್ಲಿ ಅಳಿವಿನಂಚಿನಲ್ಲಿದ್ದ ವಚನಗಳನ್ನು ರಕ್ಷಿಸುವ ಮೂಲಕ ವಚನ ಸಾಹಿತ್ಯಕ್ಕೆ ತಮ್ಮ ಜೀವನ ಮುಡುಪಾಗಿಟ್ಟಿದ್ದರು ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ಹೇಳಿದರು.ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಪಿಯುಸಿ ವಿಜ್ಞಾನ ವಿಭಾಗದ ವತಿಯಿಂದ ಗುರುವಾರ ಆಯೋಜಿಸಿದ್ದ ಫ.ಗು.ಹಳಕಟ್ಟಿ ಜಯಂತಿ ನಿಮಿತ್ತ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.ಬಸವಾದಿ ಶರಣರ ವಚನಗಳನ್ನು ಆಧುನಿಕ ಕಾಲದಲ್ಲಿ ಜನಮನಕ್ಕೆ ತಲುಪಿಸಿದ ಕೀರ್ತಿ ಹಳಕಟ್ಟಿ ಅವರಿಗೆ ಸಲ್ಲುತ್ತದೆ. ಅವರು ಸಮರ್ಪಣಾ ಭಾವದಿಂದ ವಚನ ಸಾಹಿತ್ಯ, ಸಂಶೋಧನೆ, ಸಂಪಾದನೆ ಕೈಗೊಂಡಿದ್ದರಿಂದಲೇ ವಚನ ಸಾಹಿತ್ಯ ನಮಗೆ ದೊರೆತಿದೆ. ಹಳಕಟ್ಟಿ ಅವರ ಬದುಕು, ಸಾಧನೆ ಕುರಿತು ವಿದ್ಯಾರ್ಥಿಗಳು ತಿಳಿದು ಕೊಳ್ಳುವುದು ಇಂದಿನ ಅವಶ್ಯಕ ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಉಪ ಪ್ರಾಚಾರ್ಯ ಸಿದ್ರಾಮ ಗೊಗ್ಗಾ, ಉಪನ್ಯಾಸಕರಾದ ಎಂ.ಶ್ರೀನಿವಾಸ ರೆಡ್ಡಿ, ಲಚಮಾ ರೆಡ್ಡಿ, ಜಿತೇಂದ್ರ ಬಿರಾದಾರ, ಆದರ್ಶ ಗಂದಿಗುಡಿ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.

## ಕಾಯಕಯೋಗಿ ಗೌರವಕ್ಕೆ ಪ್ರಭಾಕರ ಖೇಡದ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ



ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು ನೀಡುವ " ಕಾಯಕಯೋಗಿ" ಗೌರವ ಪ್ರಶಸ್ತಿಗೆ ಸ್ಥಳೀಯ ಸಾಹಿತಿ, ಕಚುಸಾಪ ತಾಲೂಕು ಘಟಕ ಅಧ್ಯಕ್ಷ ಪ್ರಭಾಕರ ಖೇಡದ ಅವರ ಸಾಹಿತ್ಯ ಸೇವೆ ಗುರುತಿಸಿ ಆಯ್ಕೆ ಮಾಡಲಾಗಿದೆ ಎಂದು ಕೇಂದ್ರ ಪರಿಷತ್ ಸಂಚಾಲಕ ಕೃಷ್ಣಮೂರ್ತಿ ಕುಲಕರ್ಣಿ ತಿಳಿಸಿದ್ದಾರೆ.ಪ್ರಶಸ್ತಿಯನ್ನು ಜುಲೈ 5 ಭಾನುವಾರ ಬೆಳಿಗ್ಗೆ ಕಲ್ಬುರ್ಗಿ ಶ್ರೀ ನಿವಾಸ ಸರಡಗಿ ಮಠದಲ್ಲಿ ಜರುಗುವ ರಾಜ್ಯಮಟ್ಟದ ಸಮ್ಮೇಳನದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

# ಕೆಲಸದ ಕೌಶಲ್ಯಗಳನ್ನು ನಿರಂತರವಾಗಿ ಬೆಳೆಸಿಕೊಳ್ಳಿ: ಡಾ. ವಿಕ್ರಮ್ ವಿಸಾಜಿ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಸಿಬ್ಬಂದಿ ವರ್ಗದವರು ತಮ್ಮ ಕಾರ್ಯಕ್ಷೇತ್ರದಲ್ಲಿ ನಿರಂತರವಾಗಿ ಹೊಸ ಕೌಶಲ್ಯಗಳನ್ನು ಬೆಳೆಸಿಕೊಂಡು, ಪ್ರಾಮಾಣಿಕತೆ ಹಾಗೂ ಸೇವಾ ಮನೋಭಾವದಿಂದ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಹಾಗೂ ಡೀನ್ ಡಾ. ವಿಕ್ರಮ್ ವಿಸಾಜಿ ಹೇಳಿದರು.

ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಆಶ್ರಯದಲ್ಲಿ ಶಾಲೆ ಮತ್ತು ಕಾಲೇಜುಗಳ ಮುಖ್ಯೋಪಾಧ್ಯಾಯರು ಹಾಗೂ ಪ್ರಾಂಶುಪಾಲರಿಗಾಗಿ ಆಯೋಜಿಸಿದ್ದ ಎರಡು ದಿನಗಳ ವೃತ್ತಿಪರ ಅಭಿವೃದ್ಧಿ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಸಂಸ್ಥೆಯ ಘನ ಪರಂಪರೆಯನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲು ಸಿಬ್ಬಂದಿಯ ಸಮರ್ಪಣೆ, ನಿಷ್ಠೆ ಮತ್ತು ನಿರಂತರ ಕಲಿಕೆಯ ಮನೋಭಾವ ಅತ್ಯಗತ್ಯ ಎಂದರು.ಸಿಬ್ಬಂದಿ ತಮ್ಮ ಕೆಲಸದ ಬಗ್ಗೆ ಗೌರವ, ನಂಬಿಕೆ ಹಾಗೂ ಜವಾಬ್ದಾರಿಯೊಂದಿಗೆ ಕಾರ್ಯನಿರ್ವಹಿಸಬೇಕು. ಬದಲಾಗುತ್ತಿರುವ



ಶಿಕ್ಷಣ ವ್ಯವಸ್ಥೆಗೆ ಅನುಗುಣವಾಗಿ ಹೊಸ ತಂತ್ರಜ್ಞಾನ ಮತ್ತು ಕೌಶಲ್ಯಗಳನ್ನು ಅಳವಡಿಸಿಕೊಳ್ಳುವುದು ಅನಿವಾರ್ಯ ಎಂದು ತಿಳಿಸಿದರು.ಮತ್ತೋರ್ವ ಮುಖ್ಯ ಅತಿಥಿ, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಡಾ. ಗಣಪತಿ ಸಿನೂರ ಮಾತನಾಡಿ, ಶಿಕ್ಷಕರು ನಾಯಕತ್ವದ ಗುಣಗಳನ್ನು ಬೆಳೆಸಿಕೊಂಡು, ವಿವಿಧ ಹಿನ್ನೆಲೆಯ ವಿದ್ಯಾರ್ಥಿಗಳ ಅಗತ್ಯಗಳಿಗೆ ಸ್ಪಂದಿಸುವ ಸಾಮರ್ಥ್ಯವನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಆರಂಭದಲ್ಲಿ ಸಂಸ್ಥೆಯ ಪ್ರಧಾನ ವ್ಯವಸ್ಥಾಪಕ ಶ್ರೀ ಸುರೇಂದ್ರನ್ ಆರ್. ಅತಿಥಿಗಳನ್ನು ಸ್ವಾಗತಿಸಿ, ಕಾರ್ಯಾಗಾರದ ಉದ್ದೇಶವನ್ನು ವಿವರಿಸಿದರು.

ಅಧ್ಯಕ್ಷತೆಯನ್ನು ಸಂಸ್ಥೆಯ ಆಡಳಿತಾಧಿಕಾರಿ ಪ್ರೊ. ಅಂಕುಶ ಡೋಳೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಡಾ. ಕಮಲಾ ಎಸ್, ಡಾ. ಉದಯಕುಮಾರ ಕಲ್ಯಾಣೆ, ಶ್ರೀ ಗುರುನಾಥ ಕುಡತೆ (ಎಚ್.ಆರ್. ಮ್ಯಾನೇಜರ್) ಸೇರಿದಂತೆ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ವಿವಿಧ ಶಾಲೆ-ಕಾಲೇಜುಗಳ ಮುಖ್ಯೋಪಾಧ್ಯಾಯರು, ಪ್ರಾಂಶುಪಾಲರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# ಭಾಲ್ಕಿ-ಔರಾದ್‌ನಲ್ಲಿ ರೌಡಿಗಳಿಗೆ ಪೊಲೀಸ್ ಬಿಗ್ ಶಾಕ್ : ಬೆಳ್ಳಂ ಬೆಳಗ್ಗೆಯೇ ವಾರ್ನಿಂಗ್



> ಸಾರ್ವಜನಿಕರಿಗೆ ತೊಂದರೆ ನೀಡುವವರು ಯಾರೇ ಆಗಿರಲಿ, ಅವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಮಾಜದ ಸ್ವಾಸ್ಥ್ಯ ಮತ್ತು ಶಾಂತಿಗೆ ಧಕ್ಕೆ ತರುವ ಯಾವುದೇ ಕಾನೂನುಬಾಹಿರ ಚಟುವಟಿಕೆಗಳನ್ನು ಪೊಲೀಸ್ ಇಲಾಖೆ ಎಂದಿಗೂ ಸಹಿಸುವುದಿಲ್ಲ. ನೆಮ್ಮದಿಯ ಸಮಾಜ ನಮ್ಮ ಆದ್ಯತೆ. ಸಮಾಜದ ಸ್ವಾಸ್ಥ್ಯ ಹಾಳು ಮಾಡುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಖಚಿತ. ಅಪರಾಧಕ್ಕೆ ಅವಕಾಶವಿಲ್ಲ, ಕಾನೂನೇ ಅಂತಿಮ."
> **– ಬಲ್ಲಪ್ಪ ನಂದಗಾವಿ, ಡಿವೈಎಸ್‌ಪಿ, ಭಾಲ್ಕಿ-ಔರಾದ್ ಉಪವಿಭಾಗ**

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂ-ಟೆ ಅವರ ಮಾರ್ಗದರ್ಶನ ಹಾಗೂ ಭಾಲ್ಕಿ ಉಪವಿಭಾಗದ ಡಿವೈಎಸ್‌ಪಿ ಬಲ್ಲಪ್ಪ ನಂದಗಾವಿ ಅವರ ನೇತೃತ್ವದಲ್ಲಿ ಗುರುವಾರ ಮುಂಜಾನೆ ಭಾಲ್ಕಿ ಉಪವಿಭಾಗದ ಎಂಟು ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ದಾಖಲಾಗಿರುವ ಒಟ್ಟು 100 ರೌಡಿಶೀಟರ್‌ಗಳ ಮನೆಗಳ ಮೇಲೆ ಏಕಕಾಲದಲ್ಲಿ ಹಠಾತ್ ದಾಳಿ ನಡೆಸಿ ಸಮಗ್ರ ತಪಾಸಣೆ ನಡೆಸಲಾಯಿತು.

ಕಾರ್ಯಾಚರಣೆಗೆ ಎಲ್ಲ ಠಾಣೆಗಳ ಎಎಸ್‌ಐ, ಪಿಎಸ್‌ಐ ಹಾಗೂ ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ಸುಮಾರು 20 ವಿಶೇಷ ತಂಡಗಳನ್ನು ರಚಿಸಲಾಗಿತ್ತು. ತಂಡಗಳು ರೌಡಿಶೀಟರ್‌ಗಳ ಮನೆಗಳಿಗೆ ತೆರಳಿ ಅವರು ಬಳಸುತ್ತಿರುವ ವಾಹನಗಳು, ದಾಖಲೆಗಳಿಲ್ಲದ ವಸ್ತುಗಳು, ನಿಷೇಧಿತ ಪದಾರ್ಥಗಳು ಹಾಗೂ ನ್ಯಾಯಾಲಯದ ಆದೇಶಗಳ ಉಲ್ಲಂಘನೆಯಾಗಿದೆಯೇ ಎಂಬುದನ್ನು ಕೂಲಂಕುಷವಾಗಿ ಪರಿಶೀಲಿಸಿಲಾಯಿತು.

ತಪಾಸಣೆಯ ಬಳಿಕ ಎಲ್ಲ ರೌಡಿಶೀಟರ್‌ಗಳನ್ನು ಆಯಾ ಪೊಲೀಸ್ ಠಾಣೆಗಳಿಗೆ ಕರೆಸಿ, ಅವರ ಇತ್ತೀಚಿನ ವೈಯಕ್ತಿಕ ಮಾಹಿತಿ, ಚಲನವಲನ ಹಾಗೂ ಅಪರಾಧಿಕ ಹಿನ್ನೆಲೆಯನ್ನು ಠಾಣೆಯಲ್ಲಿರುವ ದಾಖಲೆಗಳೊಂದಿಗೆ ಮರುಪರಿಶೀಲಿಸಲಾಯಿತು.

ಈ ವೇಳೆ ಕಮಲನಗರ ಹಾಗೂ ಔರಾದ್ ಸಿಪಿಐಗಳ ನೇತೃತ್ವದಲ್ಲಿ ಇತ್ತೀಚೆಗೆ ರಚಿಸಲಾದ ರೌಡಿ ಸ್ಕ್ವಾಡ್ ಸದಸ್ಯರು ರೌಡಿಶೀಟರ್‌ಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು. ಯಾವುದೇ ಅಪರಾಧ ಪ್ರಕರಣಗಳಲ್ಲಿ ಭಾಗಿಯಾದರೆ ಅಥವಾ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿ, ಮುಂದಿನ ದಿನಗಳಲ್ಲಿಯೂ ನಿರಂತರ ನಿಗಾ ವಹಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಜಿಲ್ಲಾ ಪೊಲೀಸ್ ಇಲಾಖೆ ಸಾರ್ವಜನಿಕರಿಗೂ ಮನವಿ ಮಾಡಿದ್ದು, ತಮ್ಮ ಸುತ್ತಮುತ್ತ ಅನುಮಾನಾಸ್ಪದ ವ್ಯಕ್ತಿಗಳು, ಕಾನೂನುಬಾಹಿರ ಚಟುವಟಿಕೆಗಳು ಅಥವಾ ಅಪರಾಧ ಕೃತ್ಯಗಳಲ್ಲಿ ತೊಡಗಿರುವವರ ಬಗ್ಗೆ ಮಾಹಿತಿ ದೊರೆತರೆ ಯಾವುದೇ ಹಿಂಜರಿಕೆಯಿಲ್ಲದೆ ಸಮೀಪದ ಪೊಲೀಸ್ ಠಾಣೆಗೆ ಮಾಹಿತಿ ನೀಡುವ ಮೂಲಕ ಪೊಲೀಸ್ ಇಲಾಖೆಯೊಂದಿಗೆ ಸಹಕರಿಸುವಂತೆ ಕೋರಿದೆ.

"ಅಪರಾಧಿಗಳಿಗೆ ಕಠಿಣ ಎಚ್ಚರಿಕೆ – ಸಾರ್ವಜನಿಕರ ಸುರಕ್ಷತೆಗೆ ಬೀದರ್ ಜಿಲ್ಲಾ ಪೊಲೀಸರ ನಿರಂತರ ಕಾರ್ಯಾಚರಣೆ ಮುಂದುವರಿಯಲಿದೆ" ಎಂದು ಪೊಲೀಸ್ ಇಲಾಖೆ ತಿಳಿಸಿದೆ.

# ಸ್ವ ಹಿತವಿಲ್ಲದ ಹಿತಚಿಂತಕರು ಫ ಗು ಹಳಕಟ್ಟಿ ; ಪ್ರಭಾಕರ ಖೇಡದ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ



ವಚನ ಸಾಹಿತ್ಯ ಸಂಶೋಧನೆ ಮತ್ತು ಮುದ್ರಣಕ್ಕಾಗಿ ಸಾಲಕ್ಕೆ ಅಂಜದೇ ಕಾಲಕ್ಕೆ ನಂಜದೇ ಇಡೀ ತಮ್ಮ ಬದುಕನ್ನೇ, ವಚನ ಸಾಹಿತ್ಯ ಸಂರಕ್ಷಣೆಗಾಗಿ ಸವೆಸಿ 250ಕ್ಕೂ ಹೆಚ್ಚು ಶರಣರ ವಚನಗಳನ್ನು ಊರೂರು ಸುತ್ತಿ ಸಂಗ್ರಹಿಸಿ ಪ್ರಕಟಿಸಿ ನಮಗೆ ಕೊಟ್ಟು ಹೋದವರು ಹಳಕಟ್ಟಿಯವರೆಂದು ಇಲ್ಲಿನ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಪ್ರಭಾಕರ ಖೇಡದವರು ಅಭಿಪ್ರಾಯಪಟ್ಟರು. ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಹಳಕಟ್ಟಿ ಅವರ 146 ಜಯಂತೋತ್ಸವ, ವಚನ ಸಂರಕ್ಷಣಾ ದಿನದ ವಿಶೇಷ ಉಪನ್ಯಾಸಕರಾಗಿ ಮಾತನಾಡುತ್ತಾ, ವಚನ ಸಾಹಿತ್ಯ ಸಂರಕ್ಷಣೆಯೊಂದಿಗೆ ವಿಜಯಪುರ ಜಿಲ್ಲೆಯ ವಿಕಾಸಕ್ಕೆ ಅವರು ಕೊಟ್ಟ ಕೊಡುಗೆ ಅಪಾರ. ಶಿಕ್ಷಣ ಅದರಲ್ಲೂ ಹೆಣ್ಣು ಮಕ್ಕಳ ಶಿಕ್ಷಣಕ್ಕಾಗಿ ಅವರು ತೋರುತ್ತಿದ್ದ ಕಾಳಜಿ, ಬರಗಾಲ ನಿವಾರಣ ಕೇಂದ್ರ,ಪ್ರತಿಷ್ಠಿತ ಬಿ ಎಲ್ ಡಿ ಈ ಶಿಕ್ಷಣ ಸಂಸ್ಥೆ ಹಾಗೂ ಶ್ರೀ ಸಿದ್ದೇಶ್ವರ ಸಹಕಾರಿ ಬ್ಯಾಂಕ್, ಎಸ್ ಎಸ್ ಹೈಸ್ಕೂಲ್ ಹಾಗೂ ವಿಜಯ ಕಾಲೇಜ್ ಹೀಗೇ ಅನೇಕ ಸಹಕಾರಿ ಸಂಘ ಸಂಸ್ಥೆಗಳ ಉದಯಕ್ಕೆ ಮೂಲ ಕಾರಣರಾದವರು. ವಕೀಲರಾಗಿ ಶ್ರದ್ಧೆ,ತ್ಯಾಗ, ಶುದ್ಧ ಹಸ್ತ ಒಂದು ಕಡೆ ಆದರೆ ಹಸಿವು, ಪರಹಿತಕ್ಕಾಗಿ ಸ್ವಂತ ಮನೆ ಮಾರಿದ್ದು, ಕೈಗೆ ಬಂದ ಮಗ ಮರಣಿಸಿದ್ದು ಇನ್ನೊಂದು ಕಡೆ. ಇದಾವುದಕ್ಕೂ ಧೃತಿಗೆಡದೇ 20ನೇ ಶತಮಾನದ ಶರಣರಂತೆ ಬಾಳಿ ತೋರಿಸಿದವರು ಪರಮಪುರುಷ ರಾವ್ ಬಹದ್ದೂರ್ ಡಾ, ಫ ಗು ಹಳಕಟ್ಟಿಯವರು. ಹರಕು ಅಂಗಿಯ ಮೇಲೆ ಕರಿಕೋಟು, ಆಸರೆಗೆ ಬಣ್ಣ ಮಾಸಿದ ಸೈಕಲ್, ವಾಸಿಸಲು ಕೊನೆಯವರೆಗೂ ಬಾಡಿಗೆ ಮನೆ ಇದು ಅವರ ಸರಳ ವ್ಯಕ್ತಿತ್ವಕ್ಕೆ ಹಿಡಿದ ಕನ್ನಡಿಯಾಗಿತ್ತು ಎಂದು ಅಭಿಪ್ರಾಯಪಟ್ಟರು.

ತಾಲೂಕು ದಂಡಾಧಿಕಾರಿಗಳಾದ ವಾಯ್ ಎಸ್ ಸೋಮನಕಟ್ಟಿ ಅವರು ಮಾತನಾಡುತ್ತಾ, ಹಳಕಟ್ಟಿ ಅವರದು ಸರಳ ಜೀವನ ಉನ್ನತ ವಿಚಾರವಾಗಿತ್ತು. ಸರ್ಕಾರ ಅವರ ಜಯಂತಿ ದಿನವನ್ನು ವಚನ ಸಂರಕ್ಷಣಾ ದಿನವನ್ನಾಗಿ ಆಚರಿಸುತ್ತಿರುವುದು ಸ್ತುತ್ಯವಾಗಿದೆ ಎಂದರು.

ಪೂಜಾ ಸ್ಮರಣೆಯಲ್ಲಿ ಕಾರ್ಯಾಲಯದ ಸಿಬ್ಬಂದಿ ಜೊತೆ ಶರಣರಾದ ಎಸ್ ಕೆ ಸೋಮನಕಟ್ಟಿ, ವಿವೇಕಾನಂದ ಕಲ್ಯಾಣಶೆಟ್ಟಿ, ಬಿ ಎಸ್ ಪಟ್ಟಣದ,ಶ್ರೀಶೈಲ ಸಿರಗುಪ್ಪಿ, ಕಾಶಿನಾಥ ಎಸ್ ಅವಟಿ,ಆಯ್ ಜಿ ಬೆಕಿನಾಳ, ಲಕ್ಷ್ಮಣ ಮೇತ್ರಿ, ಶಿವಾನಂದ ತುಬಾಕಿ, ಅಮೀರ ಕೊರಬು, ಜಿ. ಆಯ್ ಬೆಕಿನಾಳ,ವಿಲಾಸ ಜಾಡರ, ಎನ್ ಎನ್ ಹೊಸಮನಿ ಮತ್ತಿತರರು ಇದ್ದರು.ಸಿದ್ದು ಶಿರಶ್ಯಾಡ ನಿರೂಪಿಸಿದರು, ಎಸ್ ಬಿ ಅಂಕದ ವಂದಿಸಿದರು.

# ದಲಿತರ ಮೇಲೆ ನಿರಂತರ ದೌರ್ಜನ್ಯ: ತಪ್ಪಿತಸ್ಥರಿಗೆ ಕಠಿಣ ಕ್ರಮ, ಸುಳ್ಳು ಪ್ರಕರಣಗಳನ್ನು ಹಿಂಪಡೆಯಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ರಾಜ್ಯದಲ್ಲಿ ದಲಿತ ಸಮುದಾಯದ ಮೇಲೆ ನಡೆಯುತ್ತಿರುವ ಜಾತಿ ದೌರ್ಜನ್ಯ, ಸಾಮಾಜಿಕ ಬಹಿಷ್ಕಾರ ಮತ್ತು ಸುಳ್ಳು ಪ್ರಕರಣಗಳ ಸರಣಿ ಮುಂದುವರಿಯುತ್ತಿದ್ದು, ಈ ಕೂಡಲೇ ಸರ್ಕಾರ ಮಧ್ಯಪ್ರವೇಶಿಸಿ ಸಂತ್ರಸ್ತರಿಗೆ ನ್ಯಾಯ ಒದಗಿಸಬೇಕೆಂದು ದಲಿತಪರ ಸಂಘಟನೆಗಳ ಒಕ್ಕೂಟ ಆಗ್ರಹಿಸಿದೆ.ಸಿಂಧನೂರು ತಹಸೀಲ್ದಾರ್ ಅವರ ಮೂಲಕ ಮಾನ್ಯ ಮುಖ್ಯಮಂತ್ರಿಗಳು ಮತ್ತು ಗೃಹ ಸಚಿವರಿಗೆ ಮನವಿ ಸಲ್ಲಿಸಿದ ಒಕ್ಕೂಟದ ಪದಾಧಿಕಾರಿಗಳು, ಇತ್ತೀಚೆಗೆ ಕೊಪ್ಪಳ ಜಿಲ್ಲೆಯ ಬೋಚನಹಳ್ಳಿ, ಲಿಂಗಸುಗೂರು ತಾಲೂಕಿನ ಗೆಜ್ಜಲಗಟ್ಟ, ಮಸ್ಕಿ ತಾಲೂಕಿನ ಎಂ. ರಾಮಲದಿನ್ನಿ ಹಾಗೂ ಸಿಂಧನೂರು ನಗರದಲ್ಲಿ ನಡೆದ ಘಟನೆಗಳ ಬಗ್ಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.ಪ್ರಮುಖ ಆಗ್ರಹಗಳು: * ನಿಷ್ಪಕ್ಷಪಾತ ತನಿಖೆ:ನಡೆದ ಎಲ್ಲಾ ದೌರ್ಜನ್ಯ ಪ್ರಕರಣಗಳ ಕುರಿತು ತ್ವರಿತ ಹಾಗೂ ನಿಷ್ಪಕ್ಷಪಾತ ತನಿಖೆಯಾಗಬೇಕು. *ಶಿಕ್ಷೆ: ದೌರ್ಜನ್ಯ ಎಸಗಿದವರನ್ನು ತಕ್ಷಣ ಬಂಧಿಸಿ, ಎಸ್‌ಸಿ/ಎಸ್‌ಟಿ (ದೌರ್ಜನ್ಯ ತಡೆ) ಕಾಯ್ದೆಯಡಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. * ಸುಳ್ಳು ಪ್ರಕರಣಗಳ ಹಿಂಪಡೆಯುವಿಕೆ: ದಲಿತರ ಮೇಲೆ ದುರುದ್ದೇಶದಿಂದ ದಾಖಲಿಸಿರುವ ಎಲ್ಲಾ ಸುಳ್ಳು ಪ್ರಕರಣಗಳನ್ನು ಸರ್ಕಾರ ಕೂಡಲೇ ಕೈಬಿಡಬೇಕು. ಸಂತ್ರಸ್ತರಿಗೆ ಪರಿಹಾರ: ಸಂತ್ರಸ್ತ ಕುಟುಂಬಗಳಿಗೆ ಸರ್ಕಾರದ ನಿಯಮದಂತೆ ಸೂಕ್ತ ಪರಿಹಾರ, ರಕ್ಷಣೆ ಮತ್ತು ಪುನರ್ವಸತಿ ಕಲ್ಪಿಸಬೇಕು. ಕಟ್ಟುನಿಟ್ಟಿನ ಕ್ರಮ:ಜಾತಿ ದೌರ್ಜನ್ಯ ತಡೆಯಲು ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಗೆ ಸ್ಪಷ್ಟ ನಿರ್ದೇಶನ ನೀಡಬೇಕು.ಈ ವೇಳೆ ಮಾತನಾಡಿದ ಮುಖಂಡರು, "ಸಂವಿಧಾನ ಜಾರಿಯಾಗಿ 75 ವರ್ಷ ಕಳೆದರೂ ದಲಿತರ ಮೇಲೆ ದೌರ್ಜನ್ಯ ನಡೆಯುತ್ತಿರುವುದು ನಾಚಿಕೆಗೇಡಿನ ಸಂಗತಿ. ಇದು ಕೇವಲ ಕಾನೂನು ಸುವ್ಯವಸ್ಥೆಯ ವೈಫಲ್ಯವಲ್ಲ, ಸಂವಿಧಾನದ ಆಶಯಗಳ ಮೇಲಿನ ಬಹಿರಂಗ ದಾಳಿ. ದಲಿತರು ನ್ಯಾಯ ಕೇಳುವುದು ಅಪರಾಧವಲ್ಲ, ಅದು ಸಂವಿಧಾನ ನೀಡಿದ ಹಕ್ಕು. ಈ ಹಕ್ಕನ್ನು ಹತ್ತಿಕ್ಕುವವರನ್ನು ಸರ್ಕಾರ ಸಹಿಸಬಾರದು" ಎಂದು ಎಚ್ಚರಿಸಿದರು. ಸರ್ಕಾರ ಕೂಡಲೇ ಸ್ಪಂದಿಸದಿದ್ದಲ್ಲಿ ರಾಜ್ಯವ್ಯಾಪಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸಂಘಟನೆ ಮುಖಂಡರು ಎಚ್ಚರಿಕೆ ನೀಡಿದರು.ಈ ಮನವಿ ಸಲ್ಲಿಕೆ ಕಾರ್ಯಕ್ರಮದಲ್ಲಿ ಮೌನೇಶ ಜಾಲವಾಡಗಿ, ಹನುಮಂತಪ್ಪ ಗೊಮರ್ಶಿ, ಮರಿಯಪ್ಪ ಬಿಎಸ್‌ಪಿ, ನರಸಪ್ಪ ಕಟ್ಟಿಮನಿ, ಶಿವರಾಜ ಉಪ್ಪಲದೊಡ್ಡಿ, ನಿರುಪಾದಿ ಸಾಸಲಮರಿ, ಸಾಗರ, ಉಮೇಶ ಸುಕಲ್ಪೇಟೆ, ಬಸವರಾಜ್ ಬಾದರ್ಲಿ, ವೆಂಕಟೇಶ್ ಗಿರಿ ಜಾಲಿ, ಆಲಂಬಷ ಮಾದಿಗ, ಈರಣ್ಣ ಸುಲ್ತಾನಾಪುರ, ಹನುಮೇಶ ಮೈತ್ರಿ, ಪಂಪಾಪತಿ ಹಂಚಿನಾಳ, ಸುರೇಶ ಎಲೆಕೂಡ್ಲಿಗಿ, ಜಂಬಣ್ಣ ಉಪ್ಪಲದೊಡ್ಡಿ, ರಮೇಶ ಶ್ರೀನಿವಾಸ ಕ್ಯಾಂಪ್, ಹುಸೇನಪ್ಪ ವಿರುಪಾಪುರ, ಮುದಿಯಪ್ಪ ಹೊಸಳ್ಳಿ, ಎಚ್. ಆರ್. ಹೊಸಮನಿ, ಮಾಬುಸಾಬ್ ಬೆಳ್ಳಟ್ಟಿ, ಯಮನೂರ ಬಸಾಪುರ, ಹುಲುಗಪ್ಪ ಜಾಲಿಹಾಳ, ಮಲ್ಲಿಕಾರ್ಜುನ್ ಯಾಪಲಪರ್ವಿ, ಛತ್ರಪ್ಪ ಬಸಾಪುರ, ಶಂಕರ್ ವಿರುಪಾಪುರ, ಉಮೇಶ ಮುಳ್ಳೂರು, ರಾಮಣ್ಣ ತುರುವಿಹಾಳ, ದರಗಯ್ಯ, ಎರ್ರಿಸ್ವಾಮಿ ರೌಡ್ಕುಂದ ಸೇರಿದಂತೆ ಹಲವು ಮುಖಂಡರು ಪಾಲ್ಗೊಂಡಿದ್ದರು.

# ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಬಸ್ ಸೌಲಭ್ಯ ಕಲ್ಪಿಸಿ ಸಾರಿಗೆ ಇಲಾಖೆಗೆ ವಿದ್ಯಾರ್ಥಿಗಳು, ನಾಗರಿಕರ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.03.ಪ್ರತಿನಿತ್ಯ ಶಾಲಾ-ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ಬಸ್ ಸೌಲಭ್ಯ ಇಲ್ಲದೆ ತೀವ್ರ ತೊಂದರೆ ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ, ಕೂಡಲೇ ಬಸ್ ವ್ಯವಸ್ಥೆ ಕಲ್ಪಿಸಬೇಕೆಂದು ಆಗ್ರಹಿಸಿ ಸಾರಿಗೆ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಲಾಯಿತು.

ಮುಳ್ಳೂರು, ಕಲ್ಲೂರು ಮತ್ತು ಬೂತಲದಿನ್ನಿ ಗ್ರಾಮಗಳ ವಿದ್ಯಾರ್ಥಿಗಳು ಬಸ್ ಸೌಕರ್ಯವಿಲ್ಲದೆ ಪರದಾಡುತ್ತಿದ್ದಾರೆ.

ವಿದ್ಯಾರ್ಥಿಗಳ ಬಳಿ ಸರ್ಕಾರಿ ಬಸ್ ಪಾಸ್ ಇದ್ದರೂ, ಬಸ್‌ಗಳು ಈ ಊರುಗಳಿಗೆ ಸ್ಟಾಪ್ ಮಾಡದೇ ಕಾರಣ ಯಾವುದೇ ಪ್ರಯೋಜನವಾಗುತ್ತಿಲ್ಲ. ಸಕಾಲಕ್ಕೆ ಬಸ್ ಸಿಗದೇ ಇರುವುದರಿಂದ ವಿದ್ಯಾರ್ಥಿಗಳು ಅನಿವಾರ್ಯವಾಗಿ ಖಾಸಗಿ ಆಟೋಗಳನ್ನು ಅವಲಂಬಿಸಿದ್ದು, ಪ್ರತಿದಿನ ಒಬ್ಬೊಬ್ಬ ವಿದ್ಯಾರ್ಥಿಯು 40 ರಿಂದ 50 ರೂಪಾಯಿಗಳವರೆಗೆ ಖರ್ಚು ಮಾಡುವಂತಾಗಿದೆ. ಬಡ ಕುಟುಂಬಗಳ ಪೋಷಕರಿಗೆ ಈ ಆರ್ಥಿಕ ಹೊರೆ ಅಸಹನೀಯವಾಗಿದೆ ಎಂದು ಆಗ್ರಹಿಸಿದರು.

ಈ ಕುರಿತು ಸ್ಥಳೀಯ ಮುಖಂಡ ಬಸವಂತರಾಯಗೌಡ ಮಾತನಾಡಿ, "ಕಳೆದ ಕೆಲ ದಿನಗಳ ಹಿಂದೆ ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರು ವಿದ್ಯಾರ್ಥಿಗಳ ಅನುಕೂಲಕ್ಕಾಗಿ 15 ಹೊಸ ಬಸ್ಸುಗಳನ್ನು ನೀಡಲಾಗಿದೆ ಎಂದು ಭರ್ಜರಿ ಭರವಸೆ ನೀಡಿದ್ದರು. ಆದರೆ, ವಾಸ್ತವದಲ್ಲಿ ಬಸ್ಸುಗಳೇ ಓಡಾಟ ನಡೆಸುತ್ತಿಲ್ಲ. ಆ 15 ಬಸ್ಸುಗಳು ಎಲ್ಲಿವೆ? ಕೇವಲ ಭರವಸೆಗಳನ್ನು ನೀಡುತ್ತಾ ಜನರನ್ನು, ವಿದ್ಯಾರ್ಥಿಗಳನ್ನು ಮರುಳು ಮಾಡಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಒಂದು ವೇಳೆ ನಾಳೆಯಿಂದಲೇ ವಿದ್ಯಾರ್ಥಿಗಳಿಗಾಗಿ ಬಸ್ ನಿಲುಗಡೆ ಮತ್ತು ಸುಗಮ ಸಂಚಾರ ವ್ಯವಸ್ಥೆಯನ್ನು ಮಾಡದಿದ್ದಲ್ಲಿ, ಎಸ್.ಎಫ್.ಐ ಸಂಘಟನೆಯ ನೇತೃತ್ವದಲ್ಲಿ ಗ್ರಾಮಸ್ಥರು ಮತ್ತು ವಿದ್ಯಾರ್ಥಿಗಳು ಸೇರಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ. ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಎಚ್ಚೆತ್ತು-ಕೊಂಡು ಸಮಸ್ಯೆ ಪರಿಹರಿಸಬೇಕೆಂದು ಬಸವಂತರಾಯಗೌಡ ಕಲ್ಲೂರು ಆಗ್ರಹಿಸಿದ್ದಾರೆ.

**PROCLAMATION**

NOTICE FOR APPEARANCE OF L.Rs of Judgment Debtors No. 1, 2and 3(c)(a) to (d) and 4(d)(a) to (c)

IN THE COURT OF THE ADDL. CIVIL JUDGE AND JMFC AT BHALKI

E.P. No: 8/2011

**The Decree holders:-**

Basawaraj

Versus

**The Judgment debtors :-**

Havappa died his L.Rs

**SUB:- EXECUTION PETITION ETC.,**

To,

Judgment Debtors No. 1, 2 and 3(c)(a) to (d) and 4(d)(a) to (c)

1. Laxmibai W/o Late Havappa Age: Major Occu:Housewife R/O Village Janti, Tq: Bhalki, Dist: Bidar,

2 Nirmala D/o Late Havappa, Age : 25 years,Occupation Household, R/O Village Janti, Tq :Bhalki, Dist: Bidar,

3C(a) Manjula W/o Late Sharnappa, Age: 47 years,Occupation Household, R/O Village Janti, Tq :Bhalki, Dist: Bidar,

(b) Shankar S/o Late Sharnappa, Age : 24 years,Occupation Agriculture, R/O Village Janti, Tq : Bhalki, Dist: Bidar,

(c) Siddu S/o Late Sharnappa, Age :22 years,Occupation Agriculture, R/O Village Janti, Tq :Bhalki, Dist: Bidar,

(d) Prashanth. S/o Late Sharnappa, Age :20 years,Occupation Agriculture, R/O Village Janti, Tq : Bhalki, Dist: Bidar,

4(d)(a) Jaishree W/o Late Mallikrajun, Age: 48 Occupation Household, R/O Village Janti, Tq :Bhalki, Dist: Bidar,

(b) Shivaputra S/o Late Mallikrajun, Age : 28 years,Occupation Agriculture, R/O Village Janti, Tq :Bhalki, Dist: Bidar,

(c) Siddharth S/o Late Mallikrajun, Age : 25 years,Occupation Private Service , R/O Village Janti, Tq : Bhalki, Dist: Bidar,

Whereas the decree holders have filed a execution partition in respect of the notice on draft sale deed.

The Court has issued the suit summons / notices to the L.Rs.of judgment Debtors No. 1, 2 and 3(c)(a) to (d) and 4(d)(a) to (c))of the L.Rs of judgment debtors to appear before this court, the same Notices and summons are returned un-served. It appear you are avoiding to receive the same, and hence decree holder is constrained to get publish the same.

You are hereby directed to appear this Court on 10-08-2026 at 11 A.M. in persons or through your counsel. If you failed to appear before the court on the above said date and time. The case will be heard and determined in your absence as per Law.

Given under my hand and seal of the court on this the 3rd day of July 2026.

//By Order of Court//
SD-
Sheristedar/Chief Ministerial
Officer, ADDL Civil Judge and
JMFC Court at Bhalki



ಬಸವನಬಾಗೇವಾಡಿ: ಸ್ಥಳೀಯ ಮತಕ್ಷೇತ್ರದ 3 ನೇ ವಾರ್ಡಿನ ಬೂತ್ ಸಂಖ್ಯೆ 63 ರಲ್ಲಿ ಎಸ್ಐಆರ್ ಕುರಿತು ಎನ್ಯೂಮರೇಷನ್ ಫಾರ್ಮ್ ಅನ್ನು ನಿವಾಸಿಗಳಿಗೆ ಹಂಚಿ ಹಾಗೂ ಅದನ್ನು ತುಂಬುವ ವಿಧಾನದ ಬಗ್ಗೆ ಮಾಹಿತಿಯನ್ನು ತಿಳಿಸಲಾಯಿತು . ಈಸಂದರ್ಭದಲ್ಲಿ ಮಾಜಿ ಪುರಸಭೆ ಸದಸ್ಯರಾದ ಲಾಲಸಾಬ ರಗಟಿ, ಮೌನೇಶ್ ಬಡಿಗೇರ್, ಆಬಿದ್ ತಾಂಬೋಲಿ, ಸೋಹೆಬ್, ದಾವಲಮಲಿಕ್ ಚಪ್ಪರಬಂದ್, ಜಂಗ್ಲಿ ಭಾಷಾ ವಾಲಿಕಾರ, ಇಸಾಕ್ ನಾಯ್ಕೋಡಿ, ರಜಾಕಸಾಬ ಗಬ್ಬೂರು ಹಾಗೂ ಬಿ ಎಲ್ ಓ ಲೀಲಾವತಿ ಕೋರಿ ಹಾಗೂ ಗ್ಯಾರಂಟಿ ಯೋಜನೆಯ ತಾಲೂಕ ಅಧ್ಯಕ್ಷರಾದ ಮಹಿಬೂಬ. ಎಲ್. ನಾಯ್ಕೋಡಿ ಹಾಜರಿದ್ದರು.

# ದೈಹಿಕ ಆರೋಗ್ಯದಷ್ಟೇ ಮಾನಸಿಕ ಆರೋಗ್ಯವೂ ಮುಖ್ಯ : ಜಗದೀಶ

• **ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ**



ಜು 3: ಫಾದರ್ ಶಾಬು ಫ್ರಾನ್ಸಿಸ್ ಖಆಃ, ನಿರ್ದೇಶಕರು, ಡಾನ್ ಬಾಸ್ಕೋ ಸಮಾಜ ಸೇವಾ ಕೇಂದ್ರ (DBCSA), ಯಾದಗಿರಿ ಅವರ ಮಾರ್ಗದರ್ಶನದಲ್ಲಿ ಡಾನ್ ಬಾಸ್ಕೋ ಸಂಸ್ಥೆಯ ಮೈಂಡ್ಸ್ (MINDS) ಯೋಜನೆಯಡಿ ಶಿಕ್ಷಕರು ಹಾಗೂ ಸ್ವಯಂಸೇವಕರಿಗಾಗಿ ಮಾನಸಿಕ ಆರೋಗ್ಯ ಜಾಗೃತಿ ಮತ್ತು ಸಾಮರ್ಥ್ಯವರ್ಧಕ ತರಬೇತಿ ಕಾರ್ಯಕ್ರಮವನ್ನು ಯಾದಗಿರಿ ತಾಲೂಕಿನ ಕ್ಷೇತ್ರ ಸಂಪನ್ಮೂಲ ಕೇಂದ್ರ (BRC), ಸಾರ್ವಜನಿಕ ಶಾಲಾ ಶಿಕ್ಷಣ ಇಲಾಖೆ, ಯಾದಗಿರಿ ಇವರ ಸಹಯೋಗದಲ್ಲಿ ಆಯೋಜಿಸಲಾಯಿತು.

ಈ ತರಬೇತಿ ಕಾರ್ಯಕ್ರಮದಲ್ಲಿ ಯಾದಗಿರಿ ತಾಲೂಕಿನ 24 ಶಾಲೆಗಳಿಂದ 50 ಶಿಕ್ಷಕರು ಹಾಗೂ 12 ಸ್ವಯಂಸೇವಕರು ಸೇರಿದಂತೆ ಒಟ್ಟು 62 ಮಂದಿ ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶ್ರೀ ಜಗದೀಶ ಸಜ್ಜನ್, ಕ್ಷೇತ್ರ ಸಮನ್ವಯ ಅಧಿಕಾರಿಗಳು, ಯಾದಗಿರಿ ಅವರು, "ದೈಹಿಕ ಆರೋಗ್ಯದಷ್ಟೇ ಮಾನಸಿಕ ಆರೋಗ್ಯವೂ ಅತ್ಯಂತ ಮುಖ್ಯವಾಗಿದೆ. ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಶಾಲಾ ಹಂತದಲ್ಲಿಯೇ ಮಕ್ಕಳ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಗುರುತಿಸಿ, ಅಗತ್ಯವಿರುವವರಿಗೆ ಸೂಕ್ತ ಮಾರ್ಗದರ್ಶನ ಮತ್ತು ಬೆಂಬಲ ನೀಡುವುದು ಶಿಕ್ಷಕರ ಪ್ರಮುಖ ಜವಾಬ್ದಾರಿಯಾಗಿದೆ" ಎಂದು ತಿಳಿಸಿದರು.

ವೇದಿಕೆಯಲ್ಲಿ ಮಲ್ಲಪ್ಪ ಮ್ಯಾಗೇರಿ, ಸಮುದಾಯ ಸಂಪನ್ಮೂಲ ವ್ಯಕ್ತಿಗಳು (CRP), ಯಾದಗಿರಿ ಹಾಗೂ ಶ್ರೀ ಭೀಮರಾಯ ಬೊಮ್ಮನ್, ತಾಲೂಕು ದೈಹಿಕ ಶಿಕ್ಷಣ ಅಧ್ಯಕ್ಷರು, ಯಾದಗಿರಿ ಉಪಸ್ಥಿತರಿದ್ದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶ್ರೀ ಶರಣಪ್ಪ ಅಮರಾಪುರ, ಸಂಯೋಜಕರು ಮೈಂಡ್ಸ್ ಯೋಜನೆಯ ಕುರಿತು ಮಾಹಿತಿ ನೀಡಿ, ಡಾನ್ ಬಾಸ್ಕೋ ಸಂಸ್ಥೆಯು ಯಾದಗಿರಿ ತಾಲೂಕಿನ 52 ಶಾಲೆಗಳಲ್ಲಿ ಕಳೆದ ಎರಡು ವರ್ಷಗಳಿಂದ ಸುಮಾರು 3,000 ವಿದ್ಯಾರ್ಥಿಗಳು ಮತ್ತು ಪೋಷಕರಿಗೆ, 100 ಶಿಕ್ಷಕರಿಗೆ ಹಾಗೂ 20 ಸ್ವಯಂಸೇವಕರಿಗೆ ಮಾನಸಿಕ ಆರೋಗ್ಯ ಕುರಿತು ತರಬೇತಿ ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿದೆ ಎಂದು ತಿಳಿಸಿದರು. ಶಿಕ್ಷಕರು ಶಾಲಾ ಮಟ್ಟದಲ್ಲಿಯೇ ಮಕ್ಕಳಲ್ಲಿ ಕಂಡುಬರುವ ಆರಂಭಿಕ ಮಾನಸಿಕ ಸಮಸ್ಯೆಗಳನ್ನು ಗುರುತಿಸಿ ಸಮಯೋಚಿತವಾಗಿ ಪರಿಹಾರ ಒದಗಿಸಿದರೆ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಜೊತೆಗೆ, ವಿಶ್ವ ಆರೋಗ್ಯ ಸಂಸ್ಥೆ (WHO) ಶಿಫಾರಸು ಮಾಡಿರುವ ಉತ್ತಮ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಅಗತ್ಯವಾದ 10 ಪ್ರಮುಖ ಅಂಶಗಳನ್ನು ಶಿಕ್ಷಕರಿಗೆ ವಿವರಿಸಿದರು. ವಿಜಯಕುಮಾರ್, ಸಮಾಜ ಸೇವಕರು, ಸರ್ಕಾರಿ ಜಿಲ್ಲಾ ತಂಬಾಕು ನಿಯಂತ್ರಣ ಘಟಕ, ಯಾದಗಿರಿ ಅವರು "ತಂಬಾಕು ನಿಯಂತ್ರಣ" ವಿಷಯದ ಕುರಿತು ತರಬೇತಿ ನೀಡಿ, ತಂಬಾಕು ಸೇವನೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳು, ವ್ಯಸನದ ದುಷ್ಪರಿಣಾಮಗಳು, ಅಔಖಿಕಂ ಕಾಯ್ದೆ, ಶಾಲಾ ಆವರಣವನ್ನು ತಂಬಾಕು ಮುಕ್ತ ವಾತಾವರಣವನ್ನಾಗಿ ರೂಪಿಸುವ ಕ್ರಮಗಳು ಹಾಗೂ ವಿದ್ಯಾರ್ಥಿಗಳಲ್ಲಿ ತಂಬಾಕು ವಿರೋಧಿ ಜಾಗೃತಿ ಮೂಡಿಸುವಲ್ಲಿ ಶಿಕ್ಷಕರ ಪಾತ್ರದ ಕುರಿತು ವಿವರಿಸಿದರು.

ತದನಂತರ ಶ್ರೀ ಮಲ್ಲಿಕಾರ್ಜುನ ಮ್ಯಾಗೇರಿ, ಕ್ಲಿನಿಕಲ್ ಮನೋಶಾಸ್ತ್ರಜ್ಞರು, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ, ಯಾದಗಿರಿ ಅವರು ಮಾನಸಿಕ ಆರೋಗ್ಯ ಸಮಸ್ಯೆಗಳ ಆರಂಭಿಕ ಲಕ್ಷಣಗಳು, ಅವುಗಳನ್ನು ಗುರುತಿಸುವ ವಿಧಾನಗಳು ಹಾಗೂ ಸೂಕ್ತ ಸಮಯದಲ್ಲಿ ನೆರವು ಪಡೆಯುವ ಅಗತ್ಯತೆಯ ಕುರಿತು ಸಮಗ್ರ ಮಾಹಿತಿ ನೀಡಿದರು. ಇದೇ ವೇಳೆ "ರಾಷ್ಟ್ರೀಯ ಟೆಲಿ–ಮಾನಸ್ (Tele-MANAS) ಸಹಾಯವಾಣಿ – 14416" ಕುರಿತು ಮಾಹಿತಿ ನೀಡಿ, ಮಾನಸಿಕ ಒತ್ತಡ, ಆತಂಕ, ಖಿನ್ನತೆ, ಭಯ ಸೇರಿದಂತೆ ವಿವಿಧ ಮಾನಸಿಕ ಸಮಸ್ಯೆಗಳಿಂದ ಬಳಲುವವರಿಗೆ 14416 ಸಂಖ್ಯೆಗೆ ಕರೆ ಮಾಡುವ ಮೂಲಕ ಉಚಿತವಾಗಿ ತಜ್ಞರ ಸಲಹೆ ಮತ್ತು ಸಮಾಲೋಚನೆ ಪಡೆಯಬಹುದಾಗಿದೆ ಎಂದು ತಿಳಿಸಿದರು. ಈ ಸೇವೆಯ ಬಗ್ಗೆ ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಶಿಕ್ಷಕರು ಮತ್ತು ಸ್ವಯಂಸೇವಕರು ಪ್ರಮುಖ ಪಾತ್ರವಹಿಸಬೇಕು ಎಂದು ಕರೆ ನೀಡಿದರು. ಮೈಂಡ್ಸ್ ಯೋಜನೆಯ ಆಪ್ತ ಸಮಾಲೋಚಕರಾದ ಕು. ಸೂರ್ಯಕಾಂತ್ ಕೊಯಿಲೂರು ಅವರು ಕಾರ್ಯಕ್ರಮಕ್ಕೆ ಸ್ವಾಗತ ಕೋರಿದರು. ಶ್ರೀ ಅನಿಲ್, ತಾಲೂಕು ದೈಹಿಕ ಶಿಕ್ಷಣಾಧಿಕಾರಿಗಳು ಕಾರ್ಯಕ್ರಮವನ್ನು ನಿರೂಪಿಸಿ, ವಂದನಾರ್ಪಣೆ ಸಲ್ಲಿಸಿದರು. ತರಬೇತಿ ಕಾರ್ಯಕ್ರಮದ ಅಂತ್ಯದಲ್ಲಿ ಶಿಕ್ಷಕರು ಹಾಗೂ ಸ್ವಯಂಸೇವಕರು ವಿವಿಧ ವಿಷಯಗಳಿಗೆ ಸಂಬಂಧಿಸಿದ ಪ್ರಶ್ನೆಗಳನ್ನು ಕೇಳಿ ತಮ್ಮ ಅನುಮಾನಗಳಿಗೆ ತಜ್ಞರಿಂದ ಸ್ಪಷ್ಟನೆ ಪಡೆದರು. ಒಟ್ಟಾರೆಯಾಗಿ, ಈ ತರಬೇತಿ ಕಾರ್ಯಕ್ರಮವು ಭಾಗವಹಿಸಿದ ಶಿಕ್ಷಕರು ಮತ್ತು ಸ್ವಯಂಸೇವಕರಲ್ಲಿ ಮಾನಸಿಕ ಆರೋಗ್ಯ ಸಂರಕ್ಷಣೆ, ಆರಂಭಿಕ ಮಾನಸಿಕ ಸಮಸ್ಯೆಗಳ ಗುರುತಿಸುವಿಕೆ, ಟೆಲಿ–ಮಾನಸ್ 14416 ಸಹಾಯವಾಣಿ ಸೇವೆಯ ಬಳಕೆ ಹಾಗೂ ತಂಬಾಕು ನಿಯಂತ್ರಣ ಕುರಿತು ಪರಿಣಾಮಕಾರಿ ಅರಿವು ಮತ್ತು ಜಾಗೃತಿ ಮೂಡಿಸುವಲ್ಲಿ ಯಶಸ್ವಿಯಾಯಿತು.

# ಸಮಾಜದ ಅಭಿವೃದ್ಧಿಗೆ ಒಗ್ಗಟ್ಟಿನ ಅಗತ್ಯ: ಡಾ. ಸುರೇಶ ಸಜ್ಜನ್

• **ಮಲ್ಲಮ್ಮ ನುಡಿ ವಾರ್ತೆ ಹುಣಸಗಿ**



"ಸಮಾಜದ ಎಲ್ಲರನ್ನು ಒಗ್ಗೂಡಿಸಿಕೊಂಡು ಶಿಕ್ಷಣ, ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಆದ್ಯತೆ ನೀಡಬೇಕು. ಸಮಾಜದ ಪ್ರಗತಿಗೆ ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು" ಎಂದು ಗಾನೀಗ ಸಮಾಜದ ನೂತನ ರಾಜ್ಯಾಧ್ಯಕ್ಷ ಡಾ. ಸುರೇಶ ಸಜ್ಜನ್ ಹೇಳಿದರು.

ಪಟ್ಟಣದ ಗುರುಲಿಂಗಪ್ಪ ಸಜ್ಜನ ಅವರ ಮನೆ ಮುಂಭಾಗದಲ್ಲಿ ಹುಣಸಗಿ ಗಾನೀಗ ಸಮಾಜದ ವತಿಯಿಂದ ಆಯೋಜಿಸಿದ್ದ ಅಭಿನಂದನಾ, ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದರು. ಗಾನೀಗ ಸಮಾಜದ ರಾಜ್ಯಾಧ್ಯಕ್ಷರಾಗಿ ನೇಮಕಗೊಂಡ ಹಿನ್ನೆಲೆಯಲ್ಲಿ ಡಾ. ಸುರೇಶ ಸಜ್ಜನ್ ಅವರನ್ನು ಶಾಲು ಹೊದಿಸಿ, ಫಲಪುಷ್ಪ ನೀಡಿ ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಎಂ.ಬಿ.ಬಿ.ಎಸ್. ವಿಭಾಗದಲ್ಲಿ ಪ್ರಜ್ಞಾ, ಎಸ್ಎಸ್ಎಲ್ಸಿಯಲ್ಲಿ 90% ಕ್ಕಿಂತ ಹೆಚ್ಚು ಅಂಕ ಗಳಿಸಿದ ಭಾಗ್ಯಶ್ರೀ, ಅನುಶ್ರೀ, ಸುಮನ್, ಅನಿತಾ, ಅಕ್ಷಯ, ದೇವಮ್ಮ ಹಾಗೂ ಭೂಮಿಕಾ, ಪಿಯುಸಿಯಲ್ಲಿ ಉತ್ತಮ ಸಾಧನೆ ಮಾಡಿದ ಸುಪ್ರೀತ್, ಭಾಗ್ಯಶ್ರೀ, ನಂದೀಶ್ ಹಾಗೂ ಭೀಮಾಶಂಕರ್ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಬಸವರಾಜ್ ಸಜ್ಜನ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವುದು ಸಮಾಜದ ಜವಾಬ್ದಾರಿ ಎಂದು ಹೇಳಿದರು. ಸಂಗಮ್ಮ ಸಜ್ಜನ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಸಾಹೇಬಗೌಡ ಬಿರಾದಾರ್ (ಸೈನಿಕ್ ಸೇವೆ), ಬಾಲಪ್ಪ ಕುಪ್ಪಿ, ಪತ್ರಕರ್ತೆ ರೇಣುಕಾ ಪೌಜದಾ, ಗುರಲಿಂಗಪ್ಪ ಸಜ್ಜನ, ಕಳ್ಳದೇವನಹಳ್ಳಿ ನಿಂಗನಗೌಡ್ರ, ಚಂದ್ರಶೇಖರ ಬೋರಮಗೊಂಡ, ಪ್ರಕಾಶ್ ಸಜ್ಜನ, ಚಂದ್ರಶೇಖರ ಸಜ್ಜನ, ವಿಜಯಕುಮಾರ್, ರಾಜು ಸಾಲೋಡಗಿ, ಬಸವರಾಜ್ ಸಜ್ಜನ ಹಾಗೂ ಪರಮಾನಂದ ಸೇರಿದಂತೆ ಸಮಾಜದ ಮುಖಂಡರು, ಹಿರಿಯರು, ಮಹಿಳೆಯರು, ಯುವಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**



ವಚನ ಪಿತಾಮಹರೆಂದೇ ಖ್ಯಾತರಾದ ಫ.ಗು. ಹಳಕಟ್ಟಿಯವರು 12ನೇ ಶತಮಾನದ ಬಸವಾದಿ ಶರಣರ ವಚನಗಳನ್ನು ಸಂರಕ್ಷಿಸಲು ತಮ್ಮ ಜೀವನವನ್ನೇ ಮುಡಿಪಾಗಿಟ್ಟು, ವಚನಗಳಿಗೆ ಶಾಶ್ವತ ಅಸ್ತಿತ್ವ ದೊರಕಿಸಿಕೊಟ್ಟರು ಎಂದು ಕೊಪ್ಪಳದ ಶ್ರೀ ಗವಿಸಿದ್ದೇಶ್ವರ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಶರಣಬಸಪ್ಪ ಬಿಳಿಎಲಿ ಅವರು ಹೇಳಿದರು. ಗುರುವಾರದಂದು ಕೊಪ್ಪಳದ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ) ದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಫ.ಗು. ಹಳಕಟ್ಟಿಯವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

12ನೇ ಶತಮಾನ ಸಾಮಾಜಿಕವಾಗಿ, ಆರ್ಥಿಕವಾಗಿ, ಆಧ್ಯಾತ್ಮಿಕವಾಗಿ, ಮಹಿಳಾ ಸಬಕಲೀರಣ, ಮುಂತಾದ ವಿಷಯಗಳಿಂದಾಗಿ ಕ್ರಾಂತಿಕಾರಿ ಶತಮಾನವಾಗಿತ್ತು. ಆಗ ಬಸವಾದಿ ಶರಣರು ತಾಳೆಗರಿಯ ಮೇಲೆ ರಚಿಸಿದ ವಚನಗಳು ರಾಜ್ಯಾದ್ಯಂತ ಹಂಚಿ ಹೋದವು. ವಚನ ಸಾಹಿತ್ಯದ ಬಗ್ಗೆ ಅಪಾರ ಗೌರವ ಒಲವು ಇದ್ದ ಮೂಲತಃ ಧಾರವಾಡ ಜಿಲ್ಲೆಯ ಫಕೀರಪ್ಪ ಗುರುಬಸಪ್ಪ ಹಳಕಟ್ಟಿಯವರು ಹೀಗೆ ಹಂಚಿ ಹೋದ ವಚನಗಳನ್ನು ಸಂಗ್ರಹಿಸಲು ಆಸಕ್ತಿ ತೋರಿದರು. ಸತತ 18 ವರ್ಷಗಳ ಕಾಲ ರಾಜ್ಯಾದ್ಯಂತ ಸಂಚರಿಸಿ, ವಚನಗಳ ತಾಳೆಗರಿಯನ್ನು ಸಂಗ್ರಹಿಸಿದರು. ನಂತರ ಅವುಗಳನ್ನು ಶಾಶ್ವತವಾಗಿ ಉಳಿಸುವ ಉದ್ದೇಶದಿಂದ ಹಿತಚಿಂತಕ ಎಂಬ ಮೊಟ್ಟ ಮೊದಲ ವಚನ ಸಾಹಿತ್ಯ ಮುದ್ರಣಾಲಯವನ್ನು ಸ್ಥಾಪಿಸಿದರು. ವೃತ್ತಿಯಿಂದ ವಕೀಲರಾಗಿದ್ದ ಹಳಕಟ್ಟಿಯವರು ವಚನಗಳನ್ನು ಸಂರಕ್ಷಿಸುವ ಉದ್ದೇಶದಿಂದ ವೃತ್ತಿಯಲ್ಲಿನ ಅತ್ಯುತ್ತಮ ಅವಕಾಶಗಳನ್ನು ತ್ಯಜಿಸಿ, ತಮ್ಮ ಜೀವನವನ್ನೇ ವಚನಗಳ ಸಂರಕ್ಷಣೆಗಾಗಿ ಮುಡಿಪಾಗಿಟ್ಟರು. ವಚನ ಸಾಹಿತ್ಯ ಸಂರಕ್ಷಣೆಯಲ್ಲಿನ ಅವರ ಸಾಧನೆಗೆ ಕನ್ನಡದ ಕಣ್ವ ಬಿ.ಎಂ.ಶ್ರೀ ಅವರು ಹಳಕಟ್ಟಿವರಿಗೆ ವಚನ ಗುಮ್ಮಟ ಎಂದು ಬಿರುದು ನೀಡಿದರು. ಹಳಕಟ್ಟಿವರು ವಚನ ಪಿತಾಮಹ ಎಂದೇ ಖ್ಯಾತರಾದರು ಎಂದು ಅವರು ಹೇಳಿದರು. ಹಳಕಟ್ಟಿಯವರು ಒಟ್ಟು 2,209 ತಾಳೆಗರಿಯ ವಚನಗಳನ್ನು ಸಂಗ್ರಹಿಸಿದ್ದರು. ಅವುಗಳನ್ನು 250 ವಿವಿಧ ವಿಭಾಗಗಳಾಗಿ ವರ್ಗೀಕರಿಸಿ, 219 ಹೊಸ ವಚನಕಾರರನ್ನು ಗುರುತಿಸಿದರು. ಅಲ್ಲಿಯವರೆಗೂ ಕೇವಲ 50 ವಚನಕಾರರ ಹೆಸರುಗಳಷ್ಟನ್ನೇ ಗುರುತಿಸಲಾಗಿತ್ತು. ಹಳಕಟ್ಟಿಯವರ ವಚನಗಳ ಸಂಗ್ರಹದಿಂದ ಹೊಸ ವಚನಕಾರರು ಗುರುತಿಸಲ್ಪಟ್ಟರು. ವಿವಿಧ ವಿಭಾಗಗಳ ವಚನಗಳ ವರ್ಗೀಕರಣದಲ್ಲಿ 160 ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿ, 25,000 ಪುಟಗಳ ಸಾಹಿತ್ಯವನ್ನು ಅವರು ಬರೆದಿದ್ದಾರೆ. ಶಿವಾನುಭವ ಎಂಬ ಮಾಸಪತ್ರಿಕೆಯನ್ನು ಆರಂಭಿಸಿದ ಅವರು ಸತತ 36 ವರ್ಷಗಳ ಕಾಲ ಅದನ್ನು ಪ್ರತಿ ಮಾಹೆ ಮುದ್ರಣವಾಗುವಂತೆ ನೋಡಿಕೊಂಡರು. ಕರ್ನಾಟಕ ಏಕೀಕರಣದ ಚಳುವಳಿಗೆ ಬೆಂಬಲ ನೀಡಲು ನವಕರ್ನಾಟಕ ಎಂಬ ವಾರಪತ್ರಿಕೆಯನ್ನು ಆರಂಭಿಸಿದರು. ಕೇವಲ ನಮ್ಮ ನಾಡಿಗೆ ಮಾತ್ರವಲ್ಲದೆ, ಪ್ರಪಂಚಕ್ಕೆ ಕೊಡುಗೆಯಾಗಬಲ್ಲ ವಚನ ಸಾಹಿತ್ಯದ ಸಂರಕ್ಷಣೆಯನ್ನು ತಮ್ಮ ಬದುಕಿನ ಧ್ಯೇಯವಾಗಿ ಸಾಧಿಸಿದವರು ಹಳಕಟ್ಟಿಯವರು ಎಂದು ಅವರು ಹೇಳಿದರು.

ವಿಶ್ವಗುರು ಬಸವೇಶ್ವರ ಸಮಿತಿಯ ರಾಜೇಶ ಶಶಿಮಠ ಅವರು ಮಾತನಾಡಿ, ಫ.ಗು.ಹಳಕಟ್ಟಿಯವರು ಕೇವಲ ವಚನ ಸಾಹಿತ್ಯದ ಪಿತಾಮಹ ಮಾತ್ರವಲ್ಲ ಶಿಕ್ಷಣ ಕ್ಷೇತ್ರಕ್ಕೂ ಅವರ ಕೊಡುಗೆ ಅಪಾರವಾಗಿದೆ. ಅಖಂಡ ಬಿಜಾಪುರ ಜಿಲ್ಲೆಯಲ್ಲಿ ಮರಾಠಿ ಭಾಷೆಯ ಪ್ರಭಾವ ಹೆಚ್ಚಿರುವ ಪ್ರದೇಶದಲ್ಲಿ ಕನ್ನಡ ಭಾಷೆಯ ಉಳಿವಿಗಾಗಿ 6 ಗಂಡು ಮಕ್ಕಳ ಶಾಲೆಗಳನ್ನು ಹಾಗೂ 3 ಹೆಣ್ಣುಮಕ್ಕಳ ಶಾಲೆಯನ್ನು ತೆರೆದರು. ಇಂದಿನ ಬಿ.ಎಲ್.ಡಿ.ಇ ಸಂಸ್ಥೆಯ ಮೂಲ ಸಂಸ್ಥಾಪಕರು ಹಳಕಟ್ಟಿಯವರು. ವಿಶ್ವ ಸಾಹಿತ್ಯಕ್ಕೆ ವಚನ ಸಾಹಿತ್ಯವನ್ನು ಕೊಡುಗೆಯಾಗಿ ನೀಡಿದ್ದಾರೆ ಎಂದು ಹೇಳಿದರು. ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪಪ್ರಾಚಾರ್ಯರಾದ ಶರಣಬಸವಗೌಡ ಪಾಟೀಲ ಅವರು ಮಾತನಾಡಿ, ಇಂದಿನ ಮಕ್ಕಳು ಮೊಬೈಲ್ ಗೀಳಿನಿಂದ ಹೊರಬಂದು ಫ.ಗು.ಹಳಕಟ್ಟಿಯವರಂತಹ ಮಹನೀಯರು ನಮಗೆ ನೀಡಿದ ಕೊಡುಗೆಗಳನ್ನು ಗೌರವಿಸಿ, ಅನುಸರಿಸಬೇಕಿದೆ. ಏನನ್ನೂ ಓದದಿರುವುದು ಕೆಟ್ಟ ಸಾಹಿತ್ಯ ಓದುವುದಕ್ಕಿಂತಲೂ ಕೆಟ್ಟದ್ದು ಎಂಬ ಮಾತಿನಂತೆ ಓದುವ ಹವ್ಯಾಸವನ್ನು ಮಕ್ಕಳು ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಉಪತಹಶೀಲ್ದಾರರಾದ ಗವಿಸಿದ್ದಪ್ಪ ಮಣ್ಣೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ, ಹಿರಿಯ ಶಿಕ್ಷಕರಾದ ಮಹಮ್ಮದ್ ಅಬ್ದುಲ್ ರಹೀಮ್, ಬಸವ ಸಮಿತಿಯ ಅಧ್ಯಕ್ಷರಾದ ಬಸವರಾಜ ಬಳ್ಳೊಳ್ಳಿ, ವಿಶ್ವಗುರು ಬಸವೇಶ್ವರ ಸಮಿತಿಯ ಹನುಮೇಶ ಕಲಮಂಗಿ ಸೇರಿದಂತೆ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ: ಜಿಲ್ಲೆಯಾದ್ಯಂತ ಮೂರು ದಿನದಲ್ಲಿ 7.87 ಲಕ್ಷ ಗಣತಿ ನಮೂನೆ ವಿತರಣೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಜು.03–ವಿಶೇಷ ಸಮಗ್ರ ಮತದಾರರಪಟ್ಟಿಪರಿಷ್ಕರಣೆಕಾರ್ಯ ಜಿಲ್ಲೆಯಲ್ಲಿ ಭರದಿಂದ ಸಾಗಿದ್ದು, ಕಳೆದಮೂರುದಿನಗಳಅವಧಿಯಲ್ಲಿ ಜಿಲ್ಲೆಯಾದ್ಯಂತ ಒಟ್ಟು7,87,920(ಶೇ.33.22ಮತದಾರರಿಗೆ ಗಣತಿ ನಮೂ ನೆವಿತರಣೆಮಾಡಲಾಗಿದೆಂದು

ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆ.

2026ರಜೂನ್16ರಂತೆಜಿಲ್ಲೆಯಾದ್ಯಂತ 23,71,542 ಮತದಾರರಿದ್ದು,ಈಪೈಕಿ ಜುಲೈ 2(ಬುಧವಾರ) ವರೆಗೆ ಶೇ.33.22 ರಷ್ಟುಮತದಾರರಿಗೆಬಿ.ಎಲ್.ಓ.ಗಳು ಮನೆ ಮನೆಗೆತೆರಳಿ ಗಣತಿನಮೂನೆವಿತರಿಸಿದ್ದಾರೆ

ಇದೂವರೆಗೆಬಿ.ಎಲ್.ಓ.ಗಳು 8,318 (ಶೇ.0.35 ಮತದಾರರಿಂದ ಭರ್ತಿ ಮಾಡಿದಗಣತಿ ನಮೂನೆ ಪಡೆದು ಮೊಬೈಲ್ ತಂತ್ರಾಂಶದಲ್ಲಿ ಡಿಜಿಟೈಸ್ ಮಾಡಿದ್ದಾರೆ.

# ನಕಲಿ ದಾಖಲೆ ಸೃಷ್ಟಿಸಿ ಬೇರೆಯವರಿಗೆ ಜಮೀನು ಖಾತೆ ಆರೋಪ: ತಹಶೀಲ್ದಾರ್‌ಗೆ ಮುತ್ತಿಗೆ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ

ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿರುವ ಬೇರೊಬ್ಬರ ಜಮೀನಿಗೆ ಕಂದಾಯ ಇಲಾಖೆ ಅಧಿಕಾರಿಗಳು ನಕಲಿ ದಾಖಲೆಗಳನ್ನು ಸೃಷ್ಟಿಸಿ ಮತ್ತೊಬ್ಬರಿಗೆ ಖಾತೆ ಮಾಡಿಕೊಟ್ಟಿದ್ದಾರೆ ಎಂದು ಆರೋಪಿಸಿ ತಹಶೀಲ್ದಾರ್ ನಿಸರ್ಗ ಪ್ರಿಯಾ ಅವರನ್ನು ಮುತ್ತಿಗೆ ಹಾಕಿದ ಘಟನೆ ಗುರುವಾರ ನಡೆದಿದೆ.ತಾಲ್ಲೂಕಿನ ಬೆಟ್ಟದಪುರ ಹೋಬಳಿ ದೊಡ್ಡೇಗೌಡನ ಕೊಪ್ಪಲು ಗ್ರಾಮದ ರೈತ ಡಿ.ಪಿ.ನಾಗೇಶ್ ಕುಟುಂಬದವರು ಸುಮಾರು 50 ರೈತರ ಜೊತೆಗೂಡಿ ತಾಲ್ಲೂಕು ಆಡಳಿತ ಭವನದಲ್ಲಿರುವ ತಹಶೀಲ್ದಾರ್ ಜೆ ನಿಸರ್ಗ ಪ್ರಿಯಾ ಅವರಿಗೆ ಮುತ್ತಿಗೆ ಹಾಕಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಡಿ.ಪಿ.ನಾಗೇಶ್ ಮಾತನಾಡಿ ನಾಗನಹಳ್ಳಿ ಸರ್ವೆ ನಂಬರ್ 145/2 ರಲ್ಲಿ ನಮ್ಮ ಕುಟುಂಬದ ಸಣ್ಣೇಗೌಡ, ಕಲ್ಲೇ ಗೌಡ ಹಾಗೂ ಜವರೇಗೌಡ ರವರಿಗೆ ಸೇರಿದ

3.26 ಎಕರೆ ಜಮೀನು ಇದೆ ಇದರಲ್ಲಿ ಕಲ್ಲೇ ಗೌಡ ಎಂಬುವವರು ನಮ್ಮ ತಾತಾ ಜವರೇಗೌಡ ಎಂಬುವವರಿಗೆ ತಮ್ಮ ಭಾಗದ ಜಮೀನನ್ನು ಮಾರಾಟ ಮಾಡಿದ್ದಾರೆ ಇದರ ನಡುವೆ ಅವರ ಮಕ್ಕಳು ಮತ್ತೆ ನಮಗೆ ಭಾಗ ಬರಬೇಕು ಎಂದು ಅವರ ಮಕ್ಕಳು ನ್ಯಾಯಾಲಯದ ಮೆಟ್ಟಿಲು ಹತ್ತಿದ್ದರು ಆಗ ಮಾನ್ಯ ಘನ ನ್ಯಾಯಾಲಯ ಅವರ ಅರ್ಜಿಯನ್ನು ವಜಾ ಮಾಡಿತು ಹೀಗಿರುವಾಗ 2014 ರಲ್ಲಿ ಕಲ್ಲೇ ಗೌಡ ಮತ್ತು ಸಣ್ಣೇಗೌಡರ ಮಕ್ಕಳು ನ್ಯಾಯಾಲಯದ ಮೊರೆ ಹೋಗಿ ನ್ಯಾಯಾಲಯದಲ್ಲಿ ಇನ್ನೂ ವಿಚಾರಣೆ ನಡೆ-ಯುತ್ತಿದೆ. ಇದರ ನಡುವೆ ನಮ್ಮದೇ ಗ್ರಾಮದ ಅಣ್ಣೇಗೌಡ ಮತ್ತು ರಾಮೇಗೌಡ ಎಂಬುವವರು 2025 ರಲ್ಲಿ ಹೆಣ್ಣು ಮಕ್ಕಳ ಹೆಸರಿನಲ್ಲಿ



ಅಕ್ರಮವಾಗಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಅಕ್ರಮವಾಗಿ ಖಾತೆ ಮಾಡಿಸಿಕೊಂಡಿದ್ದಾರೆ. ಈ ಭೂಮಿ ನಮ್ಮ ಕುಟುಂಬದ ಪಿತ್ರಾರ್ಜಿತ ಆಸ್ತಿ ಈ ಆಸ್ತಿಗೂ ಅಣ್ಣೇಗೌಡ ಮತ್ತು ರಾಮೇಗೌಡರಿಗೂ ಯಾವುದೇ ಸಂಬಂಧವಿಲ್ಲ ಹೀಗಿದ್ದರೂ ಬೆಟ್ಟದಪುರ ಹೋಬಳಿಯ ಗ್ರಾಮ ಲೆಕ್ಕಾಧಿಕಾರಿ ನಿರಂಜನ್, ಅಂದಿನ ರಾಜಸ್ವ ನಿರೀಕ್ಷಕ ಅಜ್ಮಲ್ ಶರೀಫ್ ಹಾಗೂ ತಹಶೀಲ್ದಾರ್ ನಿಸರ್ಗ ಪ್ರಿಯಾ ಅವರು ರಾಮೇಗೌಡ ಮತ್ತು ಅಣ್ಣೇಗೌಡರಿಂದ ಲಂಚ ಪಡೆದು ನಕಲಿ ದಾಖಲೆಗಳನ್ನು ಸೃಷ್ಟಿಸಿ ನಮ್ಮ ಭೂಮಿಯನ್ನು ಅವರಿಗೆ ಅಕ್ರಮವಾಗಿ ಖಾತೆ ಮಾಡಿಕೊಟ್ಟಿದ್ದಾರೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಕಚೇರಿಗೆ ನುಗ್ಗಿದ ಅವರು ತಹಶೀಲ್ದಾರ್ ನಿಸರ್ಗ ಪ್ರಿಯಾ ಅವರನ್ನು ತರಾಟೆಗೆ ತೆಗೆದುಕೊಂಡು ಈ ಎಲ್ಲಾ ಅವಾಂತರಕ್ಕೆ ನೀವೇ ಕಾರಣ, ಈ ಭೂಮಿಗೆ ಸಂಬಂಧ ಪಡದ ಅಣ್ಣೇಗೌಡ ಮತ್ತು ರಾಮೇಗೌಡ ನಿಮ್ಮ ನೆಂಟರು ಹಾಗಾಗಿ ನೀವು ಅವರಿಗೆ ನಕಲು ದಾಖಲೆಗಳನ್ನು ತಯಾರಿಸಿಕೊಟ್ಟು ನಮಗೆ ಮೋಸ ಮಾಡಿದ್ದೀರಿ ಇದನ್ನು ಸರಿಪಡಿಸದಿದ್ದರೆ ನಮ್ಮ ಕುಟುಂಬದ 30 ಜನರೂ ನಿಮ್ಮ ಹೆಸರನ್ನು ಬರೆದಿಟ್ಟು ಇಲ್ಲೇ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಳ್ಳುತ್ತೇವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬೆಟ್ಟದ ತುಂಗಾ ಮೇಗಳಕೊಪ್ಪಲು ಗ್ರಾಮದ ಮುಖಂಡ ಚಿಕ್ಕೇಗೌಡ ಹಾಗೂ ರೈತ ಸಂಘದ ಮುಖಂಡ ದೇವರಾಜೇಗೌಡ ರವರು ಮದ್ಯ ಪ್ರವೇಶ ಮಾಡಿ ತಹಶೀಲ್ದಾರ್ ನಿಸರ್ಗ ಪ್ರಿಯಾ ಅವರೊಂದಿಗೆ ರಾಜಿ ಸಂಧಾನ ಮಾಡಿ ಅವರ ಮನವೊಲಿಸಿ ಈ ವಿಷಯವನ್ನು ಶಾಸಕ ಕೆ.ವೆಂಕಟೇಶ್ ರವರೊಂದಿಗೆ ಚರ್ಚಿಸಿ ಇವರಿಗೆ ನ್ಯಾಯ ಒದಗಿಸುವಂತೆ ಮನವಿ ಮಾಡಿದ್ದೇವೆ. ಇಡೀ ಗ್ರಾಮದ ಜನರಿಗೆ ಗೊತ್ತಿದೆ ಇದು ಇವರ ಕುಟುಂಬದ ಆಸ್ತಿ ಇವರ ಪೂರ್ವಿಕರು ಹತ್ತಾರು ವರ್ಷಗಳಿಂದ ಈ ಭೂಮಿಯಲ್ಲಿ ಅನುಭವ ಹೊಂದಿ ಉಳುಮೆ ಮಾಡಿಕೊಂಡು ಬರುತ್ತಿದ್ದಾರೆ ದಾಖಲೆಗಳು ವ್ಯತ್ಯಾಸವಾಗಿ ಇವರಿಗೆ ತೊಂದರೆಯಾಗಿದೆ ಇದನ್ನು ಸರಿಪಡಿಸುವ ಹೊಣೆ ನಿಮ್ಮ ಮೇಲಿದೆ ಹಾಗಾಗಿ ಇವರಿಗೆ ಅನ್ಯಾಯ ಮಾಡಬೇಡಿ ಎಂದು ಮನವರಿಕೆ ಮಾಡಿದರು.

ಈ ಸಂದರ್ಭದಲ್ಲಿ ಮುಖಂಡರಾದ ಪ್ರಭುಗೌಡ, ಮಧು, ಬಸವರಾಜು, ನಾಗೇಗೌಡ, ಕಲ್ಲೇಶ್, ಈರಯ್ಯ ಚಾರ್, ಯಶೋಧರ್, ಸಾಲು ಕೊಪ್ಪಲು ಕಿಟ್ಟಿ, ಪುಟ್ಟರಾಜು, ಅಲ್ಪನಾಯಕನಹಳ್ಳಿ ಭೀಮಾ, ಡಿ.ಜಿ.ಕೊಪ್ಪಲು ಪ್ರಸನ್ನ, ರೇವಣ್ಣ, ಸತೀಶ್, ಮಧು, ಸುರೇಶ್, ನಾಗರಾಜ್, ಹರೀಶ್, ನಾಗೇಶ್, ಕುಟುಂಬದಸ್ಥರಾದ ಜವರೇಗೌಡ, ಸಣ್ಣ ತಮ್ಮೇಗೌಡ, ಪುಟ್ಟ ತಮ್ಮೇಗೌಡ, ಲಲಿತಮ್ಮ, ತಾಯಮ್ಮ, ಲೋಕೇಶ್, ಸವಿತಾ, ಯಶೋಧಾ, ಕಲ್ಪನಾ, ತಮ್ಮೇಗೌಡ, ಜಗಣ್ಣ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಚುನಾವಣಾ ಆಯೋಗದ ವಿಶೇಷ ಪರಿಷ್ಕರಣೆ ಅಭಿಯಾನ ತಹಶೀಲ್ದಾರರಿಂದ ಎನುಮರೇಶನ್ ಅರ್ಜಿ ಸ್ವೀಕಾರ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಭಾರತೀಯ ಚುನಾವಣಾ ಆಯೋಗದ ವತಿಯಿಂದ ಹಮ್ಮಿಕೊಳ್ಳಲಾಗಿರುವ 'ವಿಶೇಷ ಸಮಗ್ರ ಪರಿಷ್ಕರಣೆ ಅಭಿಯಾನ 2026' ರ ಅಂಗವಾಗಿ, ತಹಶೀಲ್ದಾರರಾದ ಶ್ರೀ ಅಮಿತ್ ಕುಲಕರ್ಣಿ ಹಾಗೂ ಅವರ ಸಿಬ್ಬಂದಿ ವರ್ಗದವರು ಇತ್ತೀಚೆಗೆ ಶಾಸಕರ ಆಪ್ತ ಸಹಾಯಕರಾದ ರಾಮಶೇಟ್ಟಿ ಪನ್ನಾಳೆ ಅವರ ನಿವಾಸಕ್ಕೆ ಭೇಟಿ ನೀಡಿದರು.ಈ ಸಂದರ್ಭದಲ್ಲಿ ಅಧಿಕಾರಿಗಳ ತಂಡವು ಅವರ ನಿವಾಸದಲ್ಲೇ ಎನುಮರೇಶನ್ (Enumeration)ಅರ್ಜಿಯನ್ನು ಅಧಿಕೃತವಾಗಿ ಸ್ವೀಕರಿಸಿದರು. ಮತದಾರರ ಪಟ್ಟಿ ಪರಿಷ್ಕರಣೆಯ ಈ ಮಹತ್ವದ ಕಾರ್ಯಕ್ರಮದಲ್ಲಿ ಪ್ರಮುಖರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು. ಚುನಾವಣಾ ಆಯೋಗದ ಈ ವಿಶೇಷ ಅಭಿಯಾನವು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಲ್ಲಿ ಯಶಸ್ವಿಯಾಗಿದೆ.

## ಕಮಲನಗರದಲ್ಲಿ ನೀರಿನ ಸಮಸ್ಯೆಗೆ ಮುಕ್ತಿ ನೀಡಿದ ಆರ್.ಎಮ್.ಎಮ್.ಎಸ್: ಸಾರ್ವಜನಿಕರ ಮೆಚ್ಚುಗೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಕಮಲನಗರ ಪಟ್ಟಣದ ಕ್ರಾಂತಿ ನಗರದ 2ನೇ ವಾರ್ಡ್‌ನ ಕಾಲೋನಿಯಲ್ಲಿ ಕಳೆದ ಕೆಲವು ದಿನಗಳಿಂದ ತೀವ್ರವಾಗಿದ್ದ ಕುಡಿಯುವ ನೀರಿನ ಸಮಸ್ಯೆಗೆ ರಾಷ್ಟ್ರೀಯ ಮೋದಿ ಸೇವಾ ಸಮಿತಿ (RMMS)ಯಶಸ್ವಿಯಾಗಿ ಮುಕ್ತಿ ಹಾಡಿದೆ. ಸಂಘಟನೆಯ ಈ ತ್ವರಿತ ಮತ್ತು ಜನಪರ ಕಾರ್ಯಕ್ಕೆ ಸಾರ್ವಜನಿಕರಿಂದ ವ್ಯಾಪಕ ಶ್ಲಾಘನೆ ವ್ಯಕ್ತವಾಗಿದೆ.

ಸಮಸ್ಯೆ ಪರಿಹಾರಕ್ಕೆ ಶ್ರಮಿಸಿದ ತಂಡ: ಕಾಲೋನಿಯಲ್ಲಿ ಎದುರಾಗಿದ್ದ ಜಲಕ್ಷಾಮದ ಕುರಿತು ಮಾಹಿತಿ ತಿಳಿಯುತ್ತಿದ್ದಂತೆಯೇ ತಕ್ಷಣ ಕಾರ್ಯಪ್ರವೃತ್ತರಾದ ರಾಷ್ಟ್ರೀಯ ಮೋದಿ ಸೇವಾ ಸಮಿತಿಯ ಕಮಲನಗರ ತಾಲೂಕು ಅಧ್ಯಕ್ಷರಾದ ಬಬನ್ ರಾಥೋಡ್ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪಂಚಾಯತ್ ರಾಜ್ ಅಧಿಕಾರಿಗಳ (PDO) ಗಮನ ಸೆಳೆದು, ಸೂಕ್ತ ತಾಂತ್ರಿಕ ತಂಡದೊಂದಿಗೆ ತುರ್ತು ದುರಸ್ತಿ ಕಾರ್ಯಕ್ಕೆ ಚಾಲನೆ ನೀಡಿ, ನೀರಿನ ಸಮಸ್ಯೆಗೆ ಮುಕ್ತಿ ನೀಡಿದ್ದಾರೆ ಎಂದು ಕಾಲೋನಿ ಜನ ಹರ್ಷ ವ್ಯಕ್ತಪಡಿದ್ದಾರೆ.

## ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯರ ದಿನಾಚರಣೆಯನ್ನು ಗುರುವಾರ ಆಚರಿಸಲಾಯಿತು.

ಈ ಸಂದರ್ಭದಲ್ಲಿ ವೈದ್ಯರ ಸೇವೆಯನ್ನು ಸ್ಮರಿಸಿ ವೈದ್ಯರಿಗೆ ಗೌರವ ಸಲ್ಲಿಸಲಾಯಿತು. ವೈದ್ಯರು ಸಮಾಜದ ಆರೋಗ್ಯ ರಕ್ಷಣೆಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದು, ಅವರ ಸೇವೆ ಅಮೂಲ್ಯವಾಗಿದೆ ಎಂದು ಸಮುದಾಯ ಆರೋಗ್ಯ ಕೇಂದ್ರದ ಆಡಳಿತಾಧಿಕಾರಿ ಡಾ।ರಾಮಚಂದ್ರ ಮಾತನಾಡಿದರು. ಕಾರ್ಯಕ್ರಮದಲ್ಲಿ ಡಾ। ಅನಂತಕುಮಾರ,

ಡಾ। ವಿನೋದ ಇತರ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಕಾಲೇಜು ವಿದ್ಯಾರ್ಥಿಗಳಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಥಾ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಕಾರ್ಯಕ್ರಮ ಹಮ್ಮಿಕೊಂಡಿದ್ದು ಬೂತ್ ಮಟ್ಟದ ಅಧಿಕಾರಿಗೆ ಅಗತ್ಯ ಮಾಹಿತಿ ನೀಡಲು ಸಹಕರಿಸಬೇಕೆಂದು ಕೊಪ್ಪಳ ತಾಲೂಕ ಪಂಚಾಯತ ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್ ಕರೆ ನೀಡಿದರು..

ದಿನಾಂಕ:03-07-2026ರಂದು ತಾಲೂಕ ಸ್ವೀಪ್ ಸಮಿತಿ ಕೊಪ್ಪಳ ಹಾಗು ಅಳವಂಡಿ ಗಾಮ ಪಂಚಾಯತಿ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಸರ್ಕಾರಿ ಪದವಿ ಕಾಲೇಜು ವಿದ್ಯಾರ್ಥಿಗಳ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.




ಈ ಕಾರ್ಯಕ್ರಮದ ಮೂಲಕ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸುವುದು ಹಾಗೂ ಮರಣ ಹೊಂದಿರುವವರು, ಸ್ಥಳಾಂತರಗೊಂಡಿರುವವರು, ನಕಲು ಹೆಸರುಗಳು, ಮತ್ತು ಇತರ ಅನರ್ಹ ಮತದಾರರನ್ನು ಪರಿಶೀಲಿಸಿ ಸೂಕ್ತಕ್ರಮಕ್ಕೆಗೊಳ್ಳುವುದು ಇದರ ಉದ್ದೇಶವಾಗಿದೆ. ಜೂನ್ 30 ರಿಂದ ಜುಲೈ 29 ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (BLO) ಮನೆ ಮನೆಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಪರಿಶೀಲಿಸಲಿದ್ದಾರೆ. ಮತದಾರರು ಎಆರ್ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕೆಂದರು. ಬೂತ್ ಮಟ್ಟದ ಅಧಿಕಾರಿಯು ಪ್ರತಿ ಮನೆಗೆ 03 ಬಾರಿ ಭೇಟಿ ನೀಡಲಿದ್ದಾರೆ. ಅಗತ್ಯ ಮಾಹಿತಿಯನ್ನು ಪ್ರತಿಯೊಬ್ಬರು ಸಲ್ಲಿಸಲು ಇದೊಂದು ಸದಾವಕಾಶ ಹಾಗು ಹೊಸದಾಗಿ ಸೇರ್ಪಡೆಗೆ ಅವಕಾಶವಿದೆ ಎಂದರು.ವಿದ್ಯಾರ್ಥಿಗಳಿಂದ ಕಾಲ್ನಡಿಗೆ ಮೂಲಕ ಜಾಗೃತಿ ಜಾಥಾವು ಸಿದ್ದೇಶ್ವರ ಪದವಿಪೂರ್ವ ಕಾಲೇಜಿನಿಂದ ಪ್ರಾರಂಭವಾಗಿ ಗ್ರಾಮದ ಅಗಸಿ ಮಾರ್ಗವಾಗಿ ಓಣಿಗಳಲ್ಲಿ ಸಂಚರಿಸಿ ಬಸವೇಶ್ವರ ಸರ್ಕಲ್ ತಲುಪಿ ಬನ್ನಿಕಟ್ಟೆಯವರೆಗೆ ಜಾಗೃತಿ ಮೂಡಿಸಿ ಪುನಃ ಕಾಲೇಜಿನ ಆವರಣದಲ್ಲಿ ಮುಕ್ತಾಯಗೊಂಡಿತು.ಬಟಿಂಗ್ಸ್ ಪ್ರದರ್ಶನದಿಂದ ಕಾಲ್ನಡಿಗೆ ಜಾಥಾಕ್ಕೆ ಮೆರಗು ತಂದಿತು. 350 ಕ್ಕೂ ಹೆಚ್ಚು ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಈ ವೇಳೆ ಕಾರ್ಯಕ್ರಮದಲ್ಲಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯರರಾದ ನವೀನ ಇನಾಮದಾರ, ಪಂಚಾಯತ ಅಭಿವೃದ್ಧಿ ಅಧಿಕಾರಿ ಕೊಟ್ರಪ್ಪ ಅಂಗಡಿ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ಅಂಗನವಾಡಿ ಮೇಲ್ವಿಚಾರಕಿ ರಹಮತ್‌ಬೀ, ಕಾಲೇಜಿನ ಉಪನ್ಯಾಸಕರಾದ ಅಮರೇಶ, ಎಸ್ ಎಸ್ ಅಂಗಡಿ, ಗ್ರಾಮ ಪಂಚಾಯತ ಕಾರ್ಯದರ್ಶಿ ಬಸವರಾಜ, ಸಂಜೀವಿನಿ ಯೋಜನೆಯ ಮಹಿಳಾ ಸ್ವಸಹಾಯ ಸಂಘದ ಸದಸ್ಯರು, ಒಕ್ಕೂಟದ ಪದಾಧಿಕಾರಿಗಳು, ಗ್ರಾಮ ಪಂಚಾಯತಿ ಸಿಬ್ಬಂದಿಗಳು ಹಾಜರಿದ್ದರು.

## ಕಿರ್ಲೋಸ್ಕರ್ ನಿಂದ ಹೈಟೆಕ್ ಶೌಚಾಲಯ ನಿರ್ಮಾಣ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ




ಶಾಲಾ ಮಕ್ಕಳಿಗೆ ಉಪಯೋಗವಾಗುವ ನಿಟ್ಟಿನಲ್ಲಿ ತಾಲೂಕಿನ ಶಹಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಕಿರ್ಲೋಸ್ಕರ್ ಗ್ರಾಮೀಣಾಭಿವೃದ್ಧಿ ಸಂಸ್ಥೆಯಿಂದ ಹೈಟೆಕ್ ಶೌಚಾಲಯವನ್ನು ನಿರ್ಮಾಣ ಮಾಡಲಾಗಿದ್ದು, ಇದರ ಉದ್ಘಾಟನೆ ಇಂದು ಗುರುವಾರ ಜರುಗಿತು.

ಶೈಕ್ಷಣಿಕ ವರ್ಷ ಆರಂಭವಾಗಿದ್ದರಿಂದ ಇದೇವೇಳೆ ವಿದ್ಯಾರ್ಥಿಗಳಿಗೆ ಉಚಿತ ಶಾಲಾ ಬ್ಯಾಗ್ ಮತ್ತು ನೋಟ್ ಬುಕ್ ವಿತರಿಸಲಾಯಿತು. ಬೆಂಗಳೂರಿನ ಪೀಪಲ್ ಫಾರ್ ಪೀಪಲ್ ಟ್ರಸ್ಟ್ ಇವರು ಕೊಡ ಮಾಡಿದ ಮಕ್ಕಳ ದೈಹಿಕ ಹಾಗೂ ಮಾನಸಿಕ ಕಸರತ್ತಿಗೆ ಪೂರಕವಾದ ಆಟದ ಸಾಮಗ್ರಿಗಳಿಗೂ ಚಾಲನೆ ನೀಡಲಾಯಿತು. ಮಕ್ಕಳಿಗಾಗಿ ಈ ಎಲ್ಲ ಸೌಲಭ್ಯಗಳನ್ನು ಒದಗಿಸಲು ಸಹಕರಿಸಿದ ಕಿರ್ಲೋಸ್ಕರ್ ಕಂಪನಿಯ ಅಧಿಕಾರಿಗಳು, ಪೀಪಲ್ ಫಾರ್ ಪೀಪಲ್ ಟ್ರಸ್ಟ್ ಬೆಂಗಳೂರು, ಶಾಲಾ ಅಭಿವೃದ್ಧಿ ಸಮಿತಿಯವರು, ಮುಖ್ಯೋಪಾಧ್ಯಾಯರು, ಶಿಕ್ಷಕರು ಹಾಗೂ ಪುರ ಪ್ರಮುಖರಿಗೆ ಎಸ್ ಡಿ ಎಂ ಸಿ ಅಧ್ಯಕ್ಷ ಹುಲ್ಲೇಶ್ ಸಿಂದೋಗಿ ಮತ್ತು ಯುವ ಧುರೀಣರಾದ ಹುಲ್ಲೇಶ್ ಕುರಿ ಅವರು ಅಭಿನಂದಿಸಿದರು.

ಕಿರ್ಲೋಸ್ಕರ್ ಪೇರಸ್ ಗ್ರಾಮೀಣಾಭಿರುದ್ಧಿ ಸಂಸ್ಥೆಯ ಸೀನಿಯರ್ ಜನರಲ್ ಮ್ಯಾನೇಜರ್ ಕಿರಣ್, ಉದ್ಧವ್ ಕುಲಕರ್ಣಿ, ಪ್ರಕಾಶ್, ಗ್ರಾ.ಪಂ. ಆಡಳಿತ ಅಧಿಕಾರಿ ಜಗನಾಥ್ ಜೋತಗೊಂಡ, ಅಭಿವೃದ್ಧಿ ಅಧಿಕಾರಿ ಗೀತಾ ಕುಮಾರಿ, ಸರ್ವೋದಯ ಸಂಸ್ಥೆಯ ನಾಗರಾಜ ದೇಸಾಯಿ, ಅಗಳಕೇರಿ ಸಹಕಾರಿ ಬ್ಯಾಂಕ್ ನ ನಿರ್ದೇಶಕರಾದ ಮಂಜುನಾಥ್ ಕುರಿ, ಗ್ರಾಮದ ಹಿರಿಯ ಧುರೀಣರಾದ ಸುರೇಶ್ ಪಾಟೀಲ್, ಉದ್ಯಮಿ ಗಿರೀಶ್ ಹಿರೇಮಠ್, ಯುವ ಧುರೀಣರಾದ ರಾಘವೇಂದ್ರಜೋಷಿ, ಗ್ರಾ.ಪಂ.ಸದಸ್ಯರಾದ ಹಾಲಪ್ಪ ತೋಟದ್, ಮುದ್ದಪ್ಪ ಗೊಂದಿಹೊಸಳ್ಳಿ, ಮುರಳಿಧರ, ಹುಲ್ಲೇಶ್ ಕುರಿ, ಪಾಲಕ-ಪೋಷಕರು, ಎಸ್ ಡಿ ಎಂಸಿ ಉಪಾಧ್ಯಕ್ಷರಾದ ರೇವತಿ, ಸದಸ್ಯರುಗಳಾದ ಹುಲುಗಪ್ಪ, ರಾಮಾಲೆಪ್ಪ, ಮೀನಾಕ್ಷಿ, ವಿಜಯಮ್ಮ, ಹುಲಿಗೆಮ್ಮ, ಲಕ್ಷ್ಮೀದೇವಿ, ರೇಣುಕಾ, ಲಕ್ಕವ್ವ ಶಾಲಾ ಮಕ್ಕಳು ಈ ಸಂದರ್ಭದಲ್ಲಿ ಇದ್ದರು.

## ರಜಪೂತ ಅಭಿವೃದ್ಧಿ ಮಂಡಳಿ ಸ್ಥಾಪಿಸಲು ಮುಖ್ಯಮಂತ್ರಿಗಳಿಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಕರ್ನಾಟಕ ರಾಜ್ಯದಲ್ಲಿ ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಹಿಂದುಳಿದಿರುವ ರಜಪೂತ ಸಮಾಜದ ಏಳಿಗೆಗಾಗಿ ರಾಜ್ಯದಲ್ಲಿ ರಜಪೂತ ಅಭಿವೃದ್ಧಿ ಮಂಡಳಿ ಕೂಡಲೇ ಸ್ಥಾಪಿಸಲು ಕೊಪ್ಪಳ ಜಿಲ್ಲಾ ರಜಪೂತ್ ಕ್ಷೇಮಾಭಿವೃದ್ಧಿ ಸಂಘ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು.

ಮನವಿಯಲ್ಲಿ ರಾಜ್ಯದಲ್ಲಿ ಲಕ್ಷಾಂತರ ಜನಸಂಖ್ಯೆ ಹೊಂದಿರುವ ರಜಪೂತ ಸಮಾಜವು ಆರ್ಥಿಕವಾಗಿ, ಶೈಕ್ಷಣಿಕವಾಗಿ ಹಾಗೂ ಉದ್ಯೋಗದ ರಂಗದಲ್ಲಿ ತೀವ್ರವಾಗಿ ಹಿಂದುಳಿದಿದೆ. ನಮ್ಮ ಯುವ ಪೀಳಿಗೆಗೆ ಸೂಕ್ತ ಪ್ರೋತ್ಸಾಹ ಮತ್ತು ಮಾರ್ಗದರ್ಶನ ಸಿಗದೆ ಸಮಾಜವು ಇಂದಿಗೂ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತಿಲ್ಲ, ಈಗಾಗಲೇ ಕಲಬುರಗಿ ಜಿಲ್ಲಾಡಳಿತದ ಉಸ್ತುವಾರಿಯಲ್ಲಿ ರಜಪೂತ ಸಮಾಜದ ಕೌಟುಂಬಿಕ ಸಮೀಕ್ಷೆ ಹಾಗೂ ಡಿಜಿಟಲ್ ನೋಂದಣಿ ಪ್ರಕ್ರಿಯೆಯು ಅತ್ಯಂತ ಯಶಸ್ವಿಯಾಗಿ ನಡೆದಿದ್ದು ಸದರಿ ಸಮಗ್ರದತ್ತಾಂಶಗಳ ವರದಿಯು ಬೆಂಗಳೂರಿನಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಆಯೋಗದ ಪರಿಶೀಲನೆಯಲ್ಲಿದೆ, ಈ ಮಹತ್ವದ ಅಭಿಯಾನದ ಮೂಲಕ ಇಡೀ ರಾಜ್ಯದ ರಜಪೂತ ಸಮಾಜದ ಬಂಧುಗಳು ಒಗ್ಗಟ್ಟಾಗುತ್ತಿದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಆರಂಭವಾಗಿರುವ ಈ ಪ್ರಕ್ರಿಯೆಗೆ ಪೂರಕವಾಗಿ ಈಗ ಕೊಪ್ಪಳ ಜಿಲ್ಲೆಯ ರಜಪೂತ ಬಾಂಧವರೂ ಸಹ ಧ್ವನಿಗೂಡಿಸುತ್ತಿದ್ದೇವೆಆದ್ದರಿಂದ, ನಮ್ಮ ಸಮಾಜದ ಸಮಗ್ರ ಅಭಿವೃದ್ಧಿಗಾಗಿ 'ರಜಪೂತ ಅಭಿವೃದ್ಧಿ ಮಂಡಳಿ" ಯನ್ನು ತಕ್ಷಣವೇ ಸ್ಥಾಪಿಸಲು ಮುಖ್ಯಮಂತ್ರಿಗಳಿಗೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಿಗೆ ಮತ್ತು ಹಿಂದುಳಿದ ವರ್ಗಗಳ ಆಯೋಗಕ್ಕೆ ನಿಮ್ಮ ಜಿಲ್ಲಾಡಳಿತದ ಪರವಾಗಿಯೂ ತುರ್ತು ಶಿಫಾರಸು ಪತ್ರವನ್ನು ಕಳುಹಿಸಿಕೊಡಬೇಕಾಗಿ ಈ ಮೂಲಕ ವಿನಂತಿಸುತ್ತೇವೆ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ರಜಪೂತ ಸಮಾಜ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಅಮರ್ ಸಿಂಗ್ ರಜಪೂತ, ವೇಣುಗೋಪಾಲ್ ಸಿಂಗ್, ಭೀಮಸಿಂಗ್, ನರಪತ್ ಸಿಂಗ್, ವೀರೇಂದ್ರ ಸಿಂಗ್ ಉಪಸ್ಥಿತರಿದ್ದರು.

# ಅರಣ್ಯ ಇಲಾಖೆ ದಿನಗೂಲಿ ನೌಕರರಿಗೆ ಕನಿಷ್ಠ ವೇತನ ಆದ್ರೂ ನೀಡಿ : ಚಂದ್ರಪ್ಪ ಎಚ್. ಸರ್ಕಾರಕ್ಕೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕಳೆದ 25 ವರ್ಷಗಳಿಂದ ಅರಣ್ಯ ಇಲಾಖೆಯಲ್ಲಿ ಸಸಿಗಳ ಕಾವಲುಗರಾಗಿ ಸುಮಾರು ಜನರು ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿದ್ದು, ಇಲ್ಲಿವರೆಗೂ ಸೇವಾ ಭದ್ರತೆ ಕನಸಾಗಿದೆ, ಸರ್ಕಾರದ ಸೂಚನೆಯಂತೆ ಕನಿಷ್ಠ ವೇತನವೂ ನೀಡುತ್ತಿಲ್ಲ, ಪ್ರಶ್ನಿಸಿದರೆ ಕಾರಣವಿಲ್ಲದೇ ಕೆಲಸದಿಂದ ತೆಗೆಯುವುದು, ಬೇರೆ ವರ್ಗಾವಣೆ ಮಾಡುವುದು, ಬೆದರಿಕೆ ಹಾಕುವುದು ಸಾಮಾನ್ಯವಾಗಿದೆ, ಕೂಡಲೇ ಸರ್ಕಾರ ನಿಮ್ಮ ಬೇಡಿಕೆಗಳನ್ನು ಕೂಡಲೇ ಈಡೇರಿಸಬೇಕು ಎಂದು ಕರ್ನಾಟಕ ರಾಜ್ಯ ಅರಣ್ಯ ಇಲಾಖೆ ದಿನಗೂಲಿ ಹಾಗೂ ಪರಿಶಿಷ್ಟ ಜಾತಿ, ಪಂಗಡ ವರ್ಗಗಳ ನೌಕರರ ಸಂಘದ ರಾಜ್ಯಾಧ್ಯಕ್ಷ ಚಂದ್ರಪ್ಪ ಎಚ್ ಅವರು ಒತ್ತಾಯಿಸಿದರು. ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ,

25 ವರ್ಷಗಳಿಂದ ಅರಣ್ಯ ಇಲಾಖೆಯ ಪ್ರಾದೇಶಿಕ, ಸಾಮಾಜಿಕ, ವನ್ಯಜೀವಿ, ವಿಭಾಗಗಳಲ್ಲಿ ರಾಜ್ಯಾದ್ಯಂತ ದಿನಗೂಲಿ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿದ್ದಾರೆ. ಸೇವಾ ಭದ್ರತೆ, ಕನಿಷ್ಠ ವೇತನ ನೀಡಿ ಎಂದು ಪ್ರಶ್ನಿಸಿದರೆ ದಾಖಲೆಗಳಿಲ್ಲ ನೋಡೋಣ, ಮಾಡೋಣ ಎಂದು ಸರ್ಕಾರ, ಇಲಾಖೆ ಕಾಲಹರಣ ಮಾಡುತ್ತಿದೆ.ಕಾರ್ಮಿಕ ಇಲಾಖೆ ಕಾಯ್ದೆ




ಪ್ರಕಾರ ಯಾವುದೇ ಸೌಲಭ್ಯಗಳನ್ನು ಕಲ್ಪಿಸಿಲ್ಲ, ಕನಿಷ್ಠ ವೇತನ ಜಾರಿ ನಿಯಮ ಜಾರಿಯಲ್ಲಿದ್ದರೂ ನಮಗೆ ಇಲ್ಲಿವರೆಗೆ ನೀಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಒಂದೊಂದು ಕಡೆ ಒಂದು ರೀತಿ ವೇತನ ನೀಡ್ತಾರೆ, ಅದು ಯಾರಿಂದ, ಯಾವ ಏಜೆನ್ಸಿಯಿಂದ ಬರುತ್ತೆ ಎನ್ನುವುದು ಇಲ್ಲಿವರೆಗೆ ಯಾರಿಗೂ ತಿಳಿದಿಲ್ಲ.

ಶಿವಮೊಗ್ಗ ಜಿಲ್ಲೆಯಲ್ಲಿ ನಮ್ಮ ಸಿಬ್ಬಂದಿಗಳಿಗೆ 18.5 ಸಾವಿರ ವೇತನ, ಹರಪನಹಳ್ಳಿಯಲ್ಲಿ 11 ಸಾವಿರ, ಬಳ್ಳಾರಿಯಲ್ಲಿ 12 ರಿಂದ 16 ಸಾವಿರ ವೇತನ ನೀಡ್ತಾರೆ, ಇದು ಹೇಗೆ, ಎಲ್ಲರೂ ಮಾಡೋದು ಒಂದೇ ಕೆಲಸ, ನಾವು ರಾಜ್ಯದಲ್ಲಿದ್ದೀವೋ ಎನ್ನುವುದು ತಿಳಿಯಾದಾಗಿದೆ. ಹೊರಗುತ್ತಿಗೆ ಬಹುತೇಕ ನೌಕರರು ಇನ್ನೂ 2 ರಿಂದ 3 ವರ್ಷಕ್ಕೆ ನಿವೃತ್ತಿಯಾಗಲಿದ್ದಾರೆ, ಇಲ್ಲಿವರೆಗೆ ಸರ್ಕಾರದ ಸೌಲಭ್ಯಗಳು ಮರೀಚಿಕೆ ಅಂದ್ರೆ ನಾಚಿಕೆಯಾಗುತ್ತೆ. ಮಾಜಿ ಸಿ.ಎಂ.ಗಳಾದ ಸಿದ್ದರಾಮಯ್ಯ, ಬಸವರಾಜ್ ಬೊಮ್ಮಾಯಿ, ಮಾಜಿ ಸಚಿವ ಸಂತೋಷ್ ಲಾಡ್ ಸೇರಿದಂತೆ ಎಲ್ಲ ಅಧಿಕಾರಿಗಳಿಗೆ ಮನವಿ ನೀಡಿದ್ದರೂ ಇಲ್ಲಿವರೆಗೆ ಕ್ರಮವಿಲ್ಲ. ಬರಿ ಸುಳ್ಳು ಭರವಸೆ, ಕೇಳಿ ಸಾಕಾಗಿದೆ. ಎಲ್ಲ ಇಲಾಖೆಯಲ್ಲೂ ಕನಿಷ್ಠ ವೇತನ ನೀಡಲಾಗುತ್ತಿದೆ, ಪಿಎಫ್ ಇಎಸ್ ಐ ನೀಡಲಾಗುತ್ತಿದೆ. ಆದರೆ, ನಮಗೆ ಮಾತ್ರ ಯಾವುದೇ ಸೌಲಭ್ಯಗಳಿಲ್ಲ. ಪ್ರಶ್ನಿಸಿದರೆ, ನಮ್ಮ ಮೇಲೆ ಬೆದರಿಕೆ, ನೌಕರಿಯಿಂದ ತೆಗೆದು ಹಾಕುವುದು ಸಾಮಾನ್ಯವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಿವಣ್ಣ, ಆಂಜನಪ್ಪ ಪರಸಪ್ಪ, ಸಿದ್ದಲಿಂಗಪ್ಪ, ಆಂಜನಪ್ಪ ದರೋಜಿ, ವಡಕಪ್ಪ, ಶಿವಣ್ಣ ನಾಯಕಇದ್ದರು.

# ಮಂತ್ರಾಲಯದ ಶ್ರೀರಾಘವೇಂದ್ರ ಮಠಕ್ಕೆ ಭೇಟಿ ನೀಡಿದ ಶಾಸಕ ನಾರಾ ಭರತ್ ರೆಡ್ಡಿ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿ ನಗರ ಕ್ಷೇತ್ರದ ಶಾಸಕ ನಾರಾ ಭರತ್ ರೆಡ್ಡಿ ಅವರು ಶುಕ್ರವಾರ ಮಂತ್ರಾಲಯದ ಶ್ರೀ ರಾಘವೇಂದ್ರ ಸ್ವಾಮಿ ಮಠಕ್ಕೆ ಭೇಟಿ ನೀಡಿ ಆಶೀರ್ವಾದ ಪಡೆದರು.

ಶಾಸಕ ನಾರಾ ಭರತ್ ರೆಡ್ಡಿಯವರು ಮಠಕ್ಕೆ ಭೇಟಿ ನೀಡಿದ ಸಂದರ್ಭ ಮಠದ ಶ್ರೀ ಸುಭುದೇಂದ್ರ ತೀರ್ಥರಿಂದ ದಿವ್ಯ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಎಪಿಎಂಸಿ ಅಧ್ಯಕ್ಷ ಕಟ್ಟೆಮನೆ ನಾಗೇಂದ್ರ, ಹಿರಿಯ ಕಾಂಗ್ರೆಸ್ ನಾಯಕರು ಅಸುಂಡಿ ಹೊನ್ನರಪ್ಪ, ಪರಶುರಾಮುಡು, ಹೊನ್ನಪ್ಪ, ಹಗರಿ ಗೋವಿಂದ, ಗುಂತಕಲ್ ಸುರೇಶ್, ನಾಯ್ಡು ಹಾಗೂ ಇತರ ಹಲವು ಕಾಂಗ್ರೆಸ್ ನಾಯಕರು ಉಪಸ್ಥಿತರಿದ್ದರು.ಭಕ್ತಿಪೂರ್ವಕವಾಗಿ ಪೂಜೆ ಸಲ್ಲಿಸಿ, ವಿಶೇಷ ಪ್ರಾರ್ಥನೆ ಮಾಡಿದ ಶಾಸಕ ನಾರಾ ಭರತ್ ರೆಡ್ಡಿ ಅವರು, ಜನರ ಕಲ್ಯಾಣ ಮತ್ತು ಬಳ್ಳಾರಿ ಅಭಿವೃದ್ಧಿಗಾಗಿ ಪಕ್ಷವು ಸತತ ಪ್ರಯತ್ನ ಮಾಡುತ್ತಿದೆ ಎಂದು ತಿಳಿಸಿದರು. ಈ ಭೇಟಿಯು ಆಧ್ಯಾತ್ಮಿಕ ಶಕ್ತಿಯನ್ನು ಹೆಚ್ಚಿಸಿದೆ ಎಂದು ತಿಳಿಸಿದರು.

# ಬಿರುಗಾಳಿಗೆ ಐದು ವಿದ್ಯುತ್ ಕಂಬಗಳು ನೆಲಸಮ; ಸ್ಥಳಕ್ಕೆ ಧಾವಿಸಿದ ಕಾರ್ಪೊರೇಟರ್ ಮಿಂಚು ಸೀನ , ತುರ್ತು ಪರಿಹಾರಕ್ಕೆ ಅಧಿಕಾರಿಗಳಿಗೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ ಕೆಎಂಎಫ್ ಸಮೀಪದ ಇಂದಿರಾನಗರಕ್ಕೆ ಹೋಗುವ ರಸ್ತೆಯಲ್ಲಿರುವ ಎಂ.ಕೆ. ನಗರದ ಬುಡ ಪಾರ್ಕ್ ಹತ್ತಿರ ಶುಕ್ರವಾರ ಏಕಾಏಕಿ ಬೀಸಿದ ಭಾರೀ ಗಾಳಿ ಆತಂಕದ ವಾತಾವರಣ ಸೃಷ್ಟಿಸಿತು. ಬಿರುಗಾಳಿಯ ರಭಸಕ್ಕೆ ಗಿಡಗಳು ವಿದ್ಯುತ್ ತಂತಿಗಳ ಮೇಲೆ ಬಿದ್ದು ಸುಮಾರು ನಾಲ್ಕರಿಂದ ಐದು ವಿದ್ಯುತ್ ಕಂಬಗಳು ನೆಲಕ್ಕುರುಳಿದ್ದು, ವಿದ್ಯುತ್ ತಂತಿಗಳು ರಸ್ತೆಯ ಮೇಲೆ ಬಿದ್ದ ಪರಿಣಾಮ ಕೆಲಕಾಲ ಸಾರ್ವಜನಿಕರಲ್ಲಿ ಭಯದ ವಾತಾವರಣ ನಿರ್ಮಾಣವಾಯಿತು.

ಘಟನೆಯಲ್ಲಿ ರಸ್ತೆಬದಿಯಲ್ಲಿ ನಿಲ್ಲಿಸಲಾಗಿದ್ದ ಟಿವಿಎಸ್ ಜುಪಿಟರ್ ದ್ವಿಚಕ್ರ ವಾಹನಕ್ಕೆ ಬೆಂಕಿ ಹೊತ್ತಿಕೊಂಡು ಸಂಪೂರ್ಣ ಸುಟ್ಟು ಕರಕಲಾಗಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ದೊಡ್ಡ ಅನಾಹುತವೊಂದು ತಪ್ಪಿರುವುದರಿಂದ ಸ್ಥಳೀಯರು ನಿಟ್ಟುಸಿರು ಬಿಟ್ಟರು.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ 35ನೇ ವಾರ್ಡ್ ಸದಸ್ಯ ಮಿಂಚು ಸೀನ ಅವರು ತಕ್ಷಣ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ಪರಿಶೀಲಿಸಿದರು. ವಿದ್ಯುತ್ ಇಲಾಖೆ ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳೊಂದಿಗೆ ಸ್ಥಳದಲ್ಲೇ ಚರ್ಚಿಸಿ, ಹಾನಿಗೊಳಗಾದ ವಿದ್ಯುತ್ ಕಂಬಗಳನ್ನು ತುರ್ತಾಗಿ ತೆರವುಗೊಳಿಸುವುದು, ವಿದ್ಯುತ್ ಸಂಪರ್ಕವನ್ನು ಸುರಕ್ಷಿತವಾಗಿ ಪುನಃಸ್ಥಾಪಿಸುವುದು ಹಾಗೂ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸ್ಥಳದಲ್ಲಿ ಮರಗಳ ಕೊಂಬೆಗಳನ್ನು ಮುಂಚಿತವಾಗಿಯೇ ಕತ್ತರಿಸುವ (ಜಂಗಲ್ ಕಟಿಂಗ್) ಕಾರ್ಯ ನಡೆದಿದ್ದರೆ ಇಂತಹ ಹಾನಿಯನ್ನು ತಪ್ಪಿಸಬಹುದಾಗಿತ್ತು. ಕೆಲವು ತಾಂತ್ರಿಕ ಕಾರಣಗಳಿಂದ ಆ ಕೆಲಸ ವಿಳಂಬವಾಗಿರುವುದು ಘಟನೆಗೆ ಕಾರಣವಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದು, ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ.

ಈ ಕುರಿತು ಮಾತನಾಡಿದ ವಾರ್ಡ್ ಸದಸ್ಯ ಮಿಂಚು ಸೀನ, "ಇಂದು ಶುಕ್ರವಾರವಾಗಿದ್ದರಿಂದ ಕನಕದುರ್ಗಮ್ಮ ದೇವಸ್ಥಾನಕ್ಕೆ ಪೂಜೆ ಸಲ್ಲಿಸಲು ತೆರಳಿದ್ದೆ. ತಾಯಿಯ ಆಶೀರ್ವಾದದಿಂದ ನಮ್ಮ ವಾರ್ಡಿನಲ್ಲಿ ಯಾವುದೇ ಜೀವಹಾನಿ ಸಂಭವಿಸಿಲ್ಲ. ಸುದ್ದಿ ತಿಳಿದ ತಕ್ಷಣ ಸ್ಥಳಕ್ಕೆ ಆಗಮಿಸಿ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ್ದೇನೆ. ಸಾರ್ವಜನಿಕರ ಸುರಕ್ಷತೆಗೆ ಮೊದಲ ಆದ್ಯತೆ ನೀಡಲಾಗಿದ್ದು, ವಿದ್ಯುತ್ ಕಂಬಗಳ ದುರಸ್ತಿ, ಮರಗಳ ಕೊಂಬೆಗಳ ತೆರವು ಹಾಗೂ ಇತರ ಅಗತ್ಯ ಕಾಮಗಾರಿಗಳನ್ನು ಆದಷ್ಟು ಶೀಘ್ರ ಪೂರ್ಣಗೊಳಿಸಲಾಗುವುದು," ಎಂದು ಹೇಳಿದರು.

ಸಂಕಷ್ಟದ ಸಮಯದಲ್ಲಿ ಸ್ಥಳಕ್ಕೆ ಧಾವಿಸಿ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಪರಿಹಾರ ಕಾರ್ಯಕ್ಕೆ ಚಾಲನೆ ನೀಡಿದ ಕಾರ್ಪೊರೇಟರ್ ಮಿಂಚು ಸೀನ ಅವರ ಜನಪರ ಕಾಳಜಿ ಹಾಗೂ ಕರ್ತವ್ಯನಿಷ್ಠೆಯನ್ನು ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು.

# ಅಂತಿಮ ಹಂತದಲ್ಲಿದೆ ಕಾಮಗಾರಿ, ಆಗಸ್ಟ್ ಮೊದಲ ವಾರದೊಳಗೆ ಸಾವಿರಾರು ಮನೆ ಬಾಗಿಲಿಗೆ ಶುದ್ಧ ಕುಡಿಯುವ ನೀರು



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಮುದಗಲ್ಲ: 2400 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಇಲ್ಲಿನ ಜನರ ಬಹುದಿನಗಳ ಕನಸಾಗಿದ್ದ ಜಲಧಾರೆ ಯೋಜನೆ ಇದೀಗ ಸಾಕಾರಗೊಳ್ಳುವ ಹಂತಕ್ಕೆ ತಲುಪಿದೆ. ಈ ಯೋಜನೆಯ ಕಾಮಗಾರಿ ಅಂತಿಮ ಹಂತದಲ್ಲಿದ್ದು, ಜುಲೈ ಅಥವಾ ಆಗಸ್ಟ್ ಮೊದಲ ವಾರದೊಳಗೆ ಸಿಂಧನೂರು, ಮಸ್ಕಿ ಹಾಗೂ ಲಿಂಗಸುಗೂರು ತಾಲೂಕಿನ ಭಾಗಶಃ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಆರಂಭವಾಗಲಿದೆ. ನಾರಾಯಣಪುರ ಜಲಾಶಯದ ಹಿನ್ನೀರು ಆಧರಿಸಿ ಕೈಗೆತ್ತಿಕೊಂಡಿರುವ ಈ ಯೋಜನೆ ಜಿಲ್ಲೆಯ ಇತಿಹಾಸದಲ್ಲಿಯೇ ಮಹತ್ವದ ಮೈಲಿಗಲ್ಲಾಗಲಿದೆ. ಶಂಕರ್ ನಾರಾಯಣ ಕನ್ಸ್ಟ್ರಕ್ಷನ್ ಕಾಮಗಾರಿ ನಿರ್ವಹಿಸುತ್ತಿದ್ದು, ಬೃಹತ್ ಪೈಪ್ ಲೈನ್ ಜಾಲ, ನೀರು ಶುದ್ಧೀಕರಣ ಘಟಕಗಳು, ಜಲಸಂಗ್ರಹಣಾ ಕೇಂದ್ರಗಳು, ಪಂಪಿಂಗ್ ಸ್ಟೇಷನ್ ಗಳ ನಿರ್ಮಾಣ ಕಾರ್ಯ ಬಹುತೇಕ ಪೂರ್ಣಗೊಂಡಿದೆ. ಬೇಸಿಗೆಯಲ್ಲಿ ಕೊಳವೆ ಬಾವಿಗಳು ಬತ್ತಿ ಹೋಗುವುದು, ಟ್ಯಾಂಕರ್ ನೀರಿನ ಅವಲಂಬನೆ, ದೂರದ ಪ್ರದೇಶಗಳಿಂದ ನೀರು ತರುವ ಅನಿವಾರ್ಯತೆ ಸಾಮಾನ್ಯವಾಗಿತ್ತು. ಇದೀಗ ಜಲಧಾರೆ ಯೋಜನೆ ಪೂರ್ಣಗೊಳ್ಳುವ ಹಂತಕ್ಕೆ ತಲುಪಿದ್ದು, ಸಾವಿರಾರು ಕುಟುಂಬಗಳ ಮನೆ ಬಾಗಿಲಿಗೆ ಶುದ್ಧ ಕುಡಿಯುವ ನೀರು ತಲುಪಲಿದೆ. ಪ್ರಸ್ತುತ ತಾಂತ್ರಿಕ ಪರೀಕ್ಷೆಗಳು, ಅಂತಿಮ ಸಂಪರ್ಕ ಕಾರ್ಯಗಳು ನಡೆಯುತ್ತಿವೆ. ನೀರಿನ ಒತ್ತಡ ಪರೀಕ್ಷೆ, ಶುದ್ಧೀಕರಣ ಘಟಕಗಳ ಕಾರ್ಯನಿರ್ವಹಣೆ ಹಾಗೂ ವಿತರಣಾ ಜಾಲದ ಪರಿಶೀಲನೆ ಪ್ರಗತಿಯಲ್ಲಿದೆ. ಎಲ್ಲ ಪರೀಕ್ಷೆಗಳು ಯಶಸ್ವಿಯಾದ ಬಳಿಕ ನೀರು ಪ್ರತಿ ಗ್ರಾಮದ ಓಎಚ್‌ಟಿ ಟ್ಯಾಂಕರ್ ಗಳಿಗೆ ಸರಬರಾಜು ಆರಂಭವಾಗಲಿದೆ. ಅಲ್ಲಿಂದ ಜೆಜೆಎಂ ನಳ ಮತ್ತು ಗ್ರಾಪಂ ವಿವಿಧ ಯೋಜನೆಯಡಿ ಅಭಿವೃದ್ಧಿ ಪಡಿಸಿದ ನಳಗಳ ಮೂಲಕ ಪ್ರತಿಮನೆಗೆ ನೀರು ತಲುಪಲಿದೆ.

ಕೋಟ್– ನಮ್ಮ ಊರಲ್ಲಿ ಬೇಸಿಗೆ ಬಂದರೆ ಕುಡಿಯುವ ನೀರಿಗಾಗಿ ಪರದಾಡಬೇಕಾಗುತ್ತದೆ. ಜಲಧಾರೆ ಯೋಜನೆ ಶೀಘ್ರ ಆರಂಭವಾದರೆ ಸಾವಿರಾರು ಜನರಿಗೆ ಅನುಕೂಲವಾಗಲಿದೆ. –ತಿಪ್ಪಣ್ಣ ರಾಠೋಡ, ಮಾಜಿ ಅಧ್ಯಕ್ಷ, ಕನ್ನಾಳ ಗ್ರಾಪಂ.

ಕೋಟ್– ಶುದ್ಧ ಕುಡಿಯುವ ನೀರಿನ ಲಭ್ಯತೆಯಿಂದ ನೀರಿನಿಂದ ಹರಡುವ ರೋಗಗಳ ಪ್ರಮಾಣ ಕಡಿಮೆಯಾಗಲಿದ್ದು, ಗ್ರಾಮೀಣ ಪ್ರದೇಶಗಳ ಆರೋಗ್ಯ ಮಟ್ಟ ಸುಧಾರಿಸಲಿದೆ. ಮಹಿಳೆಯರು ಮತ್ತು ಮಕ್ಕಳ ನೀರು ಸಂಗ್ರಹಣೆಯ ಶ್ರಮವೂ ಕಡಿಮೆಯಾಗಲಿದೆ. ಜತೆಗೆ ಗ್ರಾಮೀಣ ಅಭಿವೃದ್ಧಿಗೆ ಹೊಸ ಚೈತನ್ಯ ದೊರೆಯಲಿದೆ. –ಮಲ್ಲಮ್ಮ ಮೆದಕಿನಾಳ, ಸ್ವಸಹಾಯ ಗುಂಪಿನ ಸದಸ್ಯೆ.

ಕೋಟ್– ಯೋಜನೆಯ ಕಾಮಗಾರಿ ನಿಗದಿತ ವೇಳಾಪಟ್ಟಿಯಂತೆ ಸಾಗುತ್ತಿದ್ದು, ಜುಲೈ ಅಂತ್ಯದೊಳಗೆ ಮೊದಲ ಹಂತದ ನೀರು ಪೂರೈಕೆಗೆ ಸಿದ್ಧತೆ ನಡೆಸಲಾಗಿದೆ. ಉಳಿದ ಕಾಮಗಾರಿಗಳನ್ನು ಶೀಘ್ರವೇ ಪೂರ್ಣಗೊಳಿಸಿ ಜಿಲ್ಲೆಯ ಎಲ್ಲ ಭಾಗಗಳಿಗೆ ನೀರು ಪೂರೈಸುವ ಗುರಿ ಹೊಂದಲಾಗಿದೆ. –ನಾಗರಾಜ ಪ್ರಭಾ, ಇಂಜನಿಯರ್ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಲಿಂಗಸುಗೂರ ಉಪವಿಭಾಗ.

02ಎಂಡಿಎಲ್–4 ಮುದಗಲ್ಲ: ನಾರಾಯಣಪೂರ ಜಲಾಶಯದ ಹಿನ್ನೀರಿನಲ್ಲಿ ಸಿದ್ದಗೊಂಡಿರುವ ಜಲಧಾರೆ ಕಾಮಗಾರಿ.

# ಲಂಚ ಸ್ವೀಕರಿಸುತ್ತಿದ್ದ ಇಬ್ಬರು ಕೆಯುಡಬ್ಲ್ಯೂಎಸ್‌ಡಿಬಿ ಅಧಿಕಾರಿಗಳು ಲೋಕಾಯುಕ್ತ ಬಲೆಗೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಹೊಸಪೇಟೆ ರಸ್ತೆಯಲ್ಲಿರುವ 2ನೇ ರೈಲ್ವೇ ಗೇಟ್ ಹತ್ತಿರದ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಉಪವಿಭಾಗದ ಕಚೇರಿಯಲ್ಲಿ ಶುಕ್ರವಾರ ಮಧ್ಯಾಹ್ನ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದು, ಲಂಚ ಪಡೆಯುತ್ತಿದ್ದ ಇಬ್ಬರು ಅಧಿಕಾರಿಗಳನ್ನು ಬಂಧಿಸಿದ್ದಾರೆ.

ಪ್ರಕರಣದ ಹಿನ್ನೆಲೆ:ದೂರುದಾರರಾದ ವೀರೇಶ್ (ತಂದೆ ಹುಸೇನಪ್ಪ, 27 ವರ್ಷ), ರಾಮರಾಜು ರವರ ರಿಯಲ್ ಎಸ್ಟೇಟ್ ಕಚೇರಿಯಲ್ಲಿ ಕೆಲಸ ಮಾಡುತ್ತಿದ್ದರು. ಸಂಗನಕಲ್ಲು ರಸ್ತೆಯ ವಡ್ಡೆ ಗೋವಿಂದಪ್ಪ ಅವರಿಗೆ ಸೇರಿದ ಸರ್ವೆ ನಂ: 78/3 ರ 2.47 ಎಕರೆ ಜಮೀನಿನ ಬಹು ನಿವೇಶನ ವಿನ್ಯಾಸಕ್ಕೆ ಸಂಬಂಧಿಸಿದಂತೆ, ನೀರು ಸರಬರಾಜು ಹಾಗೂ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಸಲುವಾಗಿ ಅಂದಾಜು ಪಟ್ಟಿಯನ್ನು ತಯಾರಿಸಿ ಮೇಲಾಧಿಕಾರಿಗಳಿಗೆ ಸಲ್ಲಿಸುವ ಸರ್ಕಾರಿ ಕೆಲಸಕ್ಕಾಗಿ ಎ.ಇ ಅಶೋಕ್ ಎಸ್. ಅವರು 55,000 ರೂ.ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರು. ಈ ಕುರಿತು ವೀರೇಶ್ ಅವರು ಬಳ್ಳಾರಿ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ್ದರು (ಅಪರಾಧ ಸಂಖ್ಯೆ: 07/2026 ಕಲಂ 7(ಎ) ಪಿಸಿ ಆಕ್ಟ್ 1988).

ಲೋಕಾಯುಕ್ತ ದಾಳಿ ಮತ್ತು ದಸ್ತಗಿರಿ:

ದೂರಿನ ಅನ್ವಯ ಜು.03 ರಂದು ಮಧ್ಯಾಹ್ನ ಸುಮಾರು 12.30ರ ವೇಳೆಗೆ ಲೋಕಾಯುಕ್ತ ಪೊಲೀಸರು ಕಚೇರಿಯ ಮೇಲೆ ದಾಳಿ ನಡೆಸಿದ್ದಾರೆ. ದೂರುದಾರರಿಂದ ಪಡೆದ 55,000 ರೂ. ಲಂಚದ ಹಣದಲ್ಲಿ 27,500 ರೂ.ಗಳನ್ನು ಅಶೋಕ್ ಎಸ್. ಅವರು ತಮ್ಮ ಮೇಲಾಧಿಕಾರಿಯಾದ ಎ.ಇ.ಇ. ಕಾಶಿ ವಿಶ್ವನಾಥ್ ಅವರಿಗೆ ನೀಡುತ್ತಿದ್ದರು.


ಈ ಸಂದರ್ಭದಲ್ಲಿ ದಾಳಿ ನಡೆಸಿದ ಪೊಲೀಸರು ಇಬ್ಬರನ್ನೂ ಕಚೇರಿಯಲ್ಲೇ ರೆಡ್‌ಹ್ಯಾಂಡ್ ಆಗಿ ದಸ್ತಗಿರಿ ಮಾಡಿದ್ದಾರೆ. ಇಬ್ಬರ ಬಳಿಯಿಂದಲೂ ತಲಾ 27,500 ರೂ.ಗಳ ಲಂಚದ ಹಣವನ್ನು ಜಪ್ತಿ ಮಾಡಿಕೊಳ್ಳಲಾಗಿದೆ ಎಂದು ತಿಳಿಸಲಾಗಿದೆ.

*ಕಾರ್ಯಾಚರಣೆ ತಂಡ:*ಬಳ್ಳಾರಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎನ್. ವಾಸುದೇವರಾಮ ಅವರ ಮಾರ್ಗದರ್ಶನದಲ್ಲಿ, ಪೊಲೀಸ್ ನಿರೀಕ್ಷಕರುಗಳಾದ ಗುರಣ್ಣ ಎಸ್ ಹೆಬ್ಬಾಳ್ ಮತ್ತು ಸುರೇಶ್ ಎಂ ಭಾವಿಮನಿ ಅವರ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆದಿದೆ.

ಕಾರ್ಯಾಚರಣೆಯಲ್ಲಿ ಲೋಕಾಯುಕ್ತ ಸಿಬ್ಬಂದಿಗಳಾದ ಚಂದ್ರಶೇಖರ್, ವಸಂತಕುಮಾರ್, ಅರವಿಂದ, ಅಂಜಿನಪ್ಪ, ಹನುಮಂತಪ್ಪ, ಪ್ರಕಾಶ್ ಎಂ., ನಜೀಮ್ ಶೇಖ್, ಗೊಲ್ಲರ ದಾಸಪ್ಪ, ಹೊನ್ನೂರಪ್ಪ ಕೆ.ಟಿ ಮತ್ತು ಹರೀಶ್.ವಿ ಅವರು ಭಾಗವಹಿಸಿದ್ದರು ಎಂದು ಪ್ರಕಟಣೆ ತಿಳಿಸಿದೆ.

# ಶಾಸಕ ಪ್ರಭು ಚವ್ಹಾಣ ಜನ್ಮದಿನ: ಜು.6ರಂದು ವಿವಿಧ ಸಮಾಜಮುಖಿ ಕಾರ್ಯಕ್ರಮಗಳು

• ಮಲ್ಲಮ್ಮ ನುಡಿ ವಾರ್ತೆ ಔರಾದ



ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರ 57ನೇ ಜನ್ಮದಿನದ ಅಂಗವಾಗಿ ಅಭಿಮಾನಿ ಬಳಗದಿಂದ ಜುಲೈ 6ರಂದು ಔರಾದ(ಬಿ) ಪಟ್ಟಣದಲ್ಲಿ ವಿವಿಧ ಸಮಾಜಮುಖಿ ಹಾಗೂ ಪರಿಸರ ಸಂರಕ್ಷಣಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಅಂದು ಬೆಳಗ್ಗೆ 6 ಗಂಟೆಗೆ ಘಮಸುಬಾಯಿ ತಾಂಡಾದಲ್ಲಿರುವ ಇಚ್ಛಾಪೂರ್ತಿ ಮಾತಾ ಜಗದಂಬಾ ದೇವಸ್ಥಾನದಲ್ಲಿ ನಡೆಯುವ ವಿಶೇಷ ಪೂಜೆ, ಹೋಮ–ಹವನಗಳಲ್ಲಿ ಭಾಗವಹಿಸಲಿದ್ದಾರೆ. ಬಳಿಕ ಬೆಳಗ್ಗೆ 8.30ಕ್ಕೆ ಔರಾದ್ ಪಟ್ಟಣದ ಅಮರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸುವರು.ನಂತರ ಗೋಶಾಲೆಗೆ ಭೇಟಿ ನೀಡಿ ಗೋಪೂಜೆ ನೆರವೇರಿಸಿ, ತಾಲ್ಲೂಕು ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಣೆ ಮತ್ತು ಔರಾದ ತಾಲ್ಲೂಕು ಕ್ರೀಡಾಂಗಣದಲ್ಲಿ 57 ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ಬಳಿಕ ಡಾ.ಗುರುಪಾದಪ್ಪ ನಾಗಮಾರಪಳ್ಳಿ ಕಲ್ಯಾಣ ಮಂಟಪಕ್ಕೆ ಆಗಮಿಸಿ ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಉದ್ಘಾಟಿಸುವರು. ಬೆಳಗ್ಗೆ 10 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಈ ವೇಳೆ ಶಾಲೆಯ ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಣೆ ಕಾರ್ಯಕ್ರಮಕ್ಕೆ ಸಾಂಕೇತಿಕವಾಗಿ ಚಾಲನೆ ನೀಡುವರು.ವೇದಿಕೆ ಕಾರ್ಯಕ್ರಮದಲ್ಲಿ ಭಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯ ಡಾ.ಬಸವಲಿಂಗ ಪಟ್ಟದೇವರು, ಪೂಜ್ಯ ಗುರುಬಸವ ಪಟ್ಟದೇವರು, ಪೂಜ್ಯ ಶಿವಾನಂದ ಶಿವಾಚಾರ್ಯರು (ತಮಲೂರು), ಪೂಜ್ಯ ಶಂಭುಲಿಂಗ ಶಿವಾಚಾರ್ಯರು (ಘೋಣಗಾಂವ), ಪೂಜ್ಯ ಶಿವಲಿಂಗ ಶಿವಾಚಾರ್ಯರು (ಹೆಡಗಾಪೂರ), ಪೂಜ್ಯ ಚಂದ್ರಶೇಖರ ಶಿವಾಚಾರ್ಯರು (ಗುಡಪಳ್ಳಿ) ಪೂಜ್ಯ ಸಿದ್ದಲಿಂಗ ಮಹಾಸ್ವಾಮಿಗಳು (ಠಾಣಾಕುಶನೂರ), ಪೂಜ್ಯ ಭಂತೆ ಬೋಧಿರತ್ನ (ಹಿಪ್ಪಳಗಾಂವ), ಪೂಜ್ಯ ಸಂಗ್ರಾಮ್ ಮಹಾರಾಜ (ನಾರಾಯಣಖೇಡ), ಪೂಜ್ಯ ಝೂಪಾ ಮಹಾರಾಜ, ಪೂಜ್ಯ ಗೋವಿಂದ ಮಹಾರಾಜ(ಸೇವಾನಗರ), ಬನ್ಸಿ ಮಹಾರಾಜ (ಮಾಳೆಗಾಂವ), ವಿನಾಯಕ ಮಹಾರಾಜ (ಚಿಮ್ಮೇಗಾಂವ) ಸೇರಿದಂತೆ ವಿವಿಧ ಮಠಗಳ ಪೂಜ್ಯರು ಹಾಗೂ ಪ್ರಮುಖ ಗಣ್ಯರು ಭಾಗವಹಿಸಿ ಆಶೀರ್ವಚನ ನೀಡಲಿದ್ದಾರೆ. ವಿವಿಧ ಗಣ್ಯರು, ಪಕ್ಷದ ಮುಖಂಡರು, ಜನಪ್ರತಿನಿಧಿಗಳು ಹಾಗೂ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಭಾಗವಹಿಸಲಿದ್ದಾರೆ.ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 'ಏಕ್ ಪೇಡ್ ಮಾ ಕೆ ನಾಮ್' (ತಾಯಿಯ ಹೆಸರಲ್ಲಿ ಒಂದು ಗಿಡ) ಅಭಿಯಾನದ ಆಶಯದಂತೆ, ಶಾಸಕರ ಅಭಿಮಾನಿಗಳು, ಪಕ್ಷದ ಕಾರ್ಯಕರ್ತರು ಹಾಗೂ ಹಿತೈಶಿಗಳು ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ತಾಯಿಯ ಹೆಸರಿನಲ್ಲಿ ಸಸಿ ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶವನ್ನು ಸಾರಲಿದ್ದಾರೆ. ವೇದಿಕೆ ಕಾರ್ಯಕ್ರಮದಲ್ಲಿಯೂ ಅಭಿಮಾನಿಗಳು ಮತ್ತು ಕಾರ್ಯಕರ್ತರಿಗೆ ಸಸಿ ವಿತರಣೆ ಮಾಡಲಾಗುತ್ತದೆ.ಪಕ್ಷದ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಪ್ರಭು ಬಿ.ಚವ್ಹಾಣ ಅಭಿಮಾನಿ ಬಳಗ ಪ್ರಕಟಣೆಯಲ್ಲಿ ಮನವಿ ಮಾಡಿದೆ.

# ಸಿಂಧನೂರಿನಲ್ಲಿ ವಿದ್ಯಾರ್ಥಿ ನಿಲಯಕ್ಕೆ ಕಟ್ಟಡದ ಬಾಡಿಗೆಗೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.03.ಸಮಾಜ ಕಲ್ಯಾಣ ಇಲಾಖೆಯ ನಿರ್ವಹಣೆಯಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಹೊಸ ಕಟ್ಟಡದ ಅವಶ್ಯಕತೆ ಇದೆ.

ಪ್ರಸ್ತುತ ಹಾಸ್ಟೆಲ್‌ಗೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುತ್ತಿರುವುದರಿಂದ, ಹೆಚ್ಚುವರಿ ವ್ಯವಸ್ಥೆ ಕಲ್ಪಿಸಲು ಇಲಾಖೆಯು ಹೊಸ ಕಟ್ಟಡವನ್ನು ಹುಡುಕುತ್ತಿದೆ. 100 ರಿಂದ 200 ವಿದ್ಯಾರ್ಥಿಗಳು ವಾಸಿಸಲು ಯೋಗ್ಯವಾದ ಕಟ್ಟಡವನ್ನು ಹೊಂದಿರುವ ಮಾಲೀಕರು, ಬಾಡಿಗೆಗೆ ನೀಡಲು ಇಚ್ಛಿಸಿದಲ್ಲಿ ಕೂಡಲೇ ಸಮಾಜ ಕಲ್ಯಾಣ ಇಲಾಖೆಯ ಸಿಂಧನೂರು ಕಚೇರಿಯನ್ನು ಸಂಪರ್ಕಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9480843185 ಕರೆ ಮಾಡಲು ತಿಳಿಸಿದ್ದಾರೆ.

# ರೋಟರಿ ಕ್ಲಬ್‌ನಿಂದ ಅನಾಥ ಮಕ್ಕಳ ಶೈಕ್ಷಣಿಕ ದತ್ತು

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ




ಅನಾಥ ಮಕ್ಕಳೂ ಸಹ ಯಾವುದೇ ಕೊರತೆ ಅನುಭವಿಸದೇ ಸಮಾಜದಲ್ಲಿ ಬದುಕಿ ಬಾಳಬೇಕು ಎನ್ನುವ ಉದ್ದೇಶದಿಂದ ಬಾಗಲಕೋಟೆಯ ಆಶ್ರಯಧಾಮ ಅವರಿಗೆ ಆಶ್ರಯ ಕಲ್ಪಿಸಿದೆ. ಈ ಆಶ್ರಯಧಾಮದ ಐದು ಜನ ಅನಾಥ ಮಕ್ಕಳನ್ನು ರೋಟರಿ ಕ್ಲಬ್ ಶೈಕ್ಷಣಿಕ ದತ್ತು ಪಡೆದು, ಅವರಿಗೆ ಎಲ್ಲ ರೀತಿಯ ನೆರವು ನೀಡಲಾಗುವುದು ಎಂದು ರೋಟರಿ ಕ್ಲಬ್ ನೂತನ ಅಧ್ಯಕ್ಷ ವಿಜಯಕುಮಾರ ಹೊಸೂರ ಹೇಳಿದರು.

ವಿದ್ಯಾಗಿರಿಯ ಬಾಲಾಜಿ ಮಂದಿರದಲ್ಲಿ ರೋಟರಿ ಕ್ಲಬ್‌ನ 2026-27ನೇ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆಶ್ರಯಧಾಮದಲ್ಲಿ ಒಟ್ಟು 20 ಅನಾಥ ಮಕ್ಕಳು ಆಶ್ರಯ ಪಡೆದಿದ್ದಾರೆ. ಒಂದು ಮಗುವಿನ ಒಂದು ವರ್ಷದ ಶೈಕ್ಷಣಿಕ ಮತ್ತು ಇತರೆ ವೆಚ್ಚ 25 ಸಾವಿರ ವೆಚ್ಚ ತಗುಲುತ್ತದೆ. ರೋಟರಿ ಕ್ಲಬ್‌ನಿಂದ ಆರಂಭದಲ್ಲಿ ಐದು ಮಕ್ಕಳ ದತ್ತು ಪಡೆದು, 1.25 ಲಕ್ಷ ಆರ್ಥಿಕ ನೆರವು ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಮಕ್ಕಳ ದತ್ತು ಪಡೆದು ಶಿಕ್ಷಣಕ್ಕೆ ಉತ್ತೇಜನ ನೀಡಲು ಪ್ರಯತ್ನಿಸಲಾಗುವುದು ಎಂದರು.

ರೋಟರಿ ಕ್ಲಬ್ ಒಂದು ಅಂತರ್‌ರಾಷ್ಟ್ರೀಯ ಸೇವಾ ಸಂಸ್ಥೆಯಾಗಿದೆ. ಈ ಕ್ಲಬ್ ಮೂಲಕ ಸಾಮಾಜಿಕ ಸೇವೆ ಸಲ್ಲಿಸಲು ನನಗೆ ಅವಕಾಶ ಸಿಕ್ಕಿದೆ. ಎಲ್ಲ ಪದಾಧಿಕಾರಿಗಳು, ಸದಸ್ಯರು ಕೂಡಿಕೊಂಡು ಸಮಾಜಮುಖಿ ಕಾರ್ಯ ಮುಂದುವರೆಸುತ್ತೇವೆ. ನಮ್ಮ ಅವಧಿಯಲ್ಲಿ 21ಕ್ಕೂ ಅಧಿಕ ಸಮಾಜ ಸೇವಾ ಕಾರ್ಯ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಅವರು ತಿಳಿಸಿದರು.

ಜಿಲ್ಲೆಯ ನಿರುದ್ಯೋಗಿ ಯುವಕ-ಯುವತಿಯರಿಗಾಗಿ ಬೃಹತ್ ಉದ್ಯೋಗ ಮೇಳ, ಅರಣ್ಯ ಇಲಾಖೆಯ ನೆರವಿನೊಂದಿಗೆ 100 ವಿವಿಧ ಸಸಿ ನೆಡುವುದು, ಆರ್ಥಿಕವಾಗಿ ಹಿಂದುಳಿದ ಒಬ್ಬ ಡಯಾಲಿಸಿಸ್ ರೋಗಿಗೆ ಚಿಕಿತ್ಸೆಗೆ ಆರ್ಥಿಕ ನೆರವು, ಮಹಿಳೆಯರಿಗೆ ಹೊಲಿಗೆ ಯಂತ್ರ ವಿತರಣೆ, ತಾಯಂದಿರರಿಗೆ ಪೌಷ್ಟಿಕ ಆಹಾರ ಪದ್ಧತಿ, ಹಿರಿಯ ನಾಗರಿಕರಿಗೆ ಆರೋಗ್ಯ ಶಿಬಿರ, ಸ್ವಚ್ಛ ಭಾರತಕ್ಕಾಗಿ ಜಾಗೃತಿ ಕಾರ್ಯಕ್ರಮ ಹೀಗೆ ಹಲವು ಸೇವಾ ಕಾರ್ಯ ನಡೆಸಲಾಗುವುದು ಎಂದು ಅಧ್ಯಕ್ಷರು ಹೇಳಿದರು.

ಮುಖ್ಯ ಅತಿಥಿಯಾಗಿದ್ದ ಬಿವಿವಿ ಸಂಘದ ಆಡಳಿತಾಧಿಕಾರಿ ಡಾ.ವಿಜಯಕುಮಾರ ಕಟಗಿಹಳ್ಳಿಮಠ ಮಾತನಾಡಿ, ರೋಟರಿ ಕ್ಲಬ್‌ಗೆ ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ತನ್ನದೇ ಆದ ಖ್ಯಾತಿ ಇದೆ. ಪೋಲೀಯೋ ಮುಕ್ತ ಭಾರತಕ್ಕಾಗಿ ರೋಟರಿ ಕ್ಲಬ್ ಸಲ್ಲಿಸಿದ ಸೇವೆ ಅವಿಸ್ಮರಣೀಯವಾಗಿದೆ. ಜಿಲ್ಲೆಯಲ್ಲೂ ಕ್ಲಬ್ ಅತ್ಯುತ್ತಮ ಸೇವೆ ಸಲ್ಲಿಸುತ್ತಿದೆ. ಈ ಬಾರಿ ಅನಾಥ ಮಕ್ಕಳನ್ನು ಶೈಕ್ಷಣಿಕ ದತ್ತು ಪಡೆದಿರುವುದು ಅತ್ಯಂತ ಶ್ಲಾಘನೀಯ ಕಾರ್ಯ ಎಂದರು.

ರೋಟರಿ ಕ್ಲಬ್‌ನ ಶಾಸನ ಸಭೆಯ ಜಿಲ್ಲೆಯ ಪ್ರತಿನಿಧಿ ಡಾ.ಪ್ರಾಣೇಶ ಜಹಾಗೀರದಾರ ಅವರು, ನೂತನ ಅಧ್ಯಕ್ಷ ವಿಜಯಕುಮಾರ ಹೊಸೂರ, ಕಾರ್ಯದರ್ಶಿ ಡಾ.ಅವಿನಾಶ ಕಟ್ಟಿಮನಿ, ಖಜಾಂಚಿ ತುಕಾರಾಮ ಟಿ.ಎನ್ ಹಾಗೂ ಪದಾಧಿಕಾರಿಗಳಿಗೆ ಸೇವಾ ದೀಕ್ಷೆ ನೀಡಿದರು.

ಇದೇ ವೇಳೆ ಪತ್ರಿಕಾ ದಿನಾಚರಣೆ ಅಂಗವಾಗಿ ಪತ್ರಕರ್ತರಾದ ಜಗದೀಶ ಗಾಣಗೇರ, ಮಂಜುನಾಥ ತಳವಾರ, ವೈದ್ಯರ ದಿನಾಚರಣೆ ಅಂಗವಾಗಿ ಡಾ.ಕುಸುಮಾ ಮಾಗಿ, ಡಾ.ರಜನಿ ಪಾಟೀಲ, ಡಾ.ನಿವೇದಿತಾ ಭಾವಿ, ಡಾ.ಬಸವೇಶ ಪಾಟೀಲ, ಡಾ.ಬಾಲಚಂದ್ರ ಅಂಕದ ಹಾಗೂ ಲೆಕ್ಕ ಪರಿಶೋಧಕರ ದಿನಾಚರಣೆ ಅಂಗವಾಗಿ ಶಿವಯ್ಯ ಎಮ್ಮಿ, ವಿಕಾಶ ತಿಪಶೆಟ್ಟಿ ಅವರನ್ನು ರೋಟರಿ ಕ್ಲಬ್‌ನಿಂದ ಸನ್ಮಾನಿಸಲಾಯಿತು.

ರೋಟರಿ ಕ್ಲಬ್ ಸಹಾಯಕ ಗವರ್ನರ್ ಡಾ.ಕಿರಣ ಜಾಲಿಹಾಳ, ನಿಕಟಪೂರ್ವ ಅಧ್ಯಕ್ಷ ಮಲ್ಲಿಕಾರ್ಜುನ ಹದ್ಲಿ, ಡಾ.ಗಿರೀಶ ಮಸೂರಕರ, ನಾರಾಯಣ ಹೆರಕಲ್, ಸಂತೋಷ ಪಾಟೀಲ, ಪ್ರಕಾಶ ಭೂತಲ, ಮಲ್ಲಿನಾಥ ಹಿರೇಮಠ, ಮಹಾದೇವ ದಂಧರಗಿ, ಮಲ್ಲನಗೌಡ ಪಾಟೀಲ, ವಿಜಯ ಬುರಲಿ, ಚಂದ್ರಶೇಖರ ಕಟಗೇರಿ, ಎಸ್.ಕೆ.ಯಡಹಳ್ಳಿ, ಡಾ.ಪ್ರಲ್ಹಾದ ಹುಯಿಲ್‌ಗೋಳ, ಶ್ರೀಧರ ದಾಸ, ಶಿವಕುಮಾರ ನಂದಿಕೋಲಮಠ, ಬಸವರಾಜ ಪರ್ವತಿಮಠ, ರವಿ ಪಾಟೀಲ, ಸುರೇಂದ್ರಕುಮಾರ್, ಡಾ.ಬಸವರಾಜ ಕಡಿವಾಲ, ಸಂತೋಷ ನಾವಲಗಿ, ವಿಶ್ವನಾಥ ವೈಜಾಪುರ ಮುಂತಾದವರು ಉಪಸ್ಥಿತರಿದ್ದರು.

# ಸಂತ ಶಿಶುನಾಳ ಶರೀಫ ಜಯಂತಿ



**ಬಾಗಲಕೋಟೆ:** ನಗರದ ಬಿ.ವಿ.ವಿ. ಸಂಘದ ಬಸವೇಶ್ವರ ಕಲಾ ಮಹಾವಿದ್ಯಾಲಯದ ಸಂಗೀತ ವಿಭಾಗದ ವತಿಯಿಂದ ಕರ್ನಾಟಕದ ಕಬೀರ ಎಂದೇ ಪ್ರಸಿದ್ಧರಾಗಿರುವ ಸಂತ ಶಿಶುನಾಳ ಶರೀಫರ ಜಯಂತಿಯನ್ನು ಅವರ ತತ್ವಪದಗಳ ಗಾಯನದ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಶುಕ್ರವಾರ ಕಾಲೇಜಿನ ಸಂಗೀತ ವಿಭಾಗದ ವಿದ್ಯಾರ್ಥಿನಿಯರು ತರವಲ್ಲ ತಗಿ ನಿನ ತಂಬೂರಿ, ಮೋಹದ ಹೆಂಡತಿ ತೀರಿದ ಬಳಿಕ, ಬಿದ್ದಿಯೆಬ್ಬೆ ಮುದಕಿ ಬಿದ್ದಿಯೆಬ್ಬೆ ಹಾಗೂ ಏನ ಕೊಡ ಏನ ಕೊಡವ ಚಂದುಳ್ಳಿ ಮಾಟ. ಏನ ಕೊಡ ಏನ ಕೊಡವ ಸೇರಿದಂತೆ ಹಲವು ತತ್ವಪದಗಳನ್ನು ಸುಶ್ರಾವ್ಯವಾಗಿ ಹಾಡಿ ಸಂತ ಶಿಶುನಾಳ ಶರೀಫರ ಚಿಂತನೆಗಳು ಮತ್ತು ಜೀವನ ಮೌಲ್ಯಗಳನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಸಂಗೀತ ವಿಭಾಗದ ಮುಖ್ಯಸ್ಥ ಕಾಶಿಲಿಂಗಮಠ ಮಾತನಾಡಿ, ಶಿಶುನಾಳ ಶರೀಫರ ತತ್ವಪದಗಳು ಮಾನವೀಯತೆ, ಸಮಾನತೆ ಹಾಗೂ ಬದುಕಿನ ಮೌಲ್ಯಗಳನ್ನು ಸಾರುವ ಅಮೂಲ್ಯ ಸಂದೇಶಗಳಾಗಿದ್ದು, ಇಂತಹ ಮಹನೀಯರ ವಿಚಾರಧಾರೆಗಳನ್ನು ಯುವಪೀಳಿಗೆಗೆ ಪರಿಚಯಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಬಲಾ ಪ್ರಾಧ್ಯಾಪಕ ಡಾ. ರೇವಣ್ಣ ಬೆಣ್ಣೂರ, ಗಾಯನ ಪ್ರಾಧ್ಯಾಪಕಿ ಕು. ಶ್ರೇಯಾ ಜೋರಾಪುರ, ಪ್ರೊ. ಆರ್. ಸುರೇಶ, ಶ್ರೀಮತಿ ಜೆ. ಎನ್. ದಿವಟೆ, ಶ್ರೀಮತಿ ಎಸ್. ಕೆ. ಪವಾರ ಹಾಗೂ ಸಂಗೀತ ವಿಭಾಗದ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ನೈತಿಕತೆಯ ಮೌಲ್ಯಗಳಿಂದ ಉತ್ತಮ ವ್ಯಕ್ತಿತ್ವ



**ಬಾಗಲಕೋಟೆ:** ಯುವ ಸಮೂಹ ಜ್ಞಾನ ಸಂಪಾದನೆಗೆ ನಿರಂತರ ಅಧ್ಯಯನ,ಪರಿಶ್ರಮ, ಶಿಸ್ತು ಮತ್ತು ಪ್ರಾಮಾಣಿಕತೆ ಮುಖ್ಯವಾಗಿದ್ದು, ನೈತಿಕತೆಯ ಮೌಲ್ಯಗಳಿಂದ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕೆಂದು ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಹೇಳಿದರು.

ಶುಕ್ರವಾರ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ನಡೆದ 2026-27 ನೆಯ ಸಾಲಿನ ಪ್ರಥಮ ವರ್ಷದ ಬಿ.ಎ, ಬಿ.ಕಾಂ, ಬಿ.ಎಸ್ಸಿ, ಬಿ.ಸಿಎ ಮತ್ತು ಬಿಬಿಎ ವಿದ್ಯಾರ್ಥಿಗಳ ತರಗತಿ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು ಮೊದಲು ಕಾಲೇಜಿನ ನಿಯಮಗಳನ್ನು ಪಾಲಿಸಬೇಕು. ಕಾಲೇಜಿನಲ್ಲಿ ಗುಣಮಟ್ಟದ ಬೋಧನೆ, ಗ್ರಂಥಾಲಯ, ಕ್ರೀಡಾ ಚಟುವಟಿಕೆಗಳು, ಎನ್.ಸಿ.ಸಿ, ಎನ್.ಎಸ್.ಎಸ್, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕ ಸೌಲಭ್ಯಗಳಿವೆ. ಇವುಗಳ ಸದುಪಯೋಗ ಪಡೆದುಕೊಂಡು, ಕ್ರಿಯಾಶೀಲ ವ್ಯಕ್ತಿತ್ವ ಕಟ್ಟಿಕೊಳ್ಳಬೇಕು ಎಂದರು. ನಾಡಗೀತಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಕ್ರೀಡಾ ನಿರ್ದೇಶಕ ನೀಲಪ್ಪ ಕುರಿ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಕಾಲೇಜಿನ ಬೋಧಕರು, ಬೋಧ-ಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ವಿ ಆರ್ ದೇಶಪಾಂಡೆ ಮೆಮೋರಿಯಲ್ ಟ್ರಸ್ಟ್‌ನ ಸಂಸ್ಥಾಪಕ ದಿನಾಚರಣೆ




**ಹಳಿಯಾಳ:** 1998 ರಲ್ಲಿ ಸ್ಥಾಪನೆಯಾದ ವಿ ಆರ್ ದೇಶಪಾಂಡೆ ಮೆಮೋರಿಯಲ್ ಟ್ರಸ್ಟ್ ಶಿಕ್ಷಣ,ಧಾರ್ಮಿಕ ಆರೋಗ್ಯ, ಮಹಿಳಾ ಸಬಲೀಕರಣ ಕೃಷಿ, ಸ್ವಯಂ ಉದ್ಯೋಗ ಮುಂತಾದ ಕ್ಷೇತ್ರಗಳಲ್ಲಿ ನಿರಂತರವಾಗಿ ಸಮಾಜಮುಖಿಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಪ್ರಸಾದ ಆರ್ ದೇಶಪಾಂಡೆ ಪ್ರಸ್ತಾವಿಕವಾಗಿ ಹೇಳಿದರು.

ಇಂದು ಆರ್ ಶೆಟ್ಟಿ ಭವನದಲ್ಲಿ ದಿ. ವಿಶ್ವನಾಥ್ ಆರ್ ದೇಶಪಾಂಡೆಯವರ ಜನ್ಮದಿನವಾದ ಜುಲೈ ಒಂದನ್ನು ಸಂಸ್ಥೆಯ ಸ್ಥಾಪಕರ ದಿನಾಚರಣೆಯನ್ನಾಗಿ ಆಚರಿಸಲಾಯಿತು.

ಈ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕರು ಹಾಗೂ ಸಂಸ್ಥೆಯ ಅಧ್ಯಕ್ಷರಾದ ಆರ್ ವಿ ದೇಶಪಾಂಡೆ ನಮ್ಮ ಸಂಸ್ಥೆಯಿಂದ ಸುಮಾರು 28,000 ಯುವಕ ಯುವತಿಯರಿಗೆ ಉಚಿತ ಸ್ವ ಉದ್ಯೋಗ ತರಬೇತಿ ಪಡೆದುಕೊಂಡಿದ್ದು ಇದರಲ್ಲಿ ಪ್ರತಿಶತ 70ರಷ್ಟು ಯುವಕರು ತಮ್ಮ ಸ್ವಉದ್ಯೋಗದಲ್ಲಿ ತೊಡಗಿಕೊಂಡು ಜೀವನ ನಡೆಸುತ್ತಿದ್ದಾರೆ ಎಂದು ಸ್ಮರಿಸಿದರು. ಅದಲ್ಲದೆ ಸಂಸ್ಥೆಯ ಸಂಸ್ಥಾಪಕ ದಿನಾಚರಣೆ ಅಂಗವಾಗಿ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸುವುದು ರೂಡಿ.

ಉದ್ಯಮ ಕ್ಷೇತ್ರದಲ್ಲಿ ಮೈಲಿಗಲ್ಲು ಸಾಧಿಸಿದ ಪೂರ್ಣಿಮಾ ಹೆಗಡೆ, ಸುಯೋಗಾಶ್ರಮದ ಮೂಲಕ ವಯೋವೃದ್ಧರಿಗೆ ಆಶ್ರಯದಾತರಾದ ಲತಿಕಾ ಭಟ್ ಮತ್ತು ಜಿಲ್ಲೆಯ ಉದಯೋನ್ಮುಖ ಕ್ರೀಡಾ ಪ್ರತಿಭೆಗಳು, ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ವಿಶೇಷ ಸಾಧನೆಗೈದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಓಸಾಟ್ ಸಂಸ್ಥಾಪಕರಾದ ವಾದಿರಾಜ ಭಟ್, ಧರ್ಮದರ್ಶಿಗಳಾದ ಶ್ರೀಮತಿ ರಾಧಾ ದೇಶಪಾಂಡೆ, ಪ್ರಸಾದ್ ದೇಶಪಾಂಡೆ, ಶ್ಯಾಮ್ ಕಾಮತ್ ಉಪಸ್ಥಿತರಿದ್ದರು.

# ಕಾರ್ಮಿಕರ ಹಕ್ಕು ಉಲ್ಲಂಘನೆ ಆರೋಪ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ಗಂಗಾವತಿ ನಗರಸಭೆಯ ಬೀದಿದೀಪಗಳ ವಾರ್ಷಿಕ ನಿರ್ವಹಣೆ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಗುತ್ತಿಗೆ ಕಾರ್ಮಿಕರು ತಮ್ಮ ಕಾನೂನುಬದ್ಧ ಹಕ್ಕುಗಳನ್ನು ನಿರಾಕರಿಸಲಾಗುತ್ತಿದೆ ಎಂದು ಆರೋಪಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದು, ಪ್ರಕರಣದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

ಕಾರ್ಮಿಕರಪ್ರಕಾರ,ಒಟ್ಟುಆರುಮಂದಿ ಕಾರ್ಮಿಕರಿಗೆ ಕನಿಷ್ಠ ವೇತನ, ನೌಕರರ ಭವಿಷ್ಯ ನಿಧಿ (PF) ಹಾಗೂ ನೌಕರರ ರಾಜ್ಯ ವಿಮೆ (ESI)ಸೇರಿದಂತೆ ಕಾನೂನಿನಡಿ ದೊರೆಯಬೇಕಾದ ಸೌಲಭ್ಯಗಳನ್ನು ನೀಡಲಾಗುತ್ತಿಲ್ಲ. ಈ ಸಂಬಂಧ ಕಾರ್ಮಿಕ ಇಲಾಖೆಗೆ ಈಗಾಗಲೇ ದೂರು ಸಲ್ಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಇದಲ್ಲದೆ, ದೂರು ನೀಡಿದ್ದ ಐದು ಮಂದಿ ಕಾರ್ಮಿಕರಿಂದ ಬೆದರಿಕೆ ಹಾಗೂ ಒತ್ತಡದ ಮೂಲಕ ಬಲವಂತವಾಗಿ ಸಹಿ ಪಡೆದು ದೂರು ಹಿಂತೆ-ಗೆದುಕೊಂಡಂತೆ ದಾಖಲೆ ಸೃಷ್ಟಿಸಲಾಗಿದೆ ಎಂದು ಆರೋಪಿಸಲಾಗಿದೆ. ಓದು-ಬರಹ ತಿಳಿಯದ ಕಾರ್ಮಿಕರ ಅಜ್ಞಾನವನ್ನು ದುರುಪಯೋಗಪಡಿಸಿಕೊಳ್ಳಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ.

ದೂರು ಹಿಂತೆಗೆದುಕೊಳ್ಳಲು ನಿರಾಕರಿಸಿದ್ದ ಒಬ್ಬ ಕಾರ್ಮಿಕರ ವೇತನವನ್ನು ತಡೆಹಿಡಿದು ಕೆಲಸದಿಂದ ತೆಗೆದುಹಾಕಲಾಗಿದೆ ಎಂದು ಕಾರ್ಮಿಕರು ಆರೋಪಿಸಿದ್ದು, ಈ ಪ್ರಕರಣವು ಪ್ರಸ್ತುತ ಕಾರ್ಮಿಕ ನ್ಯಾಯಾಲಯದ ವಿಚಾರಣೆಯಲ್ಲಿದೆ ಎಂದು ತಿಳಿಸಿದ್ದಾರೆ.

# ಎಸ್‌ಐಆರ್: ಸಾರ್ವಜನಿಕ ಜಾಗೃತಿ ಜಾಥಾ

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ



ಪಟ್ಟಣದ ಪುರಸಭೆಯ ಸಿಬ್ಬಂದಿ ವರ್ಗದವರಿಂದ ಹಾಗೂ ಅಕ್ಕ ನಾಗಮ್ಮ ಪ್ರೌಢಶಾಲೆಯ ವಿದ್ಯಾರ್ಥಿಗಳಿಂದ ಭಾರತೀಯ ಚುನಾವಣಾ ಆಯೋಗದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಅಭಿಯಾನದ ಅಡಿಯಲ್ಲಿ ಸಾರ್ವಜನಿಕ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಸದರಿ ಜಾಥಾ ಕಾರ್ಯಕ್ರಮಕ್ಕೆ ತಹಶೀಲ್ದಾರ್ ವಾಯ್. ಎಸ್ ಸೋಮನಕಟ್ಟಿ ಚಾಲನೆ ನೀಡಿ, ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳುವ ಮೂಲಕ ಪ್ರಜಾಪ್ರಭುತ್ವವನ್ನು ಬಲಪಡಿಸಬೇಕು ಎಂದು ಕರೆ ನೀಡಿದರು. ಬಳಿಕ ಆರಂಭವಾದ ಜಾಥಾವು ಪಟ್ಟಣದ ಪ್ರಮುಖ ರಸ್ತೆಗಳು, ಬಸವೇಶ್ವರ ವೃತ್ತದ ಮೂಲಕ ಸಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿತು.

ಬಿ. ಎಲ್ ಓರವರು ಮನೆ-ಮನೆ ಸಮೀಕ್ಷೆಗೆ ಬಂದಾಗ ಸಹಕರಿಸಲು ಜಾಥಾದುದ್ದಕ್ಕೂ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಪುರಸಭೆ ಸಿಬ್ಬಂದಿಗಳಾದ ಕಂದಾಯ ಅಧಿಕಾರಿ ಶಬ್ಬೀರ್ ರೇವುರಕರ, ವ್ಯವಸ್ಥಾಪಕ ಎಸ್ ಬಿ ಬಾಗೇವಾಡಿ, ಸಂತೋಷ ಜೆ. ಇ, ವಿಜಯಕುಮಾರ್ ವಂದಾಲ, ಮಹೇಶ್ ಹಿರೇಮಠ, ಸಿದ್ದರಾಮಗೌಡ ಪಾಟೀಲ, ಕೆ. ಆರ್ ಲಮಾಣಿ, ಅಶೋಕ ಹಂಚಲಿ,ಜಿ. ಎಮ್ ಗಂಜಾಳ, ಸುರೇಶ್ ಬಾಗೇವಾಡಿ, ಎಚ್. ಎ ಮೇಟಿ,ವಿ. ವಿ ಅಪಸಂಗಿ, ವಿದ್ಯಾ ಮನಗೂಳಿ,ಜ್ಯೋತಿ ಹಂಗರಗಿ,ಜ್ಯೋತಿ ಮೂಲಿಮನಿ, ರೂಪಾ ಆಶ್ರಿತ, ಸುಜಾತ ಗಿಡವೀರ, ಎಮ್ ವಾಯ್ ಜಾಲವಾದಿ ಇನ್ನಿತರರು ಉಪಸ್ಥಿತರಿದ್ದರು.

# ಎಸ್‌ಐಆರ್ ಕುರಿತ ಸೈಕಲ್ ಜಾಥಾಕ್ಕೆ ವಸ್ತ್ರದ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ




ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಹಮ್ಮಿಕೊಂಡ ಸೈಕಲ್ ಜಾಥಾಕ್ಕೆ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್. ವಸ್ತ್ರದ ಚಾಲನೆ ನೀಡಿದರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸಂಗಪ್ಪ ಮಾತನಾಡಿ, ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಕಡ್ಡಾಯವಾಗಿ ಪರಿಶೀಲಿಸಿಕೊಳ್ಳಬೇಕು. ಮತದಾರರ ಪಟ್ಟಿಯ ಶುದ್ಧತೆ ಕಾಪಾಡುವಲ್ಲಿ ಸಾರ್ವಜನಿಕರ ಸಹಭಾಗಿತ್ವ ಅತ್ಯಂತ ಮಹತ್ವದ್ದಾಗಿದೆ. ಮತದಾರರ ಜಾಗೃತಿ ಕಾರ್ಯಕ್ರಮಗಳ ಮೂಲಕ ಎಸ್‌ಐಆರ್ ಕುರಿತು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ವ್ಯಾಪಕ ಅರಿವು ಮೂಡಿಸಲಾಗುತ್ತಿದೆ. ಸಾರ್ವಜನಿಕರು ಬೂತ್ ಮಟ್ಟದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ, ಅಗತ್ಯ ಮಾಹಿತಿಯನ್ನು ಒದಗಿಸುವಂತೆ ಮನವಿ ಮಾಡಿದರು.

ಜಾಥಾದಲ್ಲಿ ವಿದ್ಯಾರ್ಥಿಗಳು ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ, ಬಿಎಲ್‌ಒಗಳು ಹಾಗೂ ಮತದಾರ ಜಾಗೃತಿ ತಂಡಗಳು ಎಸ್‌ಐಆರ್ ಕುರಿತು ಜಾಗೃತಿ ಮೂಡಿಸುವ ಫಲಕಗಳನ್ನು ಪ್ರದರ್ಶಿಸಿ, ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸುವಂತೆ ಮನವಿ ಮಾಡುತ್ತ ನಗರದ ಪ್ರಮುಖ ರಸ್ತೆಗಳಲ್ಲಿ ಸೈಕಲ್ ಜಾಥಾ ನಡೆಸಿದರು.

ಸೈಕಲ್ ಜಾಥಾ ವಿದ್ಯಾಗಿರಿ ವೃತ್ತದಿಂದ ಪ್ರಾರಂಭವಾಗಿ 14ನೇ ಕ್ರಾಸ್ ಮೂಲಕ ಕಲಾದಗಿ ಮೇನ್ ರೋಡ, ಅಯೋಧ್ಯ ಹೋಟಲ್ ಕ್ರಾಸ್, ವಿದ್ಯಾಗಿರಿ 22ನೇ ಕ್ರಾಸ್, ಪಂಜುರ್ಲಿ ಹೋಟಲ್ ಮೂಲಕ ಮರಳಿ ವಿದ್ಯಾಗಿರಿ ಕ್ರಾಸ್‌ಗೆ ಮುಕ್ತಾಯಗೊಂಡಿತು.

ಅಧಿಕಾರಿಗಳು ಸೈಕಲ್ ಏರಿ ಜಾಥಾದಲ್ಲಿ ಸಂಚರಿಸಿದ್ದು, ಎಲ್ಲರ ಗಮನ ಸೆಳೆಯಿತು.

ಜಾಥಾದಲ್ಲಿ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್.ವಸ್ತ್ರದ, ಜಿಲ್ಲಾಧಿಕಾರಿ ಸಂಗಪ್ಪ, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಜಿ.ಪಂ ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ವಾಸುದೇವ ಬಡಿಗೇರ, ತಹಶೀಲ್ದಾರ ವಾಸುದೇವ ಸ್ವಾಮಿ, ತಾ.ಪಂ ಇಒ ಸುಭಾಷ ಸಂಪಗಾವಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು, ಪಾಲ್ಗೊಂಡಿದ್ದರು.

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಅಭಿಯಾನಕ್ಕೆ ಚಾಲನೆ




• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಎಸ್‌ಐಆರ್ (Special Intensive Revision) ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಅಭಿಯಾನಕ್ಕೆ ಜಿಲ್ಲಾಡಳಿತ, ಜಿಲ್ಲಾಪಂಚಯತ, ತಾಲೂಕ ಪಂಚಾಯತ್, ತಹಸೀಲ್, ಪುರಸಭೆ, ಶಿಕ್ಷಣ ಇಲಾಖೆ ವತಿಯಿಂದ ಪಟ್ಟಣದಲ್ಲಿ ಚಾಲನೆ ನೀಡಲಾಯಿತು.

ಅಭಿಯಾನದಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಜೈನ್, ಜಿಲ್ಲಾ ಪಂಚಾಯತ್ ಸಿಇಒ ಲವೀಶ್ ಒರಾಡಿಯಾ, ಸಹಾಯಕ ಆಯುಕ್ತ ಶ್ರೀಧರ್ ಗೋಟೂರ್, ತಹಸೀಲ್ದಾರ್ ಚನ್ನಮಲ್ಲಪ್ಪ ಘಂಟಿ, ತಾಲ್ಲೂಕು ಪಂಚಾಯತ್ ಯೋಜನಾಧಿಕಾರಿ ಶ್ರೀಮತಿ ಭಾರತಿ ಸಜ್ಜನ್ ಪುರಸಭೆಯ ಮುಖ್ಯಾಧಿಕಾರಿ ಶರಣಪ್ಪ ಎಂ., ಅಧಿಕಾರಿಗಳು, ಶಿಕ್ಷಣ ಇಲಾಖೆಯ ಹನುಮಂತರಾವ್ ಗೊಂಗ್ಲೆ, ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಮಲ್ಲಿಕಾರ್ಜುನ್ ಹೊಸಮನಿ ಪೊಲೀಸ್ ಇಲಾಖೆಯ ಅಲ್ಲಾಬಕ್ಷ್ ಶಾಬಾದಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗವಹಿಸಿದರು.

"ಮತದಾರರ ಪಟ್ಟಿ ಸರಿಯಾಗಿರಲಿ - ಪ್ರಜಾಪ್ರಭುತ್ವ ಬಲವಾಗಿರಲಿ", "ಮತದಾರರ ಪಟ್ಟಿ ಪರಿಷ್ಕರಣೆ ಜಾಗೃತಿ ಪ್ರತಿಯೊಬ್ಬ ನಾಗರಿಕರ ಹೊಣೆಗಾರಿಕೆ" ಎಂಬ ಘೋಷಣೆಗಳನ್ನು ಕೂಗುತ್ತಾ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯರು ಗುರುಮಠಕಲ್‌ನ ಗಾಂಧಿ ಮೈದಾನದಿಂದ ನಿಜಶರಣ ಅಂಬಿಗರ ಚೌಡಯ್ಯ ವೃತ್ತದವರೆಗೆ ಜಾಗೃತಿ ಮೆರವಣಿಗೆ ನಡೆಸಿ ಸಾರ್ವಜನಿಕರಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಯ ಕುರಿತು ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಜೈನ್, ಪ್ರಜಾಪ್ರಭುತ್ವವನ್ನು ಬಲಪಡಿಸಲು ಪ್ರತಿಯೊಬ್ಬ ಅರ್ಹ ನಾಗರಿಕರ ಹೆಸರು ಮತದಾರರ ಪಟ್ಟಿಯಲ್ಲಿ ಇರಬೇಕು. ಬಿಎಲ್‌ಒಗಳು ಮನೆಗಳಿಗೆ ಭೇಟಿ ನೀಡಿದಾಗ ಅಗತ್ಯ ದಾಖಲೆಗಳೊಂದಿಗೆ ಸರಿಯಾದ ಮಾಹಿತಿಯನ್ನು ನೀಡಿ ಅರ್ಜಿಗಳನ್ನು ಭರ್ತಿ ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಿಇಒ ನವೀಶ್ ಒರಾಡಿಯಾ ಮಾತನಾಡಿ, ಸಾರ್ವಜನಿಕರು ಯಾವುದೇ ಗೊಂದಲಕ್ಕೆ ಒಳಗಾಗದೆ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಮಾಹಿತಿ ಅಥವಾ ಅರ್ಜಿ ಭರ್ತಿಯಲ್ಲಿ ಅನುಮಾನಗಳಿದ್ದರೆ ತಮ್ಮ ಬಿಎಲ್‌ಒ ಹಾಗೂ ಅಂಗನವಾಡಿ ಕಾರ್ಯಕರ್ತರ ಸಹಾಯ ಪಡೆದು ಎಸ್‌ಐಆರ್ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಮನವಿ ಮಾಡಿದರು.

ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಮಲ್ಲಿಕಾರ್ಜುನ ಹೊಸಮನಿ ಮಾತನಾಡಿ, ಭಾರತ ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಪ್ರತಿಯೊಬ್ಬರೂ ಜವಾಬ್ದಾರಿಯಿಂದ ಭಾಗವಹಿಸಿ ಸರಿಯಾದ ಮಾಹಿತಿಯನ್ನು ನೀಡುವ ಮೂಲಕ ಪ್ರಕ್ರಿಯೆ ಯಶಸ್ವಿಯಾಗಲು ಸಹಕರಿಸಬೇಕು ಎಂದು ಕರೆ ನೀಡಿದರು.

**ಅಭಿಯಾನದ ಅಂಗವಾಗಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಜೈನ್ ಹಾಗೂ ಜಿಲ್ಲಾ ಪಂಚಾಯತ್ ಸಿಇಒ ಲವೀಶ್ ಒರಾಡಿಯಾ ಅಧಿಕಾರಿಗಳೊಂದಿಗೆ ಮತದಾರರ ಮನೆಗಳಿಗೆ ಭೇಟಿ ನೀಡಿ, ಎಸ್‌ಐಆರ್ (ವಿಶೇಷ ತೀವ್ರ ಪರಿಷ್ಕರಣೆ) ಪ್ರಕ್ರಿಯೆಯ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿದರು. ಮತದಾರರ ಪಟ್ಟಿಯಲ್ಲಿ ಹೆಸರು ಸರಿಯಾಗಿ ನೋಂದಣಿಯಾಗಿರುವುದನ್ನು ಖಚಿತಪಡಿಸಿಕೊಳ್ಳುವಂತೆ ಹಾಗೂ ಅಗತ್ಯವಿದ್ದಲ್ಲಿ ಸಂಬಂಧಿತ ಅರ್ಜಿಗಳನ್ನು ಸರಿಯಾದ ಮಾಹಿತಿಯೊಂದಿಗೆ ಭರ್ತಿ ಮಾಡಿ ಸಲ್ಲಿಸುವಂತೆ ಮನವಿ ಮಾಡಿದರು. ಅಲ್ಲದೆ, ಯಾವುದೇ ಗೊಂದಲಗಳಿದ್ದಲ್ಲಿ ಬಿಎಲ್‌ಒಗಳು ಹಾಗೂ ಸಂಬಂಧಿತ ಅಧಿಕಾರಿಗಳ ಸಹಾಯ ಪಡೆಯುವಂತೆ ತಿಳಿಸಿದರು.**

## ಮತದಾನದ ಹಕ್ಕಿನಿಂದ ಯಾರೂ ವಂಚಿತರಾಗಬಾರದು



**ಹುಮನಾಬಾದ:** ಕೇಂದ್ರ ಚುನಾವಣ ಆಯೋಗದ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್.ಐ.ಆರ್) ಅತ್ಯಂತ ಮಹತ್ವದಾಗಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಬಿ. ಪಾಟೀಲ್ ರವರು ತಿಳಿಸಿದರು. ಅವರು ಇಂದು ಹುಮನಾಬಾದ ನಗರದ ಸುಮಾರು 18ಕ್ಕು ಅಧಿಕ ವಾರ್ಡಗಳಿಗೆ ಭೇಟಿ ನೀಡಿ ಸಾರ್ವಜನಿಕರೊಂದಿಗೆ ಚರ್ಚೆ ನಡೆಸಿದರು.

ಮತ ಪಟ್ಟಿ ಶುದ್ಧಿಕರೀಸಿ ಪ್ರಜಾಪ್ರಭುತ್ವ ಬಲಪಡಿಸುವ ಈ ಅಭಿಯಾನದಲ್ಲಿ ಎಲ್ಲಾ ಮತದಾರರು ಸಕ್ರಿಯ ಪಾಲ್ಗೊಂಡು ಮತ ಪಟ್ಟಿಯಲ್ಲಿ ತಮ್ಮ ಹೆಸರು ಸೇರಿಸಿಕೊಳಬೇಕು. ಪ್ರತಿಯೊಬ್ಬರು ಅಮೂಲ್ಯ ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಎಂದು ಮನವಿ ಮಾಡಿದರು.

ಎಸ್.ಐ.ಆರ್ ಮಹತ್ವದ ಕುರಿತು ಸ್ಥಳಿಯರಿಗೆ ಅಗತ್ಯ ಮಾಹಿತಿ ನೀಡಿ ಜಾಗೃತಿ ಮೂಡಿಸಿದರು. ಎಲ್ಲಾ ಅರ್ಹರು ಬೂತ ಮಟ್ಟದ (ಬಿ.ಎಲ್.ಒ) ಗಳು ಮನೆಗೆ ಬಂದಾಗ ಅಗತ್ಯ ದಾಖಲೆಗಳನ್ನು ಒದಗಿಸಿ ಗಣತಿ ಅರ್ಜಿ (ಎನುಮಾರೇಷನ್ ಫಾರಂ) ಭರ್ತಿ ಮಾಡಿ ಕೊಡಬೇಕು ಎಂದರು. ಕಾಂಗ್ರೇಸ್ ಪಕ್ಷದ ಮತಗಟ್ಟೆ ಏಜೇಂಟರು (ಬಿ.ಎಲ್.ಎ 2), ಮತದಾರರು ಹಾಗೂ ಮತಗಟ್ಟೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಪ್ರಕ್ರಿಯೆ ಯಶಸ್ವಿಗೆ ಶ್ರಮಿಸಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ಹುಮನಾಬಾದ ಬ್ಲಾಕ್ ಕಾಂಗ್ರೇಸ್ ಸಮಿತಿ ಅಧ್ಯಕ್ಷ ಶ್ರೀ ಅಫ್ಸರಮೀಯಾ, ಗ್ರಾಮೀಣ ಬ್ಲಾಕ್ ಕಾಂಗ್ರೇಸ್ ಸಮಿತಿ ಅಧ್ಯಕ್ಷ ಓಂಕಾರ ತುಂಬಾ, ತಾಲೂಕು ಯುವ ಕಾಂಗ್ರೇಸ್ ಅಧ್ಯಕ್ಷ ಉಮೇಶ ಜಮಗಿ, ಮಲ್ಲಿಕಾರ್ಜುನ ಮಾಶೆಟ್ಟಿ, ರಾಜಶೇಖರ ಶೀಲವಂತ, ರವಿ ಲಾರಾ, ನರೇಶ ಚಟ್ಟಿ, ಶಿವಕುಮಾರ ಗಡಲ, ಶ್ರೀಕಾಂತ ತಾಂಡೂರ ಸೇರಿದಂತೆ ಮಾಜಿ ಪುರಸಭೆ ಸದಸ್ಯರುಗಳು ಮತ್ತು ಕಾಂಗ್ರೇಸ್ ಪಕ್ಷದ ಬಿ.ಎಲ್.ಎ.2 ಗಳು ಸೇರಿದಂತೆ ಬಡವಾಣೆಯ ಜನರು ಉಪಸ್ಥಿತರಿದ್ದರು.

## ಜ್ಞಾನ ವಿಕಾಶದಿಂದ ಸಬಲೀಕರಣ



**ಕುಕನೂರ:** ಪಟ್ಟಣದ ಅನ್ನದಾನೀಶ್ವರ ಶಾಖಾಮಠದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಸಂಸ್ಥೆಯ ಮಹಿಳಾ ಜ್ಞಾನ ವಿಕಾಶ ಕೇಂದ್ರದ ವಾರ್ಷಿಕೋತ್ಸವ ಸಮಾರಂಭವು ಸೋಮವಾರ ವಿಜೃಂಭಣೆಯಿಂದ ಜರುಗಿತು.

ಸಮಾರಂಭದ ದಿವ್ಯಸಾನ್ನಿಧ್ಯ ವಹಿಸಿದ್ದ ಪೂಜ್ಯ ಮಹಾದೇವ ಸ್ವಾಮೀಜಿ ಅವರು ಆಶೀರ್ವಚನ ನೀಡಿ, "ಮಹಿಳೆಯರು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸಬಲರಾದಾಗ ಮಾತ್ರ ಸಮಾಜದ ಸರ್ವತೋಮುಖ ಅಭಿವೃದ್ಧಿ ಸಾಧ್ಯ. ಧರ್ಮಸ್ಥಳ ಸಂಸ್ಥೆಯ ಜ್ಞಾನ ವಿಕಾಶ ಯೋಜನೆ ಗ್ರಾಮೀಣ ಮಹಿಳೆಯರಲ್ಲಿ ಸ್ವಾವಲಂಬನೆಯ ಕಿಚ್ಚು ಹಚ್ಚಿದೆ" ಎಂದು ಶ್ಲಾಘಿಸಿದರು. ಧರ್ಮಸ್ಥಳ ಸಂಸ್ಥೆಯ ಅಧಿಕಾರಿ ಶ್ರೀಶೈಲ್ ಎಚ್ ಮಾತನಾಡಿ, "ಜ್ಞಾನ ವಿಕಾಶ ಕೇಂದ್ರದ ಮೂಲಕ ಮಹಿಳೆಯರಿಗೆ ಕೌಶಲ್ಯ ತರಬೇತಿ, ಸ್ವ-ಉದ್ಯೋಗ ಮಾರ್ಗದರ್ಶನ ಹಾಗೂ ಆರ್ಥಿಕ ಸಾಕ್ಷರತೆ ನೀಡಲಾಗುತ್ತಿದೆ. ಕುಕನೂರು ಕೇಂದ್ರವು ಕಳೆದ ಒಂದು ವರ್ಷದಲ್ಲಿ ನೂರಾರು ಮಹಿಳೆಯರ ಬದುಕಿಗೆ ಆಸರೆಯಾಗಿದೆ" ಎಂದರು. ಕೇಂದ್ರದ ಅಧಿಕಾರಿ ರೇಖಮ್ಮ ಅವರು ವಾರ್ಷಿಕ ವರದಿ ಮಂಡಿಸಿ, ವರ್ಷವಿಡೀ ನಡೆದ ತರಬೇತಿ ಕಾರ್ಯಕ್ರಮಗಳು, ಸ್ವಸಹಾಯ ಸಂಘಗಳ ಸಾಧನೆ ಹಾಗೂ ಮಹಿಳೆಯರ ಯಶೋಗಾಥೆಗಳನ್ನು ಸಭೆಯ ಮುಂದಿಟ್ಟರು. ವೇದಿಕೆಯಲ್ಲಿ ಸಂಸ್ಥೆಯ ಕಾರ್ಯಕರ್ತರಾದ ಗೀತಾ, ಸಂಶಾದ ಬೇಗಂ, ಶಿವಲೀಲಾ, ಸುಜಾತ ಕಳ್ಳಿಮಠ, ರಜೀಯಟ ಬೇಗಂ, ಸಲ್ಮಾ, ಮಂಜುಳಾ ಸೇರಿದಂತೆ ಕೇಂದ್ರದ ಸದಸ್ಯರು ಹಾಗೂ ಗ್ರಾಮದ ಹಲವು ಮಹಿಳೆಯರು ಉಪಸ್ಥಿತರಿದ್ದರು.

# ಕ.ಕರ್ನಾಟಕ ಅಭಿವೃದ್ಧಿಗೆ ಇಂಜಿನಿಯರ್‌ಗಳ ಪಾತ್ರ ಮಹತ್ವದ್ದು

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಯ ನಿಟ್ಟಿನಲ್ಲಿ ರಾಜ್ಯ ಸರ್ಕಾರ ವಿಶೇಷ ಆಸಕ್ತಿ ವಹಿಸಿದ್ದು, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆ.ಕೆ.ಆರ.ಡಿ.ಬಿ) ಮೂಲಕ ಕೈಗೊಂಡಿರುವ ಕಾಮಗಾರಿಗಳ ಅನುಷ್ಠಾನದಲ್ಲಿ ಇಂಜಿನಿಯರ್‌ಗಳ ಪಾತ್ರ ಅತ್ಯಂತ ನಿರ್ಣಾಯಕವಾಗಿದೆ ಎಂದು ಕೆ.ಕೆ.ಆರ್.ಡಿ.ಬಿ. ಕಾರ್ಯದರ್ಶಿಗಳಾದ ನಲಿನ್ ಅತುಲ್ ಅವರು ಹೇಳಿದರು.

ಶುಕ್ರವಾರ, ನಗರದ ನಾಗನಹಳ್ಳಿ ಕ್ರಾಸ್ ಹತ್ತಿರದಲ್ಲಿರುವ ಜೆಸ್ಟ್ ಹೋಟೆಲ್(ಉಪ್ಪಿನ ವೆಂಚರ್ಸ್ ಘಟಕ )ದಲ್ಲಿ ಆಯೋಜಿಸಿದ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ ಹಾಗೂ ಲೋಕೋಪಯೋಗಿ ಇಲಾಖೆ ಈಶಾನ್ಯ ವಲಯ ಕಲಬುರಗಿ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಲ್ಯಾಣ ಕರ್ನಾಟಕ ಪ್ರದೇಶದ ಎಲ್ಲಸ್ತರದ ಅಭಿಯಂತರಿಗಾಗಿ ಬೀದರ, ಯಾದಗಿರಿ, ಕಲಬುರಗಿ ಎರಡು ದಿನಗಳ ಸಮಗ್ರ ತಾಂತ್ರಿಕ ತರಬೇತಿ ಕಾರ್ಯಗಾರ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕಲ್ಯಾಣ ಕರ್ನಾಟಕ ಭಾಗವು ಅಭಿವೃದ್ಧಿಯಲ್ಲಿ ರಾಜ್ಯದ ಇತರ ವಿಭಾಗಗಳಿಗಿಂತ ಹಿಂದೆ ಉಳಿದಿರುವ ಹಿನ್ನೆಲೆಯಲ್ಲಿ, ಈ ಭಾಗಕ್ಕೆ ವಿಶೇಷ ಒತ್ತು ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಇಂಜಿನಿಯರ್‌ಗಳು



ಬದ್ಧತೆಯಿಂದ ಕಾರ್ಯನಿರ್ವಹಿಸುವ ಅವಶ್ಯಕತೆ ಇದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದ ಕುರಿತು ಮಾತನಾಡುತ್ತಾ, ನಮ್ಮ ಇಂಜಿನಿಯರ್ ಬಂಧುಗಳು ಕೈಗೊಳ್ಳುವ ಯಾವುದೇ ಕೆಲಸಗಳು ಅಥವಾ ಯೋಜನೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ನಾವೆಲ್ಲರೂ ಬೆನ್ನೆಲುಬಾಗಿ ನಿಲ್ಲುತ್ತೇವೆ. ಈ ಮೂಲಕ ಇಂಜಿನಿಯರ್‌ಗಳ ಸಂಕಷ್ಟಗಳಿಗೆ ಸ್ಪಂದಿಸಲು ಈ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಾಗಾರದ ಮೂಲಕ ಇಂಜಿನಿಯರ್‌ಗಳ ಅಭಿಪ್ರಾಯಗಳನ್ನು ಆಲಿಸಿ, ತಾಂತ್ರಿಕ ಹಾಗೂ ಆಡಳಿತಾತ್ಮಕ ಸಮಸ್ಯೆಗಳನ್ನು ಬಗೆಹರಿಸಲು ನಾವು ಬದ್ಧರಿದ್ದೇವೆ, ಎಂದು ಅವರು ಭರವಸೆ ನೀಡಿದರು.

**ಅಭಿವೃದ್ಧಿಯ ಮೈಲಿಗಲ್ಲುಗಳು:** 2013-14ರ ನಂತರ ಈ ಭಾಗದ ಅಭಿವೃದ್ಧಿಗೆ ಅನುದಾನದ ಪ್ರಮಾಣ ಗಣನೀಯವಾಗಿ ಹೆಚ್ಚಾಗಿದ್ದು, ಕಳೆದ ಮೂರು ವರ್ಷಗಳಲ್ಲಿ ಸುಮಾರು 5,000 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ. ಮಂಡಳಿಯ ವತಿಯಿಂದ ವಿವಿಧ ಇಲಾಖೆಗಳಿಗೆ ಅಗತ್ಯವಿರುವ ಮೂಲಸೌಕರ್ಯ ಕಲ್ಪಿಸಲಾಗುತ್ತಿದ್ದು, ಯಾವುದೇ ಇಲಾಖೆಯ ಮೊರೆ ಹೋಗದೆ ಸ್ವತಂತ್ರವಾಗಿ ಕಾರ್ಯನಿರ್ವಹಿಸುವಷ್ಟು ಹಣಕಾಸು ನೆರವು ಆರ್ಥಿಕ ಸಬಲತೆಯನ್ನು ಮಂಡಳಿ ಹೊಂದಿದೆ ಎಂದು ಹೇಳಿದರು.

ಇ-ಪ್ರೊಕ್ಯೂರ್‌ಮೆಂಟ್ ವ್ಯವಸ್ಥೆಯ ಮೂಲಕ ಯೋಜನೆಗಳ ಅನುಮೋದನೆ, ಟೆಂಡರ್ ಪ್ರಕ್ರಿಯೆ ಮತ್ತು ಪಾವತಿಯನ್ನು ಸಂಪೂರ್ಣ ಡಿಜಿಟಲೀಕರಣಗೊಳಿಸಲಾಗಿದ್ದು, ಪಾರದರ್ಶಕತೆಗೆ ಆದ್ಯತೆ ನೀಡಲಾಗಿದೆ. ಇಂಜಿನಿಯರ್‌ಗಳಿಗೆ ಕೇವಲ ಕಾಮಗಾರಿಗಳ ಉಸ್ತುವಾರಿ ಮಾತ್ರವಲ್ಲದೆ, ಗುಣಮಟ್ಟದ ಕಾಮಗಾರಿಯನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವ ಜವಾಬ್ದಾರಿಯೂ ಇದೆ. ಇಲಾಖೆಗಳಲ್ಲಿನ ಸಿಬ್ಬಂದಿ ಕೊರತೆಯನ್ನು ನೀಗಿಸಲು ಮತ್ತು ಸಾಮರ್ಥ್ಯ ವರ್ಧನೆಗೆ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ವಿಸ್ತಾರವಾಗಿ ಮಾತನಾಡಿದರು. ಕೃಷಿ, ಕೈಗಾರಿಕೆ, ಜವಳಿ, ಪ್ರವಾಸೋದ್ಯಮ ಮತ್ತು ಶಿಕ್ಷಣದಂತಹ ಕ್ಷೇತ್ರಗಳಲ್ಲಿ ಅಭಿವೃದ್ಧಿ ಸಾಧಿಸುವುದು ಮಂಡಳಿಯ ಮುಖ್ಯ ಗುರಿಯಾಗಿದೆ. ಈಗಾಗಲೇ 24,000 ಕೋಟಿಗೂ ಹೆಚ್ಚು ಹಣವನ್ನು ಅಭಿವೃದ್ಧಿಗಾಗಿ ಕಳೆದ 5-6 ವರ್ಷಗಳಲ್ಲಿ ಬಳಸಲಾಗಿದೆ ಎಂದು ಹೇಳಿದರು.

ಈ ವರ್ಷ ಈಗಾಗಲೇ ನಾವು ಸರ್ಕಾರದಿಂದ ಕಲ್ಯಾಣ ಕರ್ನಾಟಕ ಭಾಗಕ್ಕೆ ಐದು ಬೇರೆ ಬೇರೆ ಪಾಲಿಸಿಗಳನ್ನು ಕೇಳಿದ್ದೇವೆ. ಅಗ್ರಿಕಲ್ಚರ್ ಅಂಡ್ ಅಲೈಡ್ ಸೆಕ್ಟರ್, ಇಂಡಸ್ಟ್ರಿಯಲ್ ಪಾಲಿಸಿ. ನಮಗೆ ಇಂಡಸ್ಟ್ರಿಯಲ್ ಪಾಲಿಸಿ ಒಂದು ಹೊಸದಾಗಿ ಮಾಡಿ ಕೊಡಬೇಕು ಎಂದು ಬೇಡಿಕೆ ಇಟ್ಟಿದ್ದೇವೆ ಅದು ಈಗ ಅನುಮೋದನೆ ಸಿಕ್ಕಿದೆ ಎಂದರು.

ಕಲಬುರಗಿ ಈಶಾನ್ಯವಲಯದ ಲೋಕೋಪಯೋಗಿ ಇಲಾಖೆಯ ಮುಖ್ಯ ಅಭಿಯಂತರರಾದ ಸುಭಾಷ್ ಶಿವಶಂಕರ ಮಾತನಾಡಿ, ಕೃಷಿ, ಕೈಗಾರಿಕೆ, ಶಿಕ್ಷಣ ಮತ್ತು ಪ್ರವಾಸೋದ್ಯಮ ಕ್ಷೇತ್ರಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಹೊಸ ನೀತಿಗಳನ್ನು ರೂಪಿಸಲಾಗಿದ್ದು, ಅವುಗಳ ಸಮರ್ಪಕ ಅನುಷ್ಠಾನಕ್ಕೆ ಇಂಜಿನಿಯರ್‌ಗಳ ತಾಂತ್ರಿಕ ನೈಪುಣ್ಯತೆ ಅವಶ್ಯಕವಾಗಿದೆ. ಈ ಭಾಗದ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರದ ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ಮಾಡಬೇಕಿದ್ದು, ಮುಂದಿನ ದಿನಗಳಲ್ಲಿ ಕಲ್ಯಾಣ ಕರ್ನಾಟಕವು ರಾಜ್ಯದ ಅತ್ಯಂತ ಅಭಿವೃದ್ಧಿಶೀಲ ಭಾಗವಾಗಿ ಹೊರಹೊಮ್ಮಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಬೆಳೆಯ ವಿವರಗಳನ್ನು ಆ್ಯಪ್‌ನಲ್ಲಿ ದಾಖಲಿಸಿ: ಜಿಲ್ಲಾಧಿಕಾರಿ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ ರೈತರು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ವಿವರಗಳನ್ನು ಬೆಳೆ ಸಮೀಕ್ಷೆ ಮೊಬೈಲ್ ಆಪ್ ನಲ್ಲಿ ದಾಖಲಿಸಬೇಕೆಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ ಅವರು ರೈತರಲ್ಲಿ ಮನವಿ ಮಾಡಿದ್ದಾರೆ.

ರೈತರು ಗೂಗಲ್ ಪ್ಲೇ ಸ್ಟೋರ್ ಅಥವಾ ಕ್ಯೂ ಆರ್ ಕೋಡ್ ನಿಂದ ಮುಂಗಾರು ಬೆಳೆ ಸಮೀಕ್ಷೆ ಆಪ್ ಡೌನಲೋಡ್ ಮಾಡಿಕೊಂಡು, ಸ್ವತ: ತಾವೇ ಬೆಳೆ ಸಮೀಕ್ಷೆ ಮಾಡಿ ತಮ್ಮ ಜಮೀನಿನಲ್ಲಿ ತಾವು ಬೆಳೆದ ಬೆಳೆ ವಿವರಗಳನ್ನು ದಾಖಲಿಸಬಹುದು.

ಬೆಳೆ ಸಮೀಕ್ಷೆ ತಂತ್ರಾಂಶ ಆಪ್ ತಂತ್ರಾಂಶನಲ್ಲಿ ದಾಖಲಾಗುವ ಮಾಹಿತಿಯನ್ನು ಬೆಳೆ ಸಾಲ, ಬೆಳೆ ವಿಮೆ,ಬೆಂಬಲ ಬೆಲೆ, ಖರೀದಿ,ಬೆಳೆ ಪರಿಹಾರ, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ವಿವಿಧ ಇಲಾಖೆಗಳ ಸವಲತ್ತುಗಳನ್ನು ಪಡೆಯಲು ಉಪಯೋಗಿಸಲಾಗುವುದು.



ಈ ನಿಟ್ಟಿನಲ್ಲಿ ಸ್ವತ: ರೈತರೇ ತಮ್ಮ ಮೊಬೈಲ್ ತಂತ್ರಾಂಶ (ಆಪ್) ಮೂಲಕ ಸಕಾಲಕ್ಕೆ ಬೆಳೆ ವಿವಿರಗಳನ್ನು ತಂತ್ರಾಂಶದಲ್ಲಿ ಅಪಲೋಡ್ ಮಾಡುವದರಿಂದ ನ್ಯೂನ್ಯತೆಗಳನ್ನು ಕಡಿಮೆ ಮಾಡಬಹುದು ಹಾಗೂ ಸೌಲಭ್ಯಗಳಿಂದ ವಂಚಿತರಾಗುವುದನ್ನು ತಪ್ಪಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಬರುವ ಆಗಸ್ಟ್ 31ರೊಳಗಾಗಿ ರೈತರು ಸ್ವತ: ತಮ್ಮ ಜಮೀನಿನ ಬೆಳೆ ಸಮೀಕ್ಷೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಒಂದು ವೇಳೆ ರೈತರು ತಮ್ಮ ಜಮೀನಿನ ಬೆಳೆ ಸಮೀಕ್ಷೆಯನ್ನು ತಾವೇ ಕೈಗೊಳ್ಳಲು ಸಾಧ್ಯವಾಗದಿದ್ದಲ್ಲಿ ತಮ್ಮ ಜಮೀನಿನಲ್ಲಿ ಬೆಳೆದ ವಿವಿಧ ಬೆಳೆಗಳ ಮಾಹಿತಿಯನ್ನು ಖಾಸಗಿ ನಿವಾಸಿಗಳ ಮುಖಾಂತರ ಖುದ್ದಾಗಿ ಕ್ಷೇತ್ರದಲ್ಲಿದ್ದು ದಿನಾಂಕ ಆಗಸ್ಟ್ 15 ರಿಂದ ಸೆಪ್ಟೆಂಬರ್ 30 ರೊಳಗಾಗಿ ನಿಖರವಾಗಿ ದಾಖಲಿಸಬಹುದಾಗಿದೆ ಎಂದವರು ತಿಳಿಸಿದ್ದಾರೆ.

ಜಿಲ್ಲೆಯ ರೈತರು ಈ ಯೋಜನೆಯ ಸದುಪಯೋಗ ಪಡೆದುಕೊಂಡು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ವಿವರಗಳನ್ನು ನಿಗದಿತ ಸಮಯದೊಳಗೆ ದಾಖಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಮ್ಮ ಗ್ರಾಮಕ್ಕೆ ನಿಯೋಜಿಸಲಾದ ಖಾಸಗಿ ನಿವಾಸಿ (ಪಿಆರ್)ಗಳನ್ನು ಅಥವಾ ಕೃಷಿ, ತೋಟಗಾರಿ-ಕೆ, ಕಂದಾಯ ಇಲಾಖೆಯ ಅಧಿಕಾರಿಗಳನ್ನು ಅಥವಾ ಸಹಾಯವಾಣಿ ಸಂಖ್ಯೆಗೆ 18004253553 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿಗೆ ರಾಜ್ಯಾದ್ಯಂತ ಸ್ಪಂದನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಪೊಲೀಸ್ ಇಲಾಖೆಯಲ್ಲಿನ ಖಾಲಿ ಇರುವ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ (CPC) ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ರಾಜ್ಯಾದ್ಯಂತ ಅಭ್ಯರ್ಥಿಗಳಿಂದ ಅತ್ಯಂತ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಇದು ಯುವಜನರಿಗೆ ಹೆಚ್ಚಿನ ಉದ್ಯೋಗಾವಕಾಶಗಳನ್ನು ಕಲ್ಪಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳ ಮೇಲೆ ಜನರ ವಿಶ್ವಾಸವನ್ನು ಪ್ರತಿಬಿಂಬಿಸುತ್ತದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಅಭ್ಯರ್ಥಿಗಳ ಮನವಿಯನ್ನು ಪರಿಗಣಿಸಿ, ಅರ್ಜಿ ಸಲ್ಲಿಸಲು ನಿಗದಿಪಡಿಸಿದ್ದ ಕೊನೆಯ ದಿನಾಂಕವನ್ನು ಸರ್ಕಾರ ವಿಸ್ತರಿಸಿದ್ದು, ಆನ್‌ಲೈನ್ ಅರ್ಜಿ ಸಲ್ಲಿಕೆಗೆ ಜುಲೈ 8, 2026 ಸಂಜೆ 4 ಗಂಟೆಯವರೆಗೆ



ಅವಕಾಶ ಕಲ್ಪಿಸಲಾಗಿದೆ. ಹಾಗೆಯೇ ಅರ್ಜಿ ತಿದ್ದುಪಡಿ ಮಾಡಲು 2026ರ ಜುಲೈ 9 ರಿಂದ ಜುಲೈ 12, 2026ರವರೆಗೆ ಅವಕಾಶ ನೀಡಲಾಗಿದೆ ಎಂದು ಸಚಿವರು ಹೇಳಿದ್ದಾರೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಸಹಯೋಗದಲ್ಲಿ ನಡೆಯುತ್ತಿರುವ ನೇಮಕಾತಿ ಪ್ರಕ್ರಿಯೆಯಲ್ಲಿ ಮೀಸಲು ಪೊಲೀಸ್ ಕಾನ್ಸಟೇಬಲ್ ವಿಭಾಗದ ಹುದ್ದೆಗಳಿಗೆ 2,80,216 ಅಭ್ಯರ್ಥಿಗಳು ಹಾಗೂ ಕಲ್ಯಾಣ ಕರ್ನಾಟಕ ವಿಭಾಗದ ಹುದ್ದೆಗಳಿಗೆ 59,309 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿರುವುದು ರಾಜ್ಯದ ಯುವಜನರಲ್ಲಿ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುವ ಉತ್ಸಾಹ ಹೆಚ್ಚಿರುವುದನ್ನು ತೋರಿಸುತ್ತದೆ ಎಂದು ಗೃಹ ಸಚಿವರು ಮಾಹಿತಿ ನೀಡಿದ್ದಾರೆ.

ರಾಜ್ಯದಲ್ಲಿ ಪೊಲೀಸ್ ಇಲಾಖೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಪಾರದರ್ಶಕ ಮತ್ತು ತಂತ್ರಜ್ಞಾನ ಆಧಾರಿತ ನೇಮಕಾತಿ ವ್ಯವಸ್ಥೆಯನ್ನು ಸರ್ಕಾರ ಜಾರಿಗೆ ತಂದಿದ್ದು, ಅರ್ಹ ಅಭ್ಯರ್ಥಿಗಳಿಗೆ ನ್ಯಾಯಸಮ್ಮತ ಅವಕಾಶ ದೊರಕುವಂತೆ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

ಯುವಜನರು ಯಾವುದೇ ಆತಂಕವಿಲ್ಲದೆ ನಿಗದಿತ ಅವಧಿಯೊಳಗೆ ಅರ್ಜಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ನೀಡಲಾಗಿರುವ ತಿದ್ದುಪಡಿ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ಮನವಿ ಮಾಡಿದ್ದಾರೆ.

ರಾಜ್ಯದ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಪಡೆ ಅತ್ಯಂತ ಪ್ರಮುಖ ಪಾತ್ರವಹಿಸುತ್ತಿದ್ದು, ಭವಿಷ್ಯದಲ್ಲಿ ಇನ್ನಷ್ಟು ಸಾಮರ್ಥ್ಯಯುತ ಹಾಗೂ ಜನಸ್ನೇಹಿ ಪೊಲೀಸ್ ವ್ಯವಸ್ಥೆ ನಿರ್ಮಾಣಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

# ದೇಶದಲ್ಲೇ ಮೊದಲು ರೈತರ ಸಾಂಪ್ರದಾಯಿಕ ಕೃಷಿಜ್ಞಾನಕ್ಕೆ ವಿವಿ ಪ್ರಮಾಣಪತ್ರ



### 8 ಸಾವಿರ ಎಕರೆಯಲ್ಲಿ ಸಾವಯವ ರಾಗಿ

**ಮಣ್ಣಿನಿಂದ ಶಾಲೆಗೆ,ಶಾಲೆಯಿಂದ ಸಮಾಜದ ಉನ್ನತಿಗೆ ಎಂಬ ಪರಿಕಲ್ಪನೆಯಡಿ ನಡೆದ ಸಮಾವೇಶದಲ್ಲಿ ತುಮಕೂರು,ಹಾಸನ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಸುಮಾರು 2 ಸಾವಿರ ರೈತರು ಭಾಗವಹಿಸಿದ್ದರು. ಈ ಮೂರು ಜಿಲ್ಲೆಗಳ ರೈತರು ಸುಮಾರು 8 ಸಾವಿರ ಎಕರೆಯಲ್ಲಿ ಸಾವಯವ ರಾಗಿ ಬೆಳೆದು 'ಸಾಯಿ ಶ್ಯೂರ್' ಯೋಜನೆಗೆ ಪೂರೈಕೆ ಮಾಡುತ್ತಿದ್ದಾರೆ ಎಂದು ಅನ್ನಪೂರ್ಣ ಟ್ರಸ್ಟ್ ಮುಖ್ಯಸ್ಥ ಭರಣಿ ಪ್ರಸಾದ್ ತಿಳಿಸಿದರು.ರೈತರು ತಾವು ಬೆಳೆದ ರಾಗಿ ಬೀಜವನ್ನು ಸದ್ಗುರು ಶ್ರೀ ಮಧುಸೂದನ ಸಾಯಿ ಅವರಿಗೆ ಸಾಂಕೇತಿಕವಾಗಿ ಸಮರ್ಪಿಸಿದರು.**

### ಸಿರಿಧಾನ್ಯಗಳ ರಾಯಭಾರಿ: ಶೋಭಾ ಕರಂದ್ಲಾಜೆ

**ಕಾರ್ಯಕ್ರಮದಲ್ಲಿ ಮಾತನಾಡಿದ ಕೇಂದ್ರ ಸಣ್ಣ ಮತ್ತು ಮಧ್ಯಮ ಕೈಗಾರಿಕಾ ಸಚಿವೆ ಶೋಭಾ ಕರಂದ್ಲಾಜೆ, ಆರೋಗ್ಯ,ಶಿಕ್ಷಣ ಹಾಗೂ ಸಾವಯವ ಕೃಷಿ ಕ್ಷೇತ್ರದಲ್ಲಿ ಸದ್ಗುರು ಶ್ರೀ ಮಧುಸೂದನ ಸಾಯಿ ಕ್ರಾಂತಿಕಾರಕ ಕಾರ್ಯ ಮಾಡುತ್ತಿದ್ದಾರೆ ಎಂದು ಶ್ಲಾಘಿಸಿದರು. ಅವರು ಈ ನಾಡಿನ ಆಧ್ಯಾತ್ಮಿಕ ಹಾಗೂ ಸಿರಿಧಾನ್ಯಗಳ ರಾಯಭಾರಿಯಾಗಿದ್ದಾರೆ.ಉಚಿತ ವೈದ್ಯಕೀಯ ಶಿಕ್ಷಣ ನೀಡುತ್ತಿರುವ ಏಕೈಕ ಸ್ವಾಮೀಜಿ ಎಂದು ವಿಶ್ವದ ಯಾವುದೇ ವೇದಿಕೆಯಲ್ಲಿ ಹೇಳಬಲ್ಲೆ ಎಂದು ಹೇಳಿದರು.**

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಸಾಂಪ್ರದಾಯಿಕ ಕೃಷಿಜ್ಞಾನ ಮತ್ತು ಪ್ರಾಯೋಗಿಕ ಕೌಶಲ್ಯವನ್ನು ಆಧರಿಸಿ ರಾಜ್ಯದ ರೈತರಿಗೆ ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ಮೂಲಕ ಪ್ರಮಾಣಪತ್ರ ನೀಡುವ ಮಹತ್ವಾಕಾಂಕ್ಷಿ ಯೋಜನೆಗೆ ಚಾಲನೆ ನೀಡಲಾಗುತ್ತಿದೆ ಎಂದು 'ಒಂದು ಜಗತ್ತು ಒಂದು ಕುಟುಂಬ' ಮಾನವೀಯ ಸೇವಾ ಅಭಿಯಾನದ ಸಂಸ್ಥಾಪಕ ಸದ್ಗುರು ಶ್ರೀ ಮಧುಸೂದನ ಸಾಯಿ ಘೋಷಿಸಿದರು.

ತಾಲೂಕಿನ ಮುದ್ದೇನಹಳ್ಳಿಯ ಸತ್ಯಸಾಯಿ ಗ್ರಾಮದಲ್ಲಿ 'ಸುಭಿಕ್ಷಾ ಆರ್ಗಾನಿಕ್ ಫಾರ್ಮರ್ಸ್ ಸೊಸೈಟಿ' ಮತ್ತು 'ಶ್ರೀ ಸತ್ಯ ಸಾಯಿ ಅನ್ನಪೂರ್ಣ ಟ್ರಸ್ಟ್' ಸಂಯುಕ್ತವಾಗಿ ಆಯೋಜಿಸಿದ್ದ ಸಾವಯವ ರಾಗಿ ಬೆಳೆಗಾರರ ವಾರ್ಷಿಕ ಸಮಾವೇಶದಲ್ಲಿ ಅವರು ಮಾತನಾಡಿದರು.

ಇದೇ ಜುಲೈ 29ರ ಗುರುಪೂರ್ಣಿಮೆಯಂದು ಮೊದಲ ಹಂತದಲ್ಲಿ 140 ರೈತರಿಗೆ ಪ್ರಮಾಣಪತ್ರ ವಿತರಿಸಲಾಗುವುದು. ಇಂತಹದೊಂದು ಪ್ರಯೋಗ ದೇಶದಲ್ಲಿ ಇದೇ ಮೊದಲು ಅನ್ನದಾತನಿಗೆ ಗೌರವ ನೀಡುವುದೇ ಈ ಯೋಜನೆಯ ಉದ್ದೇಶ ಎಂದು ಅವರು ಹೇಳಿದರು.

ತಲೆತಲಾಂತರಗಳಿಂದ ಬಂದಿರುವ ಕೃಷಿ ಜ್ಞಾನ ಮತ್ತು ಅನುಭವಕ್ಕೆ ಅಧಿಕೃತ ಮಾನ್ಯತೆ ನೀಡುವುದು ಈ ಯೋಜನೆಯ ಉದ್ದೇಶವಾಗಿದೆ.ವೈದ್ಯರು, ಶಿಕ್ಷಕರು, ಎಂಜಿನಿಯರ್‌ಗಳನ್ನು ನಾಲೆಡ್ಜ್ ಎಕಾನಮಿಯ ಭಾಗವಾಗಿ ಪರಿಗಣಿಸುವ ಸಮಾಜ,ರೈತರನ್ನು ಮಾತ್ರ ಲೇಬರ್ ಎಕಾನಮಿ'ಯ ದೃಷ್ಟಿಯಿಂದ ನೋಡುವುದು ಸರಿಯಲ್ಲ. ರೈತರ ಜ್ಞಾನ ಮತ್ತು ಕೌಶಲ್ಯಕ್ಕೂ ಸಮಾನ ಗೌರವ ದೊರೆಯಬೇಕು ಎಂದು ಸದ್ಗುರು ಹೇಳಿದರು.

ಈಗಾಗಲೇ 180 ರೈತರಿಗೆ ಪರೀಕ್ಷೆ ನಡೆಸಲಾಗಿದ್ದು, ಅವರಲ್ಲಿ 140 ಮಂದಿ ಅರ್ಹತೆ ಪಡೆದಿದ್ದಾರೆ. ರೈತರ ಪಾರಂಪರಿಕ ಕೃಷಿಜ್ಞಾನ ಮತ್ತು ಪ್ರಾಯೋಗಿಕ ಕೌಶಲ್ಯದ ಮೌಲ್ಯಮಾಪನದ ಆಧಾರದ ಮೇಲೆ ಪ್ರಮಾಣಪತ್ರ ನೀಡಲಾಗುವುದು.ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲ ರೈತರನ್ನೂ ಈ ಯೋಜನೆಯ ವ್ಯಾಪ್ತಿಗೆ ತರಲಾಗುವುದು ಎಂದು ಅವರು ತಿಳಿಸಿದರು.

**ಎರಡು ಕೋಟಿ ಮಕ್ಕಳಿಗೆ 'ಸಾಯಿ ಶ್ಯೂರ್' ಗುರಿ..**

ಶ್ರೀ ಸತ್ಯ ಸಾಯಿ ಅನ್ನಪೂರ್ಣ ಟ್ರಸ್ಟ್ ಮೂಲಕ ರಾಜ್ಯದ ಒಂದು ಕೋಟಿ ಸರಕಾರಿ ಶಾಲಾ ಮಕ್ಕಳಿಗೆ ಉಚಿತ ಪೌಷ್ಟಿಕ ಆಹಾರ 'ಸಾಯಿ ಶ್ಯೂರ್' ವಿತರಿಸಲಾಗುತ್ತಿದೆ. ಇದರ ತಯಾರಿಕೆಗೆ ಸಾವಯವ ರಾಗಿಯನ್ನು ರೈತರು ಪೂರೈಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಸದ್ಗುರು ಹೇಳಿದರು.ಮುಂದಿನ ದಿನಗಳಲ್ಲಿ ಈ ಯೋಜನೆಯನ್ನು ಎರಡು ಕೋಟಿ ಮಕ್ಕಳಿಗೆ ವಿಸ್ತರಿಸುವ ಗುರಿ ಹೊಂದಿದ್ದು, ಇದಕ್ಕಾಗಿ ಪ್ರತ್ಯೇಕ ಉತ್ಪಾದನಾ ಘಟಕ ಸ್ಥಾಪಿಸುವ ಯೋಜನೆಯೂ ಇದೆ ಎಂದು ತಿಳಿಸಿದರು.ಉತ್ತಮ ಗುಣಮಟ್ಟದ ರಾಗಿಯನ್ನು ಬೆಳೆಯುವ ರೈತರಿಗೆ ಅಗತ್ಯವಿದ್ದರೆ ಸಾಲ ಮಾಡಿಯಾದರೂ ಹಣ ನೀಡಲು ಸಿದ್ಧ.ರೈತರ ಮೇಲೆ ಸಾಲದ ಹೊರೆ ಬೀಳಬಾರದು ಎಂಬುದು ನಮ್ಮ ಆಶಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸುಭಿಕ್ಷಾ ಆರ್ಗಾನಿಕ್ ಫಾರ್ಮರ್ಸ್ ಸೊಸೈಟಿಯ ಅಧ್ಯಕ್ಷ ಆನಂದ ಆ.ಶ್ರೀ, ತಿಪಟೂರು ರಂಗಾಪುರ ಮಠದ ಶ್ರೀ ಗುರು ಪರದೇಶಿಕೇಂದ್ರ ಸ್ವಾಮೀಜಿ,ರಾಜ್ಯ ಕೃಷಿ ಇಲಾಖೆ ಕಾರ್ಯದರ್ಶಿ ಕ್ಯಾಪ್ಟನ್ ಡಾ. ಕೆ.ರಾಜೇಂದ್ರ,ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್.ವಿ.ಸುರೇಶ್ ಹಾಗೂ ಪ್ರಶಾಂತ ಬಾಲಮಂದಿರದ ಅಧ್ಯಕ್ಷ ಬಿ.ಎನ್.ನರಸಿಂಹಮೂರ್ತಿ ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)